ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೦

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೊಂಭತ್ತನೆ ಅಧಿವೇಶನ**

**ಸೋಮವಾರ, ದಿನಾಂಕ : ೨೪ನೇ ಆಗಸ್ಟ್, ೨೦೨೬**

---

## ಸಮೂಹ – I

೧. ಸಮಾಜ ಕಲ್ಯಾಣ ಸಚಿವರು

೨. ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

೩. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೪. ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು

೫. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೬. ಉನ್ನತ ಶಿಕ್ಷಣ ಸಚಿವರು

---

## ಗಿಡಗಳನ್ನು ನೆಡಲು ಅನುಮತಿ ನೀಡಿರುವ ಬಗ್ಗೆ

**ಶ್ರೀ ಎಂ. ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೧ (೯೫೧) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಬದಿಗಳಲ್ಲಿ ಸಂಬಂಧಿಸಿದ ಇಲಾಖೆಯಿಂದ ಗಿಡಗಳನ್ನು ನೆಡಲು ಅನುಮತಿ ಪಡೆಯಲಾಗಿದೆಯೇ: ಕಳೆದ ೩ ವರ್ಷದಿಂದ ಕೋಲಾರ ಜಿಲ್ಲೆಯಲ್ಲಿ ಈವರೆಗೂ ನೀಡಿರುವ ಅನುಮತಿ ಪತ್ರಗಳ ಸಂಖ್ಯೆ ಎಷ್ಟು ; (ಪತ್ರವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ರಸ್ತೆ ಅಭಿವೃದ್ಧಿಪಡಿಸುವಾಗ ಗಿಡ ಮರಗಳ ತೆರವುಗೊಳಿಸಲು ಸೂಚಿಸಿದಾಗ ಇಲಾಖಾವತಿಯಿಂದ ಹಣ ಪಾವತಿಸಲು ಇರುವ ಮಾನದಂಡಗಳೇನು ; ಯಾವ ಮಾನದಂಡದ ಮೇಲೆ ಸರ್ಕಾರದಿಂದ ಹಣ ಪಡೆಯಲಾಗುತ್ತಿದೆ ; ಸರ್ಕಾರದಿಂದ ೧ ಕಿ.ಮೀ ಗೆ ನಿಗಧಿಪಡಿಸಿರುವ ಮೊತ್ತವೆಷ್ಟು ; ಪಾವತಿಯಾಗಿರುವ ಹಣವನ್ನು ಯಾವ ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ವೇಮಗಲ್ ಮತ್ತು ಸೀತಿ ರಸ್ತೆಗೆ ಸಂಬಂಧಿಸಿದಂತೆ ಗಿಡ ಮರಗಳ ತೆರವುಗೊಳಿಸಲು ಲೋಕೋಪಯೋಗಿ ಇಲಾಖೆಯು ಅರಣ್ಯ ಇಲಾಖೆಗೆ ಸೂಚಿಸಿದ್ದು, ಅರಣ್ಯ ಇಲಾಖೆಯಿಂದ ಈವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ ; ಯಾವುದೇ ಕ್ರಮ ಕೈಗೊಳ್ಳದೇ ಇದ್ದಲ್ಲಿ, ಕ್ರಮ ಕೈಗೊಳ್ಳದೇ ಇರಲು ಕಾರಣವೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶಾಲೆ ಹಾಗೂ ಕಾಲೇಜುಗಳಲ್ಲಿನ ವಿದ್ಯಾಭ್ಯಾಸ ತೊರೆಯುತ್ತಿರುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೨ (೯೨೮) ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ವಿದ್ಯಾಭ್ಯಾಸ ತೊರೆದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಲಿಂಗವಾರು ಮಾಹಿತಿ ಒದಗಿಸುವುದು)

(ಆ) ಆರ್ಥಿಕ ಕಾರಣ, ವಿದ್ಯಾರ್ಥಿ ನಿಲಯದ ಕೊರತೆ, ಸಾರಿಗೆ ಸಮಸ್ಯೆ ಹಾಗೂ ಕುಟುಂಬದ ಪರಿಸ್ಥಿತಿಯಿಂದ ವಿದ್ಯಾಭ್ಯಾಸ ತೊರೆಯುತ್ತಿರುವ ವಿದ್ಯಾರ್ಥಿಗಳ ಕುರಿತು ಸರ್ಕಾರ ಅಧ್ಯಯನ ನಡೆಸಿದೆಯೇ ; ನಡೆಸಿದ್ದಲ್ಲಿ, ವರದಿ ಒದಗಿಸುವುದು ;

(ಇ) ಶಾಲೆ ಮತ್ತು ಕಾಲೇಜು ಮಟ್ಟದಲ್ಲಿ ವಿದ್ಯಾಭ್ಯಾಸ ತೊರೆಯುವ ವಿದ್ಯಾರ್ಥಿಗಳ ಪ್ರಮಾಣ ಹೆಚ್ಚಿರುವ ಜಿಲ್ಲೆಗಳನ್ನು ಗುರುತಿಸಿ ವಿಶೇಷ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆಯೇ ;

(ಈ) ವಿದ್ಯಾರ್ಥಿವೇತನ, ವಸತಿ, ಉಚಿತ ಸಾರಿಗೆ ಹಾಗೂ ಶೈಕ್ಷಣಿಕ ಪ್ರೋತ್ಸಾಹಧನದ ಮೂಲಕ ವಿದ್ಯಾರ್ಥಿಗಳನ್ನು ಶಿಕ್ಷಣದಲ್ಲಿ ಉಳಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೩ (೯೨೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೊರತೆ ನಿವಾರಿಸಲು ತೆಗೆದುಕೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ವಿದ್ಯಾರ್ಥಿ ನಿಲಯಗಳ ದುರಸ್ತಿ ಮತ್ತು ನವೀಕರಣ ಕಾಮಗಾರಿಗಳು ವಿಳಂಬವಾಗುತ್ತಿರುವುದಕ್ಕೆ ಇರುವ ಕಾರಣಗಳು ಯಾವುವು ; ಸದರಿ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ನಡೆಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ;

(ಈ) ಹಲವು ವಿದ್ಯಾರ್ಥಿ ನಿಲಯಗಳಲ್ಲಿ ವಾರ್ಡನ್ ಹಾಗೂ ಸಿಬ್ಬಂದಿ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಯಾವ ಯಾವ ಕ್ರಮಕೈಗೊಂಡಿದೆ ?

## ರಾಜ್ಯದ ಸರ್ಕಾರಿ ಉರ್ದು, ಕನ್ನಡ ಹಾಗೂ ಇತರೆ ಮಾಧ್ಯಮ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೪ (೯೩೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಉರ್ದು, ಕನ್ನಡ ಹಾಗೂ ಇತರೆ ಮಾಧ್ಯಮ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳ ಪೈಕಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಮಾಧ್ಯಮವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ನಿವೃತ್ತಿ, ಬಡ್ತಿ ವರ್ಗಾವಣೆ ಹಾಗೂ ಇತರೆ ಕಾರಣಗಳಿಂದ ಖಾಲಿಯಾದ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಮತ್ತು ಎಷ್ಟು ಹುದ್ದೆಗಳು ಇನ್ನೂ ಖಾಲಿ ಇವೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಹಾಗೂ ಪರೀಕ್ಷಾ ಫಲಿತಾಂಶದ ಮೇಲೆ ಉಂಟಾಗಿರುವ ಪರಿಣಾಮದ ಕುರಿತು ಸರ್ಕಾರ ಅಧ್ಯಯನ ನಡೆಸಿದೆಯೇ ; ನಡೆಸಿದ್ದಲ್ಲಿ, ಅದರ ಮಾಹಿತಿ ಒದಗಿಸುವುದು ;

(ಈ) ಖಾಲಿ ಹುದ್ದೆಗಳನ್ನು ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರ ಮೂಲಕ ಭರ್ತಿ ಮಾಡಲಾಗುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ; ಖಾಯಂ ಶಿಕ್ಷಕರ ನೇಮಕಾತಿಯನ್ನು ಯಾವ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಅರಣ್ಯ ಭೂಮಿ ಒತ್ತುವರಿ ಪ್ರಕರಣಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೫ (೯೨೭) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಅರಣ್ಯ ಭೂಮಿ ಒತ್ತುವರಿ ಸಂಬಂಧ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅರಣ್ಯ ಭೂಮಿಯ ಡಿಜಿಟಲ್ ಸಮೀಕ್ಷೆ (ಡ್ರೋನ್ ಸರ್ವೆ) ಮೂಲಕ ಒತ್ತುವರಿ ಪತ್ತೆ ಹಚ್ಚುವ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿರುವುದೇ ; ಇದ್ದಲ್ಲಿ ಮಾಹಿತಿ ಒದಗಿಸುವುದು ;

(ಇ) ಅರಣ್ಯ ಭೂಮಿ ಒತ್ತುವರಿಯನ್ನು ತಡೆಗಟ್ಟಲು ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಯ ನಡುವೆ ಸಮನ್ವಯ ವ್ಯವಸ್ಥೆಯನ್ನು ಬಲಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಅರಣ್ಯ ಭೂಮಿ ಒತ್ತುವರಿ ಹೆಚ್ಚು ಕಂಡುಬರುವ ಜಿಲ್ಲೆಗಳನ್ನು ಗುರುತಿಸಿ ವಿಶೇಷ ಕಾರ್ಯಪಡೆ (Special Task Force) ರಚಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಮಾಹಿತಿ ಒದಗಿಸುವುದು ?

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೬ (೯೫೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಮಾಧ್ಯಮವನ್ನು ಪರಿಚಿಸಿದ್ದರೂ ಸಹ, ೨೦೨೫-೨೬ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಸುಮಾರು ೬೬ ಸಾವಿರದಷ್ಟು ಮಕ್ಕಳ ದಾಖಲಾತಿ ಕುಸಿದಿರುವುದು ಮತ್ತು ಇದೇ ಅವಧಿಯಲ್ಲಿ ಖಾಸಗಿ ಶಾಲೆಗಳಲ್ಲಿ ದಾಖಲಾತಿ ಪ್ರಮಾಣ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಧಿಕಾರಿಗಳ ಪ್ರಕಾರ ಪ್ರೌಢ ಹಾಗೂ ಪದವಿ ಪೂರ್ವ ಹಂತದಲ್ಲಿ ಶಾಲೆಯಿಂದ

ಹೊರಗುಳಿಯುವವರ (ಡ್ರಾಪ್‌ಔಟ್) ಸಂಖ್ಯೆ ಹೆಚ್ಚುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಲ್ಲಿ ಡ್ರಾಪ್‌ಔಟ್ ಪ್ರಮಾಣವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕ್ಷೀಣಿಸಿದ ಕಾರಣಕ್ಕೆ ಶೂನ್ಯ ದಾಖಲಾತಿ ಹೊಂದಿದ್ದ ಶಾಲೆಗಳನ್ನು ಸಮೀಪದ ಶಾಲೆಗಳೊಂದಿಗೆ ವಿಲೀನಗೊಳಿಸಿದ ನಂತರ, ಪ್ರಸ್ತುತ ರಾಜ್ಯದಲ್ಲಿ ಉಳಿದಿರುವ ಶೂನ್ಯ ದಾಖಲಾತಿ ಶಾಲೆಗಳ ಸಂಖ್ಯೆ ಎಷ್ಟು ; ಇಂತಹ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ಮತ್ತು ಮೂಲಸೌಕರ್ಯ ಸುಧಾರಿಸಲು ಸರ್ಕಾರ ರೂಪಿಸಿರುವ ವಿಶೇಷ ಯೋಜನೆಗಳೇನು ?

## ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ದುರಸ್ತಿ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೭ (೯೧೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಪೈಕಿ ದುರಸ್ತಿ ಹಾಗೂ ನವೀಕರಣ ಅಗತ್ಯವಿರುವ ನಿಲಯಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ದುರಸ್ತಿಗಾಗಿ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಎಷ್ಟು ವಿದ್ಯಾರ್ಥಿ ನಿಲಯಗಳ ದುರಸ್ತಿ ಕಾಮಗಾರಿ ಪೂರ್ಣಗೊಂಡಿದೆ ಹಾಗೂ ಇನ್ನೂ ಎಷ್ಟು ನಿಲಯಗಳ ಕಾಮಗಾರಿ ಬಾಕಿ ಇದೆ ;

(ಆ) ಶಿವಮೊಗ್ಗ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ

ಪೈಕಿ ಶಿಥಿಲಾವಸ್ಥೆಯಲ್ಲಿರುವ, ದುರಸ್ತಿ ಅಗತ್ಯವಿರುವ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇರುವ ನಿಲಯಗಳ ತಾಲ್ಲೂಕುವಾರು ವಿವರವೇನು ; ಅವುಗಳ ದುರಸ್ತಿಗೆ ಅಂದಾಜು ಎಷ್ಟು ಅನುದಾನ ಅಗತ್ಯವಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ದುರಸ್ತಿ ಅಗತ್ಯವಿರುವ ವಿದ್ಯಾರ್ಥಿ ನಿಲಯಗಳಲ್ಲಿ ಕುಡಿಯುವ ನೀರು, ಶೌಚಾಲಯ, ಸ್ನಾನಗೃಹ, ವಿದ್ಯುತ್ ವ್ಯವಸ್ಥೆ, ಅಡುಗೆಮನೆ, ಕಟ್ಟಡದ ಮೇಲ್ಚಾವಣಿ ಹಾಗೂ ವಿದ್ಯಾರ್ಥಿಗಳ ಸುರಕ್ಷತೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆಯನ್ನು ಸರ್ಕಾರ ಗುರುತಿಸಿದೆಯೇ ; ಗುರುತಿಸಿದ್ದಲ್ಲಿ, ಅವುಗಳನ್ನು ಸರಿಪಡಿಸಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಏನು ;

(ಈ) ವಿದ್ಯಾರ್ಥಿ ನಿಲಯಗಳ ದುರಸ್ತಿ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನದ ಸಮರ್ಪಕ ಬಳಕೆ ಹಾಗೂ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಲು ಯಾವ ಅಧಿಕಾರಿಗಳಿಂದ ತಪಾಸಣೆ ನಡೆಸಲಾಗುತ್ತಿದೆ ; ಕಳೆದ ಮೂರು ವರ್ಷಗಳಲ್ಲಿ ಕಳಪೆ ಕಾಮಗಾರಿ ಅಥವಾ ಅನುದಾನ ದುರ್ಬಳಕೆ ಕಂಡುಬಂದಿರುವ ಪ್ರಕರಣಗಳ ಸಂಖ್ಯೆ ಎಷ್ಟು ಹಾಗೂ ಸಂಬಂಧಪಟ್ಟ ಗುತ್ತಿಗೆದಾರರು/ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮವೇನು ?

## ಡೀಮ್ಡ್ (Deemed) ಫಾರೆಸ್ಟ್ ರೈತರ ಕಂದಾಯ ಜಮೀನುಗಳ ಮೇಲಿನ ಪರಿಣಾಮ ನೋಟಿಫಿಕೇಶನ್ ಮತ್ತು ಸರ್ಕಾರದ ಕ್ರಮದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೮ (೯೧೪) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) Deemed ಫಾರೆಸ್ಟ್ ಎಂದರೇನು ; ಯಾವ ರೀತಿ ಪರಿಭಾಷಿಸಲಾಗಿದೆ ; ಪರಿಭಾವಿತ ಅರಣ್ಯ ಹಾಗೂ ಇತರೆ ಅರಣ್ಯ ಪ್ರದೇಶಗಳಿಗೆ ಇರುವ ವ್ಯತ್ಯಾಸಗಳೇನು ; ಪರಿಭಾವಿತ ಅರಣ್ಯ ಪ್ರದೇಶಕ್ಕೆ ಅರಣ್ಯ ಅಧಿನಿಯಮಗಳು ಅನ್ವಯವಾಗುತ್ತದೆಯೇ ; (ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು)

(ಆ) ಇದರ ಸಂಬಂಧ ಸುಪ್ರೀಂ ಕೋರ್ಟ್ ನೀಡಿರುವ ಆದೇಶವೇನು ; ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ಎಷ್ಟು ಎಕರೆ Deemed ಫಾರೆಸ್ಟ್ ಅಥವಾ ಪರಿಭಾವಿತ ಅರಣ್ಯ ಪ್ರದೇಶವೆಂದು ನೋಟಿಫೈ ಮಾಡಿ ಆದೇಶ ಹೊರಡಿಸಲಾಗಿದೆ ; (ವಿವರವಾಗಿ ಆದೇಶದ ಪ್ರತಿಯೊಂದಿಗೆ ತಾಲ್ಲೂಕು/ಗ್ರಾಮವಾರು ಸರ್ವೆ ನಂಬರ್ ಮತ್ತು ವಿಸ್ತೀರ್ಣದೊಂದಿಗೆ (ಎಕರೆ) ವಿವರವಾದ ಮಾಹಿತಿ ನೀಡುವುದು)

(ಈ) Deemed ಫಾರೆಸ್ಟ್ ನೋಟಿಫಿಕೇಶನ್ ಮಾಡುವಾಗ ರೈತರ ಕಂದಾಯ ಜಮೀನುಗಳು ಮತ್ತು ಸರ್ಕಾರದ ಕಂದಾಯ ಜಮೀನುಗಳನ್ನು ಯಾವುದೇ ಸೂಚನೆ ನೀಡದೆ ಸರ್ಕಾರ ತಾನಾಗಿಯೇ ನೋಟಿಫೈ ಮಾಡಿರುವುದು ನ್ಯಾಯ ಸಮ್ಮತವೇ ;

(ಉ) ಈ ಅನ್ಯಾಯವನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ಸರಿಪಡಿಸಿ ನ್ಯಾಯ ಒದಗಿಸಿ ಕೊಡುವುದು ?

## ಉನ್ನತ ಶಿಕ್ಷಣದಲ್ಲಿ NRI/OCI ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯ ಕುರಿತು

**ಡಾ. ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೭೯ (೯೪೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಹಾಗೂ ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ NRI/OCI ವಿದ್ಯಾರ್ಥಿಗಳಿಗೆ ಮೀಸಲಾದ ಸೀಟುಗಳ ಸಂಖ್ಯೆ ಎಷ್ಟು ; NRI/OCI ವಿದ್ಯಾರ್ಥಿಗಳಿಗೆ ಪ್ರತ್ಯೇಕ ಪ್ರವೇಶ ಮಾರ್ಗಸೂಚಿ ಇದೆಯೇ ; ಇದ್ದಲ್ಲಿ, ಕೋರ್ಸ್‌ವಾರು ವಿವರ ನೀಡುವುದು ಮತ್ತು ಈ ಸೀಟುಗಳ ಭರ್ತಿ ಪ್ರಮಾಣದ ಮಾಹಿತಿ ಒದಗಿಸುವುದು ;

(ಆ) NRI/OCI ವಿದ್ಯಾರ್ಥಿಗಳಿಗೆ ವಿಧಿಸಲಾಗುವ ಶುಲ್ಕಗಳು ಸಾಮಾನ್ಯ ವಿದ್ಯಾರ್ಥಿಗಳಗಿಂತ ಹೆಚ್ಚು ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಶುಲ್ಕ ನಿಯಂತ್ರಣಕ್ಕೆ ಕ್ರಮಗಳೇನು ; ಶುಲ್ಕಗಳ ಗರಿಷ್ಠ ಮಿತಿ ನಿಗದಿ ಮಾಡುವ ಯೋಜನೆ ಇದೆಯೇ ; ಕರ್ನಾಟಕ ಮೂಲದ NRI ಮಕ್ಕಳಿಗೆ ವಿಶೇಷ ಶುಲ್ಕ ಸಡಿಲಿಕೆ ನೀಡುವ ಯೋಜನೆ ಇದೆಯೇ ;

(ಇ) NRI/OCI ವಿದ್ಯಾರ್ಥಿಗಳಿಗೆ ರಾಜ್ಯದಲ್ಲಿ ವಿದ್ಯಾರ್ಥಿವೇತನ ಅಥವಾ ಆರ್ಥಿಕ ಸಹಾಯ ಯೋಜನೆಗಳಿವೆಯೇ ; (ಮಾಹಿತಿ ನೀಡುವುದು)

(ಈ) ಮೆರಿಟ್ ಆಧಾರಿತ ವಿದ್ಯಾರ್ಥಿವೇತನ ಯೋಜನೆ ರೂಪಿಸುವ ಬಗ್ಗೆ ಸರ್ಕಾರದ ಯೋಜನೆ ಏನು ; ಗಲ್ಫ್ ದೇಶಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಮಕ್ಕಳಿಗೆ ವಿಶೇಷ ಸಹಾಯ ನೀಡುವ ಯೋಜನೆ ಇದೆಯೇ ;

(ಉ) NRI/OCI ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆಯಲ್ಲಿ ಎದುರಾಗುವ ದಾಖಲೆ ಸಮಸ್ಯೆಗಳ ಕುರಿತು ಸರ್ಕಾರ ಕೈಗೊಂಡ ಕ್ರಮಗಳ ವಿವರಗಳನ್ನು ಒದಗಿಸುವುದು ;

(ಊ) ವಿದೇಶಿ ಶಿಕ್ಷಣ ಪದವಿಗಳ ಸಮಾನತೆ (Equivalency) ಪ್ರಮಾಣೀಕರಣ ಪ್ರಕ್ರಿಯೆಯನ್ನು ಸರಳೀಕರಿಸುವ ಯೋಜನೆ ಇದೆಯೇ ;

(ಋ) ರಾಜ್ಯದ ವೃತ್ತಿಪರ ಕೋರ್ಸ್‌ಗಳಲ್ಲಿ (Medical & Allied Health Engineering) NRI ವಿದ್ಯಾರ್ಥಿಗಳಿಗೆ ಇರುವ ಮೀಸಲು ಪ್ರಮಾಣ ಮತ್ತು ಭರ್ತಿ ವಿವರವನ್ನು ನೀಡುವುದು ?

## ಕೊಳವೆ ಬಾವಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೦ (೮೪೦) ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಲ್ಲಿ ಕೊಳವೆ ಬಾವಿಗೆ ಅರ್ಜಿ ಸಲ್ಲಿಸಿದವರ ಎಸ್.ಟಿ ಪಂಗಡದ ಜನಾಂಗದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ಪರಿಶಿಷ್ಟ ಪಂಗಡದ ಜನಾಂಗದವರಿಗೆ ಮಂಜೂರು ಮಾಡಿದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ ; ಕೊಳವೆ ಬಾವಿ ಕೊರೆಸಲು ಬಾಕಿ ಇರುವ ಸಂಖ್ಯೆ ಎಷ್ಟು ;

(ಈ) ಬಾಕಿ ಇರುವ ಕೊಳವೆ ಬಾವಿಗಳನ್ನು ಕೊರೆಯಿಸಲು ಇರುವ ಸಮಸ್ಯೆಗಳೇನು ?

## P.hd ನಕಲಿ ಅಂಕಪಟ್ಟಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೧ (೮೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ದಾಖಲಾದ P.hd ನಕಲಿ ಅಂಕಪಟ್ಟಿಗಳ ಪ್ರಕರಣ ಎಷ್ಟು ; ತನಿಖೆಯಲ್ಲಿ ಪತ್ತೆಯಾದ ನಕಲಿ ಅಂಕಪಟ್ಟಿಯ ವಿವರ ನೀಡುವುದು ;

(ಆ) ನಕಲಿ ಅಂಕಪಟ್ಟಿ ನೀಡಿದ ಎಷ್ಟು ಜನ ಅಧಿಕಾರಿ/ನೌಕರರುಗಳ ಮೇಲೆ ಪ್ರಕರಣ ದಾಖಲಾಗಿದೆ ;

(ಇ) ನಕಲಿ ಅಂಕಪಟ್ಟಿ ನೀಡುತ್ತಿರುವ ಜಾಲ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ;

(ಈ) ಪ್ರಕರಣ ದಾಖಲಾದವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ ?

## ಕಾಲೇಜು ಅಭಿವೃದ್ಧಿ ಸದಸ್ಯರ ನೇಮಕ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೨ (೮೪೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸದಸ್ಯರನ್ನು ನೇಮಕ ಮಾಡಲಾಗಿದೆಯೇ ;

(ಆ) ರಾಜ್ಯದಲ್ಲಿ ಪ್ರಥಮ ದರ್ಜೆ ಕಾಲೇಜು ಅಭಿವೃದ್ಧಿ ಸಮಿತಿಗಳ ಸಂಖ್ಯೆ ಎಷ್ಟು ;

(ಇ) ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು ಇರದೆ ಇರುವ ಕಾಲೇಜುಗಳ ಸಂಖ್ಯೆ ಎಷ್ಟು ;

(ಈ) ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರನ್ನು ಯಾರು ಆಯ್ಕೆ ಮಾಡುತ್ತಾರೆ, ಸಮಿತಿ ಸದಸ್ಯರ ಕರ್ತವ್ಯಗಳೇನು ; (ವಿವರ ನೀಡುವುದು)

(ಉ) ಒಂದು ವರ್ಷದಲ್ಲಿ ಕನಿಷ್ಠ ಎಷ್ಟು ಕಾಲೇಜು ಅಭಿವೃದ್ಧಿ ಸಮಿತಿ ಸಭೆಗಳು ಸೇರಬೇಕು ; (ವಿವರ ನೀಡುವುದು)

(ಊ) ಕಾಲೇಜು ಅಭಿವೃದ್ಧಿ ಸಮಿತಿ ನಡೆಯದೆ ಇರುವ ಕಾಲೇಜುಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿಧಾನ ಸಭಾವಾರು ಮಾಹಿತಿ ನೀಡುವುದು)

## ಮಹಿಳಾ ಪ್ರಥಮ ದರ್ಜೆ ಕಾಲೇಜು ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೩ (೮೪೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸ್ವಂತ ಕಟ್ಟಡ ಹೊಂದಿರುವ ಸ್ವಂತ ಕಟ್ಟಡ ಹೊಂದದೆ ಇರುವ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ;

(ಇ) ಶಿವಮೊಗ್ಗ ನಗರದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ಸ್ಥಳ ಮಂಜೂರಾದರೂ ಸಹ ಕಾಲೇಜಿನ ಹೆಸರಿಗೆ ಖಾತೆ ದಾಖಲು ಮಾಡದೆ ಇರುವುದರ ಸಮಸ್ಯೆಗಳೇನು ;

(ಈ) ಶಿವಮೊಗ್ಗ ನಗರದ ಬಿ.ಹೆಚ್. ರಸ್ತೆಯಲ್ಲಿರುವ ಹಿರಿಯ ಪ್ರಾಥಮಿಕ ಶಾಲೆಯ ಹೆಣ್ಣುಮಕ್ಕಳ ಪ್ರೌಢ ಶಾಲೆ ಆವರಣದ ೦.೨೭ ಗುಂಟೆ ಜಾಗ ಖಾತೆ ಮಾಡಲು ಇನ್ನು ಎಷ್ಟು ಸಮಯ ಬೇಕಾಗುತ್ತದೆ ;

(ಉ) ಶಿವಮೊಗ್ಗ ಮಹಿಳಾ ಪ್ರಥಮ ದರ್ಜೆ ಕಾಲೇಜು ಕಟ್ಟಡಕ್ಕೆ ಮಂಜೂರಾದ ಅನುದಾನ ಎಷ್ಟು ; (ವಿವರ ನೀಡುವುದು)

(ಊ) ಎಷ್ಟು ದಿನದ ಒಳಗಾಗಿ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಾರಂಭಿಸಲಾಗುವುದು ?

## ಹಿರಿಯ ನಾಗರೀಕರ ದೂರುಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೪ (೮೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ಹಿರಿಯ ನಾಗರೀಕ ಸಬಲೀಕರಣ ಇಲಾಖೆಗೆ ಸಲ್ಲಿಕೆಯಾದ ದೂರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಲ್ಲಿಕೆಯಾದ ದೂರುಗಳಲ್ಲಿ ಇತ್ಯರ್ಥವಾದ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ದೂರುಗಳನ್ನು ಇತ್ಯರ್ಥಪಡಿಸಲು ಬಾಕಿ ಇರುವ ಅರ್ಜಿಗಳೆಷ್ಟು ;

(ಈ) ಬಾಕಿಯಿರುವ ಅರ್ಜಿಗಳನ್ನು ಇತ್ಯರ್ಥ ಪಡಿಸದಿರಲು ಕಾರಣಗಳೇನು ; (ವಿವರ ನೀಡುವುದು)

(ಉ) ದೂರುಗಳನ್ನು ಬಗೆಹರಿಸಲು ಇರುವ ಕಾನೂನುಗಳಾವುವು ? (ವಿವರ ನೀಡುವುದು)

## ಡಿಪ್ಲೋಮಾ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೫ (೮೮೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಹೊಸ ಡಿಪ್ಲೋಮಾ ಕಾಲೇಜುಗಳನ್ನು ಮಂಜೂರು ಮಾಡಲು ಇರುವ ಮಾನದಂಡಗಳೇನು ;

(ಆ) ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿಗೆ ಈವರೆಗೂ ಸರ್ಕಾರದಿಂದ ಡಿಪ್ಲೋಮಾ ಕಾಲೇಜು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದ್ದಲ್ಲಿ, ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕು ಡಿಪ್ಲೊಮಾ ಕಾಲೇಜನ್ನು ಮಂಜೂರು ಮಾಡಲು ಪೂರೈಸದಿರುವ ಅಗತ್ಯ ಮಾನದಂಡಗಳೇನು ;

(ಈ) ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಡಿಪ್ಲೊಮಾ ಕಾಲೇಜನ್ನು ತೆರೆಯಲಾಗುವುದು ?

## ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೬ (೮೮೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲೇ ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರದಿಂದ ಯಾವ ಕ್ರಮವಹಿಸಲಾಗಿದೆ ;

(ಇ) ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿನಲ್ಲಿ ಈವರೆಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡದಿರಲು ಇರುವ ಪ್ರಮುಖ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಖಾಲಿಯಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೭ (೮೮೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಸದರಿ ಶಾಲೆಗಳಲ್ಲಿನ ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ನಡುವಿನ ಅನುಪಾತವೆಷ್ಟು ;

(ಇ) ತಾಲ್ಲೂಕಿನ ಎಲ್ಲಾ ಶಾಲೆಗಳಿಂದ ಒಟ್ಟು ಖಾಲಿಯಿರುವ ಮಂಜೂರಾತಿ ಶಿಕ್ಷಕರ ಹುದ್ದೆಗಳು ಎಷ್ಟು ;

(ಈ) ಖಾಲಿ ಶಿಕ್ಷಕರ ಹುದ್ದೆಗಳನ್ನು ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುತ್ತದೆ ?

## ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳನ್ನು ಯೋಜನೆಯಿಂದ ಕೈಬಿಟ್ಟಿರುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೮ (೮೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ೨೦೨೩ ರಿಂದ ಮೇ–೨೦೨೬ರವರೆಗೆ ಒಟ್ಟು ಎಷ್ಟು ಹಣ ಸಿಂಧನೂರು ತಾಲ್ಲೂಕಿನ ಗೃಹಲಕ್ಷ್ಮಿ ಫಲಾನುಭವಿಗಳ ಖಾತೆಗೆ ಜಮೆಯಾಗಿದೆ ;

(ಇ) ಇತ್ತೀಚಿಗೆ ಸಿಂಧನೂರು ತಾಲ್ಲೂಕಿನ ಎಷ್ಟು ಜನ ಮಹಿಳಾ ಫಲಾನುಭವಿಗಳನ್ನು ಗೃಹಲಕ್ಷ್ಮಿ ಯೋಜನೆಯಿಂದ ಕೈಬಿಡಲಾಗಿದೆ ;

(ಈ) ಫಲಾನುಭವಿಗಳನ್ನು ಗೃಹಲಕ್ಷ್ಮಿ ಯೋಜನೆಯಿಂದ ಕೈಬಿಡಲು ಪ್ರಮುಖವಾಗಿರುವ ಕಾರಣಗಳೇನು ?

## ಅರಣ್ಯ ಪ್ರದೇಶವನ್ನು ಗುರುತಿಸುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೯ (೮೯೦) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಹಾಗೂ ಕಂದಾಯ ಇಲಾಖೆಗಳ ಜಂಟಿ ಸಮಿತಿಯೊಂದಿಗೆ ರಾಯಚೂರು ನಗರದ ಸುತ್ತಮುತ್ತಲು ಇರುವ ಅರಣ್ಯ ಪ್ರದೇಶವನ್ನು ಗುರುತಿಸಿ ಸರ್ವೆ ಮಾಡಿ ವರದಿ ನೀಡಲು ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸದರಿ ವರದಿಯಲ್ಲಿ ಅರಣ್ಯ ಇಲಾಖೆಗೆ ಸಂಬಂಧಪಟ್ಟ ಗುರುತಿಸಿರುವಂತಹ ವಿವರಗಳೇನು ;

(ಆ) ಈ ವರದಿ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಜಿಲ್ಲಾ ನ್ಯಾಯಾಲಯ ಸಂಕೀರ್ಣ ಹಾಗೂ ಅಸೋಸಿಯೇಷನ್ ಕಟ್ಟಡಗಳ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೦ (೮೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿ ನೂತನ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಕಾಮಗಾರಿಯು ಪ್ರಸ್ತುತೆ ಯಾವ ಹಂತದಲ್ಲಿ ಇದೆ ; ಸದರಿ ಕಾಮಗಾರಿಯನ್ನು ಕಾಲಮಿತಿ ಅವಧಿಯಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ "ಬಾರ್ ಆಸೋಸಿಯೇಷನ್" ಕಟ್ಟಡ ಕಾಮಗಾರಿ ಯಾವ ಹಂತದಲ್ಲಿ ಇದೆ ; ಕಾಲಮಿತಿ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಪದೋನ್ನತಿ ನೀಡದೆ ಇರುವ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೪೧ (೯೫೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಆದೇಶ ಸಂಖ್ಯೆ:ED522 TPU90 ಬೆಂಗಳೂರು ದಿನಾಂಕ:೦೯.೦೭.೧೯೯೨. ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದ್ದು ಪ್ರಸ್ತುತ ಚಾಲ್ತಿಯಲ್ಲಿದೆಯೇ ; ಚಾಲ್ತಿಯಲ್ಲಿದ್ದರೆ, ಯಾವ ಕಾರಣಕ್ಕಾಗಿ ಉಪನ್ಯಾಸಕರಿಗೆ ಸೀನಿಯರ್ ಲೆಕ್ಚರರ್, ಸೆಲೆಕ್ಷನ್ ಗ್ರೇಡ್ ಲೆಕ್ಚರರ್ ಆಗಿ ಪದೋನ್ನತಿ ನೀಡುತ್ತಿಲ್ಲ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ೧೦ ವರ್ಷದ ಕಾಲಮಿತಿ ಬಡ್ತಿ ಮತ್ತು ೨೦ ವರ್ಷದ ಹೆಚ್ಚುವರಿ ೧ನೇ ವೇತನ ಬಡ್ತಿಗೆ ಸಂಬಂಧಿಸಿದಂತೆ ಸುರೇಂದ್ರನಾಥ ವರದಿ ಹಾಗೂ ಸರ್ಕಾರಿ ಆದೇಶ ಸಂಖ್ಯೆ ED522 TPU90ಗೆ ಇರುವ ಸಂಬಂಧವೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ೧೯೯೫ರ ನಂತರ ಎಲ್ಲಾ ಅನುದಾನ ರಹಿತ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು

**ಡಾ. ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೭೪೨ (೯೨೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫ರ ನಂತರದ ಎಲ್ಲಾ ಅನುದಾನ ರಹಿತ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅನುದಾನಕ್ಕೆ ಒಳಪಡಿಸಲು ಸರ್ಕಾರವು ಕ್ರಮ ಕೈಗೊಳ್ಳುವುದು ; ( ವಿವರ ನೀಡುವುದು)

(ಇ) ರಾಜ್ಯದಲ್ಲಿ ೧೯೯೫ರ ನಂತರದ ಅನುದಾನದಕ್ಕೆ ಒಳಪಟ್ಟಿರುವ ಶಾಲೆಯ ಸಂಖ್ಯೆ ಹಾಗೂ ಅನುದಾನಕ್ಕೆ ಒಳಪಡದೇ ಇರುವ ಶಾಲೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## (C-PET) ಕಾಮಗಾರಿ ಕುರಿತು

**ಡಾ. ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೭೪೩ (೯೨೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಔರಾದ್ ತಾಲ್ಲೂಕಿನ ಬಲ್ಲೂರ್ (ಜೆ) ಗ್ರಾಮದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಆಯೋಗದಲ್ಲಿ ಸಿಪೇಟ್ (C-PET) ಕೇಂದ್ರಕ್ಕೆ ಅಡಿಗಲ್ಲು ಹಾಕಲಾಗಿತ್ತು; ಕಾಮಗಾರಿ ಆರಂಭವಾಗಿಲ್ಲದಿರುವುದಕ್ಕೆ ಕಾರಣಗಳೇನು ;

(ಆ) ಈ ಕೇಂದ್ರವನ್ನು ಯಾವ ಉದ್ದೇಶಕ್ಕೆ ಸ್ಥಾಪಿಸಲು ಸರ್ಕಾರ ಮುಂದಾಗಿದೆ ?

# ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರಿಗೆ ಗ್ರಾಚ್ಯುಟಿ ಹಣ ನೀಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೭೪೪ (೯೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; ಸದರಿ ಅಂಗನವಾಡಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೧ ರಿಂದ ಇಲ್ಲಿಯವರೆಗೆ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ಯಾವ ದಿನಾಂಕದಿಂದ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಗ್ರಾಚ್ಯುಟಿ ಪಡೆಯಲು ಅರ್ಹರಿದ್ದಾರೆ ; ಆದರೆ ರಾಜ್ಯ ಸರ್ಕಾರ ಯಾವ ದಿನಾಂಕದಿಂದ ನಿವೃತ್ತರಾದವರಿಗೆ ಗ್ರಾಚ್ಯುಟಿ ಪಾವತಿಸಿದೆ ;

(ಈ) ತುಮಕೂರು ಜಿಲ್ಲೆಯ ಅಂಗನವಾಡಿ ಕಾರ್ಯಕರ್ತೆಯರ ಮನವಿಗೆ ಹೈಕೋರ್ಟ್ ಸಹ ಸುಪ್ರಿಂ ಕೋರ್ಟ್‌ನ ತೀರ್ಪು ಪಾಲಿಸುವಂತೆ ಆದೇಶಿಸಿದೆ ; ಆದೇಶಿಸಿದ್ದರೆ, ನ್ಯಾಯಾಲಯದ ಆದೇಶದಂತೆ ೨೦೧೧ ರಿಂದ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಗ್ರಾಚ್ಯುಟಿ ಪಾವತಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ೨೦೨೩-೨೪ನೇ ಗಸ್ತು ಅರಣ್ಯಪಾಲಕ ನೇಮಕಾತಿ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೭೪೫ (೯೪೫) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನಲ್ಲಿ ೫೪೦ ಗಸ್ತು ಅರಣ್ಯ ಪಾಲಕ (ಅರಣ್ಯ ರಕ್ಷಕ) ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆ ಹೊರಡಿಸಲಾಗಿತ್ತು, ಈ ಪೈಕಿ ಎಷ್ಟು ಗಸ್ತು ಅರಣ್ಯ ಪಾಲಕರಿಗೆ ನೇಮಕಾತಿ ಆದೇಶ ನೀಡಲಾಗಿದೆ ;

(ಆ) ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳ ಪೈಕಿ ಅಂಗವಿಕಲ ಕೋಟಾದಡಿ ಎಷ್ಟು ಜನ ನೇಮಕಾತಿ ಹೊಂದಿರುತ್ತಾರೆ ; (ವಿಭಾಗವಾರು ಮಾಹಿತಿ ನೀಡುವುದು)

(ಇ) ಅಂಗವಿಕಲ ಕೋಟಾದಡಿ ನೇಮಕಾತಿ ಹೊಂದಿರುವ ಎಲ್ಲಾ ಅಭ್ಯರ್ಥಿಗಳ ವೈದ್ಯಕೀಯ ಪ್ರಮಾಣ ಪತ್ರದ ಪ್ರತಿ ನೀಡುವುದು ಹಾಗೂ ವೈದ್ಯಕೀಯ ಪ್ರಮಾಣ ಪತ್ರ ಸಿಂಧುತ್ವಗೊಂಡಿರುವ ಸಿಂಧುತ್ವದ ಪ್ರತಿ ನೀಡುವುದು ?

## ಕಾಡುಗೊಲ್ಲ ಸಮುದಾಯಕ್ಕೆ ಈ ಹಿಂದಿನ ಮೀಸಲಾತಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೭೪೬ (೯೪೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆದೇಶ ಸಂಖ್ಯೆ: ಸಕಿ೨೨೫ ಬಿಸಿಎ ೨೦೦೦ ದಿನಾಂಕ: ೩೦/೦೩/೨೦೦೨ ಹಿಂದುಳಿದ ವರ್ಗದ ಪ್ರವರ್ಗ-೧ ರ ಪಟ್ಟಿಯ ಕ್ರಮ ಸಂಖ್ಯೆ: ೮೬ (ಡಬ್ಲ್ಯೂ) ನಂತರದ ಕ್ರಮಸಂಖ್ಯೆ: ೮೬ (ಎಕ್ಸ್) ರಲ್ಲಿ ಕಾಡುಗೊಲ್ಲ ಎಂಬ ಪರ್ಯಾಯ ಪದವನ್ನು ಸರ್ಕಾರಿ ಆದೇಶ ಸಂಖ್ಯೆ ಹಿಂವಕ ೩೨೮ ಬಿಸಿಎ ೨೦೧೭ ದಿ: ೨೯.೦೧.೨೦೧೮ ರಂತೆ ಸೇರ್ಪಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾಡುಗೊಲ್ಲ ಸಮುದಾಯ ಹಿಂದುಳಿದ ವರ್ಗದ ಜಾತಿ ಪಟ್ಟಿಗೆ ಸೇರಿದ ದಿನಾಂಕ: ೨೯/೦೧/೨೦೧೮ ರ ಮೊದಲು ೧೯೬೬ ರಿಂದ ಅಲೆಮಾರಿ-ಅರೆ ಅಲೆಮಾರಿ ಪಟ್ಟಿಯಲ್ಲಿದ್ದು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮೀಸಲಾತಿ ಹಿಂದುಳಿದ ವರ್ಗ "ಅ" ಕೇಂದ್ರ ಸರ್ಕಾರ ಒಬಿಸಿ ಮೀಸಲಾತಿ ಸೌಲಭ್ಯಗಳನ್ನು ಪಡೆಯುತ್ತಿದ್ದು ಈಗ ಇವುಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರಿ ದಾಖಲೆಗಳಲ್ಲಿ ಹಿಂದುಳಿದ ವರ್ಗದ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯದ ಜನಸಂಖ್ಯೆಯಲ್ಲಿ ಕಾಡುಗೊಲ್ಲ ಸಮುದಾಯವೇ ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ೮೦% ರಷ್ಟು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅಲೆಮಾರಿ ಅರೆ-ಅಲೆಮಾರಿ ಸೌಲಭ್ಯ ಸ್ಥಳೀಯ ಸಂಸ್ಥೆ ಚುನಾವಣೆ ಹಿಂದುಳಿದ ವರ್ಗ ಅ ಮೀಸಲಾತಿ ಕೇಂದ್ರ ಸರ್ಕಾರದ ಒ.ಬಿ.ಸಿ ಮೀಸಲಾತಿ ಇವುಗಳನ್ನು ಕಾಡುಗೊಲ್ಲ ಸಮುದಾಯಕ್ಕೆ ಜಾತಿ ಪಟ್ಟಿಗೆ ಸೇರುವ ಮೊದಲಿನಂತೆ ಮುಂದುವರಿಸಲು ಸರ್ಕಾರಕ್ಕೆ ಇರುವ ಅಡ್ಡಿಗಳೇನು ;

(ಉ) ಈ ಮೇಲಿನ ಎಲ್ಲಾ ಸೌಲಭ್ಯ ಮತ್ತು ರಿಯಾಯಿತಿಗಳನ್ನು ಮೊದಲಿನಂತೆಯೇ ಮುಂದುವರಿಸಲು ಸರ್ಕಾರ ಕೈಗೊಳ್ಳಲು ಕ್ರಮಗಳೇನು ?

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಕಟ್ಟಡ ದುರಸ್ತಿಗೊಳಿಸುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೭೪೭ (೯೩೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ ; ಈ ಪೈಕಿ ಅಪಾಯದ ಸ್ಥಿತಿಯಲ್ಲಿರುವ ಮತ್ತು ಶಿಥಿಲಗೊಂಡಿರುವ ಕಟ್ಟಡ ಹಾಗೂ ಕೊಠಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಕಟ್ಟಡಗಳ ಮತ್ತು ಶಾಲಾ ಕೊಠಡಿಗಳ ದುರಸ್ತಿಗೆ ಸರ್ಕಾರ ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ; ಇದೇ ಅವಧಿಯಲ್ಲಿ ಎಷ್ಟು ಶಾಲೆಗಳ ಕಟ್ಟಡ ಹಾಗೂ ಕೊಠಡಿಗಳ ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆ ; ಪ್ರಗತಿಯಲ್ಲಿರುವ/ಪೂರ್ಣಗೊಂಡಿರುವ ಕಟ್ಟಡ ಹಾಗೂ ಕೊಠಡಿಗಳ ವಿವರವನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು ;

(ಇ) ಕಳೆದ ೩ ವರ್ಷಗಳಿಂದ ಹೊಸದಾಗಿ ಎಷ್ಟು ಶಾಲಾ ಕಟ್ಟಡಗಳನ್ನು ಮತ್ತು ಕೊಠಡಿಗಳನ್ನು ನಿರ್ಮಿಸಲಾಗಿದೆ ; ಇದಕ್ಕಾಗಿ ಮಂಜೂರು, ಬಿಡುಗಡೆ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಈ) ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಶಾಲೆಗಳಲ್ಲಿರುವ ಶಿಥಿಲ ಕೊಠಡಿಗಳ ದುರಸ್ತಿಗೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಹೊಸ ಕೊಠಡಿಗಳ ನಿರ್ಮಾಣಕ್ಕೆ ಅಗತ್ಯವಿರುವ ಹಣ ಎಷ್ಟು ; ಅಗತ್ಯ ಹಣ ಲಭ್ಯ ಇದೆಯೇ ; ಹಾಗಿದ್ದಲ್ಲಿ, ಕೊಠಡಿಗಳ ದುರಸ್ತಿಗೆ ಮತ್ತು ಹೊಸ ಕೊಠಡಿಗಳ ನಿರ್ಮಾಣಕ್ಕೆ ಕೈಗೊಂಡಿರುವ ಕ್ರಮವೇನು ; ಹಾಕಿಕೊಂಡಿರುವ ಯೋಜನೆಗಳೇನು ?

## ಹಿಂದುಳಿದ ವರ್ಗಗಳ ಇಲಾಖೆಯಡಿ ಇರುವ ಹಾಸ್ಟೆಲ್‌ಗಳ ಸಮಸ್ಯೆಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೭೪೮ (೯೩೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳಲ್ಲಿ ಅಗತ್ಯ ಮೂಲಸೌಕರ್ಯ ಇಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿರುವ ಒಟ್ಟು ವಸತಿ ನಿಲಯ (ಹಾಸ್ಟೆಲ್)ಗಳ ಸಂಖ್ಯೆ ಎಷ್ಟು ; (ಬಾಲಕ/ಬಾಲಕಿಯರ ಮತ್ತು ಸ್ವಂತ/ಬಾಡಿಗೆ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು) (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಕಳೆದ ಮತ್ತು ಪ್ರಸಕ್ತ ಸಾಲಿನಲ್ಲಿ ಸ್ವೀಕೃತವಾದ ಮತ್ತು ಪ್ರವೇಶಾತಿ ನೀಡಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಈ) ಒಟ್ಟು ಬಾಲಕಿಯರ ಹಾಸ್ಟೆಲ್‌ಗಳ ಸಂಖ್ಯೆ ಹಾಗೂ ಒಟ್ಟು ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ವಾರ್ಡನ್‌ಗಳ ಸಂಖ್ಯೆ ಎಷ್ಟು ;

೩–೪ ಹಾಸ್ಟೆಲ್ ಪ್ರಭಾರವಿರುವ ಬಾಲಕಿಯರ ಹಾಸ್ಟೆಲ್‌ಗಳಲ್ಲಿ ರಾತ್ರಿ ವೇಳೆ ಯಾರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಉ) ನೂರಾರು ಹದಿಹರೆಯದ ಹೆಣ್ಣು ಮಕ್ಕಳ ಜವಾಬ್ದಾರಿಯನ್ನು ಯಾವುದೇ ವಾರ್ಡನ್ ಇಲ್ಲದೇ ನಿಭಾಯಿಸುವುದು ಅಪಾಯಕಾರಿ ನಿರ್ಧಾರವಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ?

## ನಿರಾಮಯ ಆರೋಗ್ಯ ವಿಮಾ ಯೋಜನೆಯಡಿ ವಿಕಲಚೇತನರ ಸಬಲೀಕರಣದ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೭೪೯ (೯೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಹಾಗೂ ಪ್ರಸ್ತುತ ವರ್ಷದಲ್ಲಿ ನಿರಾಮಯ ಆರೋಗ್ಯ ವಿಮಾ ಯೋಜನೆ ಅಡಿಯಲ್ಲಿ ಎಷ್ಟು ವಿಶೇಷ ಚೇತನರು ನೋಂದಾಯಿಸಿಕೊಂಡಿದ್ದಾರೆ ಮತ್ತು ರಾಜ್ಯದಲ್ಲಿ ಈ ಯೋಜನೆಗೆ ಅರ್ಹರಾಗಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ನೀಡುವುದು)

(ಆ) ತೀವ್ರ ಸ್ವರೂಪದ ಅಂಗವೈಕಲ್ಯ ಹೊಂದಿರುವ ಮಕ್ಕಳ ಪೋಷಕರು/ ಆರೈಕೆದಾರರಿಗೆ ಮಾಸಿಕ ರೂ.೧೦೦೦/– ಗೌರವಧನ ನೀಡುವ ಯೋಜನೆಯಡಿ ಇದುವರೆಗೆ ಎಷ್ಟು ಫಲಾನುಭವಿಗಳಿಗೆ ಗೌರವಧನವನ್ನು ವಿತರಿಸಲಾಗಿದೆ ;

(ಇ) ರಾಜ್ಯದಲ್ಲಿ ಇದುವರೆಗೆ ಎಷ್ಟು ವಿಶೇಷ ಚೇತನರಿಗೆ ವಿಶಿಷ್ಟ ಅಂಗವೈಕಲ್ಯ ಗುರುತಿನ ಚೀಟಿ (UDID Card) ನೀಡಲಾಗಿದೆ ಹಾಗೂ ರಾಜ್ಯದಲ್ಲಿ ಅಂದಾಜು ಒಟ್ಟು ಎಷ್ಟು ವಿಶೇಷ ಚೇತನರಿದ್ದಾರೆ ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ನೀಡುವುದು)

(ಈ) ಅಂಗವಿಕಲರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಹಾಗೂ ವರ್ಷವಾರು ವಿವರ ನೀಡುವುದು)

## ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಕೆಕೆಆರ್‌ಡಿಬಿಯ ಎಸ್‌ಸಿಪಿ/ಟಿಎಸ್‌ಪಿ ಅನುದಾನದಡಿ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೦ (೯೦೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಕೆಕೆಆರ್‌ಡಿಬಿಯ ಎಸ್‌ಸಿಪಿ/ಟಿಎಸ್‌ಪಿ ಅನುದಾನದಡಿ ೨೦೨೪ ರಲ್ಲಿ ಬಿಡುಗಡೆಯಾದ ರೂ. ೭.೯೦ ಕೋಟಿ ಅನುದಾನವನ್ನು ಎರಡು ವರ್ಷಗಳಾದರೂ ಸಂಪೂರ್ಣವಾಗಿ ಬಳಸದೇ ಇರುವುದಕ್ಕೆ ಕಾರಣವೇನು ಹಾಗೂ ಇದುವರೆಗೆ ಎಷ್ಟು ಅನುದಾನ ಖರ್ಚಾಗಿದೆ ; (ವಿವರ ಒದಗಿಸುವುದು)

(ಆ) ವಿಜ್ಞಾನ ವಿಭಾಗಗಳ ಸಂಶೋಧನೆ ಮತ್ತು ವಿದ್ಯಾರ್ಥಿಗಳ ತರಬೇತಿಗಾಗಿ ಬಿಡುಗಡೆಯಾದ ರೂ.೭.೯೦ ಕೋಟಿ ಅನುದಾನವನ್ನು ನಿಗದಿತ ಉದ್ದೇಶಕ್ಕೆ ಬಳಸಲು ಸಾಧ್ಯವಾಗದಿದ್ದರೆ, ಯೋಜನೆ ಬದಲಾವಣೆ ಅಥವಾ ಪರ್ಯಾಯ ಯೋಜನೆ ರೂಪಿಸಿ ಅನುದಾನವನ್ನು ಸದ್ಬಳಕೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ಒದಗಿಸುವುದು)

(ಇ) ಕೊಪ್ಪಳ ವಿಶ್ವವಿದ್ಯಾಲಯದ ಬಳಕೆಯಾಗದ ರೂ.೭.೯೦ ಕೋಟಿ ಅನುದಾನವನ್ನು ಕಲಬುರಗಿ ವಿಟಿಯುಗೆ ವರ್ಗಾಯಿಸುವಂತೆ

ಕೆಕೆಆರ್‌ಡಿಬಿ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅನುದಾನವನ್ನು ಕೊಪ್ಪಳ ವಿಶ್ವವಿದ್ಯಾಲಯದಲ್ಲೇ ಉಳಿಸಿಕೊಂಡು ಜಿಲ್ಲೆಯ ಶೈಕ್ಷಣಿಕ ಮತ್ತು ಸಂಶೋಧನಾ ಅಭಿವೃದ್ಧಿಗೆ ಬಳಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ಒದಗಿಸುವುದು)

(ಈ) ಕೊಪ್ಪಳ ವಿಶ್ವವಿದ್ಯಾಲಯವು ತಾತ್ಕಾಲಿಕವಾಗಿ ತಳಕಲ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಜಿಲ್ಲಾ ಕೇಂದ್ರಕ್ಕೆ ಸ್ಥಳಾಂತರಿಸಿ ಸ್ವಂತ ಕಟ್ಟಡ ನಿರ್ಮಾಣ, ಅಗತ್ಯ ಮಾನವ ಸಂಪನ್ಮೂಲ ಹಾಗೂ ಶಾಶ್ವತ ಬೋಧಕ–ಬೋಧಕೇತರ ಸಿಬ್ಬಂದಿ ನೇಮಕ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಹೊಸ ಕೋರ್ಸ್‌ಗಳ ಆರಂಭ, ಸಂಶೋಧನಾ ಚಟುವಟಿಕೆಗಳ ವಿಸ್ತರಣೆ ಹಾಗೂ ಯಲಬುರ್ಗಾ ಸ್ನಾತಕೋತ್ತರ ಕೇಂದ್ರದಲ್ಲಿರುವ ವಿಜ್ಞಾನ ವಿಭಾಗಗಳನ್ನು ಬಳಸಿಕೊಂಡು ಬಿಡುಗಡೆಯಾದ ರೂ.೭.೯೦ ಕೋಟಿ ಅನುದಾನವನ್ನು ತ್ವರಿತವಾಗಿ ಸದ್ಬಳಕೆ ಮಾಡಲು ಸರ್ಕಾರ ಕಾಲಮಿತಿಯ ಕಾರ್ಯಯೋಜನೆ ರೂಪಿಸುವುದೇ ? (ವಿವರ ಒದಗಿಸುವುದು)

## ಕರಾವಳಿ ಕರ್ನಾಟಕದಲ್ಲಿ ಉಚ್ಚ ನ್ಯಾಯಾಲಯದ ಪೀಠ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೧ (೮೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಕರ್ನಾಟಕದಲ್ಲಿ ಉಚ್ಚ ನ್ಯಾಯಾಲಯದಲ್ಲಿ ಪೀಠ ಸ್ಥಾಪಿಸುವ ಬಗ್ಗೆ ರಾಜ್ಯ ಸರ್ಕಾರ ದಿನಾಂಕ:೦೩.೦೫.೨೦೨೬ರಂದು ಮಾನ್ಯ ಮುಖ್ಯ ನ್ಯಾಯಾಧೀಶರಿಗೆ ಪತ್ರ ಬರೆದು ಸ್ಥಾಪಿಸಲು ಬೇಕಾದ ಎಲ್ಲಾ ಮೂಲಭೂತ ಸೌಕರ್ಯ ನೀಡುವುದಾಗಿ ತಿಳಿಸಿದ್ದು, ಸ್ಥಾಪನೆ ಅಗತ್ಯತೆ ಬಗ್ಗೆ ಕಾನೂನು ಇಲಾಖೆ ಯಾವ ಕ್ರಮಕೈಗೊಂಡಿದೆ ; ಈ ಬಗ್ಗೆ ಮಾನ್ಯ ಮುಖ್ಯ ನ್ಯಾಯಾಧೀಶರು ಯಾವ ರೀತಿ ಕ್ರಮಕೈಗೊಂಡಿದ್ದಾರೆ ; (ವಿವರ ನೀಡುವುದು)

(ಆ) ರಾಜ್ಯ ಸರ್ಕಾರ ಕರಾವಳಿ ಕರ್ನಾಟಕದ ಸಂಚಾರಿ ಪೀಠ ಬೇಡಿಕೆಯನ್ನು ಈಡೇರಿಸಲು ಮತ್ತು ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಬಗ್ಗೆ ಸರ್ಕಾರದ ವತಿಯಿಂದ ಎಷ್ಟು ಹಣ ಮೀಸಲಿಡಲಾಗಿದೆ ; (ವಿವರ ನೀಡುವುದು)

(ಈ) ಕರಾವಳಿ ಕರ್ನಾಟಕದಲ್ಲಿ ಉಚ್ಚ ನ್ಯಾಯಾಲಯ ಸಂಚಾರಿ ಪೀಠ ರಾಜ್ಯದ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ಸಹಿತ ಸಚಿವರ ಸಭೆ ನಡೆದು ಕರಾವಳಿ ಕರ್ನಾಟಕದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಬೇಕೆಂದು ನಿರ್ದೇಶಿಸಿರುವ ಬಗ್ಗೆ ಹೈಕೋರ್ಟ್ ಪೀಠವನ್ನು ಸ್ಥಾಪಿಸಲು ದಿನಾಂಕವನ್ನು ಯಾವ ಕಾಲಮಿತಿಯೊಳಗೆ ನಿಗದಿಪಡಿಸಲಾಗುವುದು ;

(ಉ) ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ನ್ಯಾಯಾಲಯಗಳ ವಿಕೇಂದ್ರೀಕರಣ ಮಾಡುವ ಮೂಲಕ ಕೆಳಹಂತದ ಕಕ್ಷಿದಾರರಿಗೆ ಸುಲಭದಲ್ಲಿ ನ್ಯಾಯ ಸಿಗಲೆಂಬ ಸದುದ್ದೇಶದಿಂದ ಸುಪ್ರೀಂ ಕೋರ್ಟ್ ಬೇಡಿಕೆಯನ್ನು ರಾಜ್ಯ ಸರ್ಕಾರ ಮಂಡಿಸಿದ್ದು, ಇದನ್ನು

ಜಾರಿಗೊಳಿಸುವುದು ಯಾವ ಹಂತದಲ್ಲಿದೆ ; ರಾಜ್ಯ ಹೈಕೋರ್ಟ್‌ನ್ನು ವಿಕೇಂದ್ರೀಕರಣ ಮಾಡಿ ಕೂಡಲೇ ನ್ಯಾಯಾಲಯುಗಳನ್ನು ಸ್ಥಾಪಿಸಲು ಕಾನೂನು ಇಲಾಖೆ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೨ (೮೭೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಎಷ್ಟು ಸ್ವಂತ ಕಟ್ಟಡದಲ್ಲಿವೆ ; ಎಷ್ಟು ಬಾಡಿಗೆ ಕಟ್ಟಡದಲ್ಲಿವೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸ್ವೀಕರಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಹಾಸ್ಟೆಲ್ ಪ್ರಾರಂಭಿಸಲಾಗಿದೆ ; (ವಿವರ ನೀಡುವುದು)

(ಈ) ಶಾಲಾ–ಕಾಲೇಜುಗಳು ಪ್ರಾರಂಭವಾಗಿ ೩–೪ ತಿಂಗಳು ಕಳೆದರೂ ಅರ್ಜಿ ಸಲ್ಲಿಸಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಪ್ರವೇಶಾತಿ ನೀಡದೇ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಾವಣಿ ಮಾಡಿಕೊಂಡಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೩ (೮೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಾವಣಿ ಮಾಡಿಕೊಂಡಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ನೋಂದಣಿಯಾಗಿರುವ ಎಲ್ಲಾ ಫಲಾನುಭವಿಗಳಿಗೆ ಹಣ ಪಾವತಿ ಮಾಡಲಾಗಿದೆಯೇ ; ಪ್ರಾರಂಭದಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ಎಷ್ಟು ಹಣ ಪಾವತಿ ಮಾಡಲಾಗಿದೆ ; (ವಿವರ ನೀಡುವುದು)

(ಆ) ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಸಾಮಾನ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ೨೦೨೬–೨೭ನೇ ಸಾಲಿನಲ್ಲಿ ಫಲನುಭವಿಗಳಿಗೆ ಯಾವ ತಿಂಗಳವರೆಗೆ ಹಣ ಪಾವತಿ ಮಾಡಲಾಗಿದೆ ; ಎಷ್ಟು ತಿಂಗಳ ಬಾಕಿ ಇದೆ ; ಬಾಕಿ ಉಳಿದ ಹಣ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಧಾರ್ಮಿಕ ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಡೆಸುತ್ತಿರುವ ಅನುದಾನಿತ ಶಾಲೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೪ (೮೭೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಡೆಸುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಸಂಸ್ಥೆಗಳ ವತಿಯಿಂದ ನಡೆಸಲ್ಪಡುವ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇವೆ ; (ಶಾಲಾವಾರು ವಿವರ ನೀಡುವುದು)

(ಇ) ಈ ಮಂಜೂರಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮತಿ ನೀಡದೇ ಇರಲು ಕಾರಣಗಳೇನು ;

(ಈ) ಯಾವ ಸಮಯದೊಳಗಾಗಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗುವುದು ? (ವಿವರ ನೀಡುವುದು)

## ವಸತಿ ನಿಲಯಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೫ (೮೭೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಒಟ್ಟು ವಸತಿ ನಿಲಯಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ೨೦೨೫–೨೬ರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ ; (ವಿವರ ನೀಡುವುದು)

(ಆ) ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡವನ್ನು ಹೊಂದಿವೆ ; ಎಷ್ಟು ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿದೆ ;

(ಇ) ದಕ್ಷಿಣ ಕನ್ನಡ ಜಿಲ್ಲೆಗೆ ವಿವಿಧ ಜಿಲ್ಲೆಗಳಿಂದ ಆಗಮಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದು, ಹೆಚ್ಚುವರಿ ವಸತಿ ನಿಲಯಗಳ ಬೇಡಿಕೆ ಇದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಇಲಾಖೆಯಿಂದ ನಡೆಸುತ್ತಿರುವ ವಸತಿ ನಿಲಯಗಳಲ್ಲಿ ವಿವಿಧ ಹಂತಗಳ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಅನುದಾನ ಪಡೆಯುತ್ತಿರುವ ಸ್ವಾಯತ್ತ ಸಂಸ್ಥೆಗಳಲ್ಲಿನ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಎಫ್.ಹೆಚ್.ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೭೫೬ (೯೫೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರ ಅಥವಾ ಕೇಂದ್ರ ಸರ್ಕಾರದಿಂದ ಸಂಪೂರ್ಣ ಅಥವಾ ಭಾಗಶ: ಅನುದಾನ ಪಡೆಯುತ್ತಿರುವ ರಾಜ್ಯದ ಎಲ್ಲಾ ಸ್ವಾಯತ್ತ ಸಂಸ್ಥೆಗಳು, ಸಂಶೋಧನಾ ಸಂಸ್ಥೆಗಳು, ಅಕಾಡೆಮಿಗಳು, ಭೋದಕ ಮತ್ತು ಭೋದಕೇತರ ಹುದ್ದೆಗಳ ನೇಮಕಾತಿ ಸಂದರ್ಭದಲ್ಲಿ ಯಾವ ನಿಯಮಗಳನ್ನು ಪಾಲಿಸುತ್ತಿವೆ ;

(ಆ) ಬೆಂಗಳೂರಿನ ಐಸೆಕ್ (ISEC) ಧಾರವಾಡದ ಸಿ.ಎಂ.ಡಿ.ಆರ್ (CMDR) ಹಾಗೂ ಇತರ ಸ್ವಾಯತ್ತ ಸಂಸ್ಥೆಗಳು ರಾಜ್ಯದ ಮೀಸಲಾತಿ ನೀತಿ, ರೋಸ್ಟರ್ ವ್ಯವಸ್ಥೆ, ಬ್ಯಾಕ್ ಲ್ಯಾಗ್ ಹುದ್ದೆಗಳು, ಮಹಿಳಾ ಮೀಸಲಾತಿ, ಅಂಗವಿಕಲರ ಮೀಸಲಾತಿ, ಮಾಜಿ ಸೈನಿಕರ ಮೀಸಲಾತಿ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ಅನುಚ್ಛೇದ

೩೭೧ ಜೆ) ಮೀಸಲಾತಿಯನ್ನು ಕಡ್ಡಾಯವಾಗಿ ಪಾಲಿಸಬೇಕೆ ಅಥವಾ ಈ ನಿಯಮಗಳಿಂದ ವಿನಾಯಿತಿ ಇದೆಯೇ ; ಇದನ್ನು ಕಡ್ಡಾಯಗೊಳಿಸುವ ಸರ್ಕಾರದ ಆದೇಶಗಳು ಅಥವಾ ಕಾನೂನು Provisions ಯಾವುವು ;

(ಇ) ರಾಜ್ಯ ಅಥವಾ ಕೇಂದ್ರ ಸರ್ಕಾರದಿಂದ ಅನುದಾನ ಪಡೆಯುವ ಇಂತಹ ಸಂಸ್ಥೆಗಳು ನೇಮಕಾತಿ ಅಧಿಸೂಚನೆ ಹೊರಡಿಸುವ ಮೊದಲು ಸಂಬಂಧಪಟ್ಟ ಆಡಳಿತ ಇಲಾಖೆ ಅನುಮೋದನೆ ನೀಡುತ್ತದೆ ಹಾಗೂ ಯಾವ ನಿಯಮಗಳಡಿ ಅನುಮೋದನೆ ಕಡ್ಡಾಯವಾಗಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಇಂತಹ ಅನುದಾನಿತ ಸಂಸ್ಥೆಗಳು ಮೀಸಲಾತಿ ನಿಯಮಗಳು ರೋಸ್ಟರ್, ಬ್ಯಾಕ್‌ಲ್ಯಾಗ್ ಅಥವಾ ೩೭೧(ಜೆ) ಮೀಸಲಾತಿ ಉಲ್ಲಂಘಿಸಿ ನೇಮಕಾತಿ ಅಧಿಸೂಚನೆ ಹೊರಡಿಸಿದ ಪ್ರಕರಣಗಳು ಎಷ್ಟು ; ಸಂಸ್ಥೆವಾರು ವಿವರ, ಕೈಗೊಂಡ ತನಿಖೆ, ರದ್ದುಗೊಂಡ ನೇಮಕಾತಿಗಳು ಹಾಗೂ ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಉ) ರಾಜ್ಯ ಸರ್ಕಾರಗಳು ಎಲ್ಲಾ ಸರ್ಕಾರಿ ಅನುದಾನಿತ ಸಂಸ್ಥೆಗಳಿಗೆ ಏಕರೂಪದ ನೇಮಕಾತಿ ನೀತಿ (Uniform Recruitment Policy) ರೂಪಿಸಿ, ಮೀಸಲಾತಿ, ರೋಸ್ಟರ್, ಬ್ಯಾಕ್‌ಲ್ಯಾಗ್, ಮಹಿಳಾ ಮೀಸಲಾತಿ, ಅಂಗವಿಕಲರ ಮೀಸಲಾತಿ ಹಾಗೂ ಕಲ್ಯಾಣ ಕರ್ನಾಟಕ ೩೭೧ ಜೆ) ಮೀಸಲಾತಿ ಪಾಲನೆಯ ಪ್ರಮಾಣ ಪತ್ರವನ್ನು ಕಡ್ಡಾಯುಗೊಳಿಸಿ, ಸರ್ಕಾರದ ಪೂರ್ವಾನು ಮೋದನೆಯಿಲ್ಲದೆ ಯಾವುದೇ ನೇಮಕಾತಿ ಅಧಿಸೂಚನೆ ಹೊರಡಿಸದಂತೆ ಆದೇಶ ಹೊರಡಿಸುವ ಬಗ್ಗೆ ಸರ್ಕಾರದ ಕ್ರಮವೇನು ?

## ಕಾಳಗಿ ಮೆಟ್ರಿಕ್ ಪೂರ್ವ ವಸತಿ ನಿಲಯದ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೭ (೮೩೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಳಗಿ ತಾಲ್ಲೂಕಿಗೆ ಮೆಟ್ರಿಕ್ ಮತ್ತು ಮೆಟ್ರಿಕ್ ಪೂರ್ವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಮಂಜೂರು ಮಾಡಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಹಾಗಿದ್ದಲ್ಲಿ, ಈ ವಸತಿ ಶಾಲೆಗಳ ನಿರ್ಮಾಣಕ್ಕೆ ಸರ್ಕಾರ ಅನುದಾನವನ್ನೇನಾದರೂ ನಿಗದಿಪಡಿಸಿದೆಯೇ ; ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ವಸತಿ ಶಾಲೆಗಳ ಕಟ್ಟಡದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ ;

(ಈ) ಇಲ್ಲದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರಗಳನ್ನು ನೀಡುವುದು)

## ಕಾಳಗಿ ತಾಲ್ಲೂಕಿನಲ್ಲಿ ಹಿಂದುಳಿದ ವಸತಿ ನಿಲಯದ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೮ (೮೩೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಳಗಿ ತಾಲೂಕಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ಹಾಗೂ ಎಷ್ಟು ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿದ್ಯಾರ್ಥಿ ನಿಲಯಗಳು ಹೆಚ್ಚಿನ ಸಂಖ್ಯೆಯಲ್ಲಿ ಇಲ್ಲದಿರುವುದರಿಂದ ಸ್ಥಳೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) ಪ್ರಸ್ತುತ ಸಾಲಿನಲ್ಲಿಯೇ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಪುಸಕ್ತ ಸಾಲಿನಲ್ಲಿಯೇ ವಿದ್ಯಾರ್ಥಿ ನಿಲಯಗಳ ಕಟ್ಟಡಗಳ ಕಾಮಗಾರಿಗಳನ್ನು ಕೈಗೆತ್ತಿ ಕೊಳ್ಳಲಾಗುವುದೇ ? (ವಿವರಗಳನ್ನು ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರ ಕೊರತೆ ಕುರಿತು

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೯ (೮೩೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಶಾಲಾ– ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಲಬುರಗಿ ಜಿಲ್ಲೆಯಲ್ಲಿರುವ ಶಾಲಾ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಆದ್ಯತೆಯ ಮೇರೆಗೆ ಕೊಠಡಿಗಳನ್ನು ನಿರ್ಮಾಣ ಮಾಡಲಾಗುವುದೇ ; (ವಿವರಗಳನ್ನು ನೀಡುವುದು)

(ಇ) ಕಲಬುರಗಿ ಜಿಲ್ಲೆಯಲ್ಲಿರುವ ಶಾಲಾ–ಕಾಲೇಜುಗಳಲ್ಲಿ ಶಿಕ್ಷಕರ ಮತ್ತು ಉಪನ್ಯಾಸಕರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಕೊರತೆ ಇರುವ ಶಿಕ್ಷಕರ ಮತ್ತು ಉಪನ್ಯಾಸಕರುಗಳ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಂಗನವಾಡಿ ಕೇಂದ್ರಗಳ ಕಟ್ಟಡಗಳ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೦ (೮೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಳಗಿ ತಾಲ್ಲೂಕಿನಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿರುವ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡ ಇಲ್ಲದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ;

(ಆ) ಹಾಗಿದ್ದಲ್ಲಿ, ಅಂಗನವಾಡಿ ಕೇಂದ್ರಗಳ ಕಟ್ಟಡ ಇಲ್ಲದಿರುವುದರ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿರುತ್ತದೆ ? (ಮಾಹಿತಿ ನೀಡುವುದು)

## ಗೃಹಲಕ್ಷ್ಮಿ ಅನುದಾನದ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೧ (೮೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಗೃಹಲಕ್ಷ್ಮಿ ಯೋಜನೆಗಾಗಿ ಮೀಸಲಿಟ್ಟ ಅನುದಾನದ ಮೊತ್ತವೆಷ್ಟು ;

(ಆ) ಹಾಗಿದ್ದಲ್ಲಿ, ಗೃಹಲಕ್ಷ್ಮಿ ಯೋಜನೆಗಾಗಿ ಫಲಾನುಭವಿಗಳಿಂದ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳಿಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಈ) ಗೃಹಲಕ್ಷ್ಮಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು ? (ವಿವರಗಳನ್ನು ನೀಡುವುದು)

## ನಿಧನರಾದ ಗೃಹಲಕ್ಷ್ಮಿ ಫಲಾನುಭವಿಗಳಿಗೆ ಹಣ ವಿತರಿಸಿರುವ ಕುರಿತು

**ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೨ (೯೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮೀ ಯೋಜನೆಯನ್ನು ಎಂದಿನಿಂದ ಜಾರಿಗೆ ತರಲಾಗಿದೆ ; ಈ ಯೋಜನೆಯಿಂದ ಇಲ್ಲಿಯ ತನಕ ಒಟ್ಟು ಎಷ್ಟು ಮೊತ್ತದ ಹಣವನ್ನು ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ಎಂಬುದರ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ರಾಜ್ಯಾದ್ಯಂತ ಲಕ್ಷಾಂತರ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ನಿಧನರಾಗಿದ್ದಾರೆ, ನಿಧನರಾದ ಇವರಿಗೆ ಇಲ್ಲಿಯ

ತನಕ ಎಷ್ಟು ಹಣವನ್ನು ವಿತರಣೆ ಮಾಡಲಾಗಿದೆ ಎಂಬ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಇಷ್ಟೊಂದು ಹಣ ನಿಧನರಾದವರಿಗೆ ವಿತರಣೆ ಮಾಡಲಾದ ಅಧಿಕಾರಿ/ನೌಕರರ ಮೇಲೆ ಇಲ್ಲಿಯ ತನಕ ಯಾವುದೇ ಕ್ರಮ ಜರುಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅಧಿಕಾರಿಗಳ ಮೇಲೆ ಯಾವ ರೀತಿ ಕ್ರಮ ಜರುಗಿಸಲಾಗಿದೆ ? (ವಿವರ ನೀಡುವುದು)

## ಜಲಮಾಲಿನ್ಯ ಮತ್ತು ವಾಯುಮಾಲಿನ್ಯ ನಿಯಂತ್ರಣ ಕಾಯ್ದೆ ಕುರಿತು

**ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೩ (೯೫೭) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲ ಮಾಲಿನ್ಯ ನಿಯಂತ್ರಣ ಕಾಯ್ದೆ ೧೯೭೪ ಹಾಗೂ ವಾಯು ಮಾಲಿನ್ಯ ನಿಯಂತ್ರಣಾ ಕಾಯ್ದೆ ೧೯೮೧ರ ಅಡಿಯಲ್ಲಿ ಕೇಂದ್ರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯು ನಿಯಮ ೧೮(ಬಿ) ಅನ್ವಯ ಮಾಲಿನ್ಯದ ಮಾನದಂಡಗಳನ್ನು ಆಧರಿಸಿ ವಿವಿಧ ಬಣ್ಣಗಳಿಂದ ಕೈಗಾರಿಕೆಗಳನ್ನು ವರ್ಗೀಕರಿಸಲು ೨೦೧೬ರ ಅಧಿಸೂಚನೆಯನ್ನು ಹಿಂಪಡೆದಿದ್ದು, ಇದನ್ನು ದಿನಾಂಕ: ೧೨.೦೨.೨೦೨೫ರಿಂದ ಇಡೀ ದೇಶದಲ್ಲಿ ಕಡ್ಡಾಯವಾಗಿ ಜಾರಿಗೆ ತರಬೇಕೆಂದು ನಿರ್ದೇಶಿಸಿ, ಎಲ್ಲಾ ರಾಜ್ಯಗಳ ಮಾಲಿನ್ಯ ನಿಯಂತ್ರಣ ಮಂಡಳಿಗೆ ಕೇಂದ್ರ ಸರ್ಕಾರದ ಮಾಲಿನ್ಯ ನಿಯಂತ್ರಣ ಮಂಡಳಿಯು ಅಧಿಸೂಚನೆ ಕಳುಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈ ೨೦೨೫ರ ಅಧಿಸೂಚನೆಯನ್ನು ಜಾರಿಗೆ ತಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ವಿವರ ನೀಡುವುದು ;

(ಇ) ಒಂದು ವೇಳೆ ಈ ೨೦೨೫ರ ಅಧಿಸೂಚನೆಯನ್ನು ಜಾರಿಗೆ ಬಾರದಿದ್ದಲ್ಲಿ ಇದನ್ನು ಯಾವಾಗ ಜಾರಿಗೆ ತರಲಾಗುವುದು ; ವಿವರ ನೀಡುವುದು ;

(ಈ) ಈ ಅಧಿಸೂಚನೆಯನ್ನು ಜಾರಿಗೆ ತರದೆ ಸರ್ಕಾರಕ್ಕೂ ಮಾಹಿತಿ ನೀಡದೆ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈ ಬಗ್ಗೆ ವಿಳಂಬ ಧೋರಣೆಯನ್ನು ಅನುಸರಿಸಿದ್ದಲ್ಲಿ ಅಲ್ಲಿನ ಅಧಿಕಾರಿ/ನೌಕರರ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಿದ್ಯಾರ್ಥಿ ವಸತಿ ನಿಲಯಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೪ (೯೧೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ಕೊರತೆಯಿಂದಾಗಿ ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ಪಡೆಯಲು ತೀವ್ರ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವಿದ್ಯಾರ್ಥಿ ನಿಲಯಗಳಲ್ಲಿ ಲಭ್ಯವಿರುವ ಒಟ್ಟು ಪ್ರವೇಶಾತಿ ಸಂಖ್ಯೆ ಎಷ್ಟು ; ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಹಾಗೂ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಪೈಕಿ ಸ್ಥಳೀಯ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಉಭಯ ಜಿಲ್ಲೆಗಳ ವಿದ್ಯಾರ್ಥಿಗಳಿಗೆ ಸಮರ್ಪಕ ಅವಕಾಶ ದೊರೆಯುವಂತೆ ಪ್ರವೇಶಾತಿಯಲ್ಲಿ ಆದ್ಯತೆ ನೀಡಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ ; ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಹೊಸ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಲು ಅಥವಾ ಈಗಿರುವ ವಿದ್ಯಾರ್ಥಿ ನಿಲಯಗಳ ಆಸನ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇದೆಯೇ ;

(ಈ) ರಾಜ್ಯದಲ್ಲಿರುವ ಒಟ್ಟು ವಿದ್ಯಾರ್ಥಿ ನಿಲಯಗಳೆಷ್ಟು ; ಅವುಗಳಿಗೆ ಮಂಜೂರಾದ ವಿವಿಧ ವೃಂದದ ಒಟ್ಟು ಹುದ್ದೆಗಳೆಷ್ಟು ಮತ್ತು ಪ್ರಸ್ತುತ ಖಾಲಿಯಿರುವ ಒಟ್ಟು ಹುದ್ದೆಗಳು ಎಷ್ಟು ; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಮಂಗಳೂರಿನಲ್ಲಿ ಉಚ್ಚ ನ್ಯಾಯಾಲಯದ ಪೀಠ ಸ್ಥಾಪನೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೫ (೯೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳ ಸಾರ್ವಜನಿಕರು ನ್ಯಾಯಾಂಗ ಸೇವೆಗಾಗಿ ಬೆಂಗಳೂರಿಗೆ ತೆರಳಬೇಕಾಗಿರುವುದರಿಂದ ಸಮಯ ಹಾಗೂ ಆರ್ಥಿಕ ಹೊರೆಯು ಹೆಚ್ಚಾಗುತ್ತಿದ್ದು. ಮಂಗಳೂರಿನಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಪೀಠ ಸ್ಥಾಪಿಸುವ ಕುರಿತು ಸಾರ್ವಜನಿಕ ಬೇಡಿಕೆ ಬಂದಿದೆಯೇ: ಬಂದಿದ್ದಲ್ಲಿ, ಅದರ ವಿವರಗಳೇನು ಹಾಗೂ ಈ ಸಂಬಂಧ ಸರ್ಕಾರ ಇದುವರೆಗೆ ಕೈಗೊಂಡ ಕ್ರಮಗಳೇನು ;

(ಆ) ಮಂಗಳೂರಿನಲ್ಲಿ ಉಚ್ಚ ನ್ಯಾಯಾಲಯದ ಸಂಚಾರಿ ಪೀಠ ಸ್ಥಾಪನೆಗೆ ಅಗತ್ಯವಿರುವ ಕಾನೂನು. ಆಡಳಿತಾತ್ಮಕ ಹಾಗೂ ಮೂಲಸೌಕರ್ಯ ಸಂಬಂಧಿತ ಪ್ರಕ್ರಿಯೆಗಳೇನು ;

(ಇ) ಕರಾವಳಿ ಮತ್ತು ಮಲೆನಾಡು ಭಾಗದ ಜಿಲ್ಲೆಗಳ ಸಾರ್ವಜನಿಕರಿಗೆ ನ್ಯಾಯಾಂಗ ಸೇವೆಗಳನ್ನು ಸುಲಭವಾಗಿ ಲಭ್ಯವಾಗುವಂತೆ ಮಾಡಲು ಮಂಗಳೂರಿನಲ್ಲಿ ಉಚ್ಚ ನ್ಯಾಯಾಲಯದ ಸಂಚಾರಿ ಪೀಠ ಸ್ಥಾಪಿಸುವ ಕುರಿತು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರ, ಉಚ್ಚ ನ್ಯಾಯಾಲಯ ಅಥವಾ ಸಂಬಂಧಿತ ಪ್ರಾಧಿಕಾರಗಳೊಂದಿಗೆ ಯಾವುದೇ ಪತ್ರ ವ್ಯವಹಾರ ಅಥವಾ ಸಮಾಲೋಚನೆ ನಡೆಸಿದೆಯೇ ;

(ಈ) ಮಂಗಳೂರಿನಲ್ಲಿ ಉಚ್ಚ ನ್ಯಾಯಾಲಯದ ಸಂಚಾರಿ ಪೀಠ ಸ್ಥಾಪನೆಗೆ ರಾಜ್ಯ ಸರ್ಕಾರ ತಾತ್ವಿಕ ಒಪ್ಪಿಗೆ ಅಥವಾ ಒಲವು ಹೊಂದಿದೆಯೇ; ಹೊಂದಿದ್ದಲ್ಲಿ. ಅದರ ಅನುಷ್ಠಾನಕ್ಕೆ ನಿಗದಿಪಡಿಸಿರುವ ಕಾಲಮಿತಿಯ ವಿವರವೇನು: ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ?

# ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೬ (೯೧೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು, ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ;

(ಆ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಸಮರ್ಪಕ ಶಾಲಾ ಕೊಠಡಿಗಳು, ವಿಜ್ಞಾನ ಪ್ರಯೋಗಾಲಯಗಳು, ಗ್ರಂಥಾಲಯಗಳು, ಶೌಚಾಲಯಗಳು (ಗಂಡು/ಹೆಣ್ಣು ಮಕ್ಕಳಿಗೆ ಪ್ರತ್ಯೇಕ) ಶುದ್ಧ ಕುಡಿಯುವ ನೀರಿನ ವ್ಯವಸ್ಥೆ. ವಿದ್ಯುತ್ ಸಂಪರ್ಕ, ಕಂಪ್ಯೂಟರ್ ಕೊಠಡಿಗಳು ಹಾಗೂ ಕ್ರೀಡಾಂಗಣಗಳ ಕೊರತೆ ಇರುವ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜಿನ ಮೂಲಸೌಕರ್ಯ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನದ ಒಟ್ಟು ಮೊತ್ತ ಎಷ್ಟು; ಅದರಲ್ಲಿ ವೆಚ್ಚ ಮಾಡಲಾದ ಮೊತ್ತ ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಶಿಕ್ಷಕರ ಕೊರತೆ ಹಾಗೂ ಶಾಲಾ ಮೂಲಸೌಕರ್ಯಗಳ ಅಭಾವವನ್ನು ನಿವಾರಿಸಲು ಸರ್ಕಾರವು ಯಾವುದೇ ವಿಶೇಷ ಕಾರ್ಯಯೋಜನೆ ರೂಪಿಸಿರುವುದೇ: ಇದ್ದಲ್ಲಿ ಅದರ ವಿವರಗಳು, ಕಾಲಮಿತಿ ಹಾಗೂ ಅದಕ್ಕಾಗಿ ಮೀಸಲಿರಿಸಿರುವ ಅನುದಾನದ ಮಾಹಿತಿಯನ್ನು ನೀಡುವುದು ;

(ಉ) ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ಕಾಲಕಾಲಕ್ಕೆ ವೇತನವನ್ನು ಪಾವತಿಲಾಗುತ್ತಿದೆಯೇ ; ಬಾಕಿ ಇದ್ದಲ್ಲಿ, ವಿವರ ನೀಡುವುದು ?

## ಅತಿಥಿ ಶಿಕ್ಷಕರಿಗೆ ವಿವಿಧ ಸೌಲಭ್ಯಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೭ (೯೧೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಜನ ಅತಿಥಿ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ ; (ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜುವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಅತಿಥಿ ಉಪನ್ಯಾಸಕರ ಬೋಧನಾ ವಿಷಯ ನೀಡಿರುವ ಕಾರ್ಯಭಾರ, ಇವುಗಳ ಕುರಿತು ಸಂಪೂರ್ಣ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಮಹಿಳಾ ಅತಿಥಿ ಉಪನ್ಯಾಸಕರಿಗೆ ತಿಂಗಳ ಮುಟ್ಟಿನ ರಜೆ ಹಾಗೂ

೯೦ ದಿನಗಳ ಮಾತೃತ್ವ ರಜೆ/ಪ್ರಸೂತಿ ರಜೆ/ಇವುಗಳು ಇಲ್ಲದೆ ಇರುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಇದರ ಕುರಿತು ಸರ್ಕಾರದ ನಿಲುವೇನು ;

(ಈ) ಸರ್ಕಾರಿ ಪದವಿ (ಡಿಗ್ರಿ) ಕಾಲೇಜುಗಳಲ್ಲಿ/ಇಂಜಿನಿಯರಿಂಗ್ ಕಾಲೇಜು/ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ/ ಕಾರ್ಯನಿರ್ವಹಿಸುವ ಮಹಿಳಾ ಅತಿಥಿ ಉಪನ್ಯಾಸಕರಿಗೆ ತಿಂಗಳ ಮುಟ್ಟಿನ ರಜೆಯನ್ನು ಹಾಗೂ ಮಾತೃತ್ವ ರಜೆ/ಪ್ರಸೂತಿ ರಜೆ/ ಇವುಗಳನ್ನು ನೀಡಲಾಗಿದೆ ; ಇದೇ ಮಾದರಿಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಮಹಿಳಾ ಅತಿಥಿ ಉಪನ್ಯಾಸಕರಿಗೆ ಸಹ ಈ ಸವಲತ್ತುಗಳನ್ನು ನೀಡಬಹುದಲ್ಲವೇ ;

(ಉ) ಪ್ರಸ್ತುತ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ವೇತನ ಎಷ್ಟು; ಶೈಕ್ಷಣಿಕ ವರ್ಷದ ಯಾವ ತಿಂಗಳಿನಿಂದ ಯಾವ ತಿಂಗಳ ತನಕ ವೇತನವನ್ನು ನೀಡಲಾಗುತ್ತಿದೆ ಹಾಗೂ ಯಾವ ಮಾನದಂಡದಲ್ಲಿ ಇವರಿಗೆ ವೇತನವನ್ನು ನಿಗದಿಪಡಿಸಲಾಗಿದೆ ; ಅತಿಥಿ ಶಿಕ್ಷಕರ ವೇತನವನ್ನು ಕನಿಷ್ಠ ರೂ.೩೦,೦೦೦ ರಿಂದ ರೂ. ೪೦,೦೦೦ದವರೆಗೆ ಹೆಚ್ಚಿಸಲು ಸರ್ಕಾರಕ್ಕೆ ಇರುವ ತೊಂದರೆಯೇನು ?

## ಕೊಡಗು ಜಿಲ್ಲೆಯಲ್ಲಿ ಅರಣ್ಯ ಇಲಾಖೆಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೮ (೯೦೪) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಅರಣ್ಯ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸಿಬ್ಬಂದಿ ಕೊರತೆಯಿಂದ ಅರಣ್ಯ ಸಂರಕ್ಷಣಾ ಕಾರ್ಯಕ್ಕೆ ತೊಂದರೆಯಾಗುತ್ತಿದೆಯೇ ;

(ಆ) ಕೊಡಗು ಜಿಲ್ಲೆಯಲ್ಲಿ ಆನೆ, ಹುಲಿ ಸೇರಿದಂತೆ ಪ್ರಮುಖ ವನ್ಯಜೀವಿಗಳ ಇತ್ತೀಚಿನ ಗಣತಿ ಪ್ರಕಾರ ಸಂಖ್ಯೆ ಎಷ್ಟಿದೆ; ಕಳೆದ ಗಣತಿಗೆ ಹೋಲಿಸಿದರೆ ಅವುಗಳ ಸಂಖ್ಯೆಯಲ್ಲಿ ಏರಿಕೆ ಅಥವಾ ಇಳಿಕೆ ಕಂಡುಬಂದಿದೆಯೇ ;

(ಇ) ಮಾನವ–ವನ್ಯಜೀವಿ ಸಂಘರ್ಷ ಹೆಚ್ಚಿರುವ ಪ್ರದೇಶಗಳಿಂದ ಸಮಸ್ಯೆ ಉಂಟುಮಾಡುತ್ತಿರುವ ವನ್ಯಜೀವಿಗಳನ್ನು ಹಿಡಿದು ಸ್ಥಳಾಂತರಿಸುವ ಅಥವಾ ನಿಯಂತ್ರಿಸುವ ಕುರಿತು ಸರ್ಕಾರ ಯಾವುದಾದರೂ ಯೋಜನೆ ರೂಪಿಸಿದೆಯೇ ?

## ಸಂತ್ರಸ್ತ ಮಹಿಳೆಯರಿಗೆ ಇಲಾಖೆಯಿಂದ ನೀಡಿರುವ ನೆರವಿನ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೯ (೯೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ, ಕೌಟುಂಬಿಕ ಹಿಂಸೆ ಹಾಗೂ ಇತರ ಪ್ರಕರಣಗಳ ಸಂಖ್ಯೆ ಎಷ್ಟು; ಸಂತ್ರಸ್ತ ಮಹಿಳೆಯರಿಗೆ ಸರ್ಕಾರದಿಂದ ನೀಡಿರುವ ನೆರವು ಮತ್ತು ಪುನರ್ವಸತಿ ಕ್ರಮಗಳೇನು ;

(ಆ) ಸಂಕಷ್ಟದಲ್ಲಿರುವ ಮಹಿಳೆಯರಿಗೆ ಆಶ್ರಯ, ಕಾನೂನು ನೆರವು, ಆಪ್ತ ಸಮಾಲೋಚನೆ ಮತ್ತು ಪುನರ್ವಸತಿ ಕಲ್ಪಿಸಲು ಜಿಲ್ಲೆಯಲ್ಲಿ ಯಾವ ಯೋಜನೆಗಳು ಜಾರಿಯಲ್ಲಿವೆ ;

(ಇ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ: ಸ್ವಂತ ಕಟ್ಟಡ ಇಲ್ಲದ, ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ದುರಸ್ತಿಯು ಅಗತ್ಯವಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ;

(ಈ) ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಟಿಕ ಆಹಾರದ ಗುಣಮಟ್ಟವನ್ನು ಪರಿಶೀಲಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಕಳೆದ ೩ ವರ್ಷಗಳಲ್ಲಿ ಆಹಾರ ಗುಣಮಟ್ಟದ ಕುರಿತು ಎಷ್ಟು ದೂರುಗಳು ಬಂದಿವೆ ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಲೆಕ್ಕ-ಪತ್ರದ ವರದಿಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೦ (೮೯೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಇಲ್ಲಿಯ ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನ ರಾಜ್ಯ ಲೆಕ್ಕಪತ್ರ ಹಾಗೂ ಲೆಕ್ಕಪರಿಶೋಧನೆ ಇಲಾಖೆಯಿಂದ ವಾರ್ಷಿಕ ಲೆಕ್ಕ ಪರಿಶೋಧನಾ ವರದಿಗಳನ್ನು ಒದಗಿಸುವುದು ;

(ಆ) ಸದರಿ ವಿವಿಗೆ ಸರ್ಕಾರದ ಅನುದಾನ ಮತ್ತು ಲಭ್ಯವಿರುವ ಹಾಲಿ ಪೂರ್ಣ ಆರ್ಥಿಕ ನಿಧಿಯ ವಿವರವನ್ನು ಒದಗಿಸುವುದು; ವಿವಿ ವೆಚ್ಚ ಮಿತವ್ಯಯಕ್ಕೆ ಸರ್ಕಾರದಿಂದ ಸೂಚಿಸಿರುವ ಕ್ರಮಗಳು, ಮಾರ್ಗಸೂಚಿ ಹಾಗೂ ಆದೇಶಗಳ ವಿವರ ಒದಗಿಸುವುದು ;

(ಇ) ಕಳೆದ ಎರಡು ವರ್ಷಗಳಲ್ಲಿ ವಿವಿಯಲ್ಲಿ ವೇತನ, ಮೂಲಸೌಕರ್ಯ, ವಿದ್ಯಾರ್ಥಿ ಸೇವೆಗಳು, ಗುತ್ತಿಗೆದಾರರ ಪಾವತಿ ವೆಚ್ಚ ಮತ್ತು ಅಧ್ಯಯನ ಕೇಂದ್ರಗಳ ವೆಚ್ಚದ ವಿವರಗಳನ್ನು ಒದಗಿಸುವುದು ;

(ಈ) ಸದರಿ ವಿವಿಗೆ ಸಂಬಂಧಿಸಿದಂತೆ ರಾಜ್ಯ ಉನ್ನತ ಶಿಕ್ಷಣ ಇಲಾಖೆಯಿಂದ ವಿವಿ ಬ್ಯಾಂಕ್ (SBI, HDFC & AXIS) ಖಾತೆಗಳನ್ನು ಸ್ಥಗಿತಗೊಳಿಸುವಂತೆ ಆದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಆದೇಶದ ಅನುಷ್ಠಾನದ ಪ್ರಗತಿಯ ಮಾಹಿತಿಯನ್ನು ಒದಗಿಸುವುದು ?

## ರಾಜ್ಯದಲ್ಲಿರುವ ಸ್ವಾಯತ್ತ ಆರೋಗ್ಯ ಸಂಸ್ಥೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೧ (೮೯೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸ್ವಾಯತ್ತ ಆರೋಗ್ಯ ಸಂಸ್ಥೆಗಳಾದ "ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆ, ಸಂಜಯ್ ಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆ" ನೆಫ್ರೋ ಯುರಾಲಜಿ ಸಂಸ್ಥೆಗಳಿಗೆ ಪೂರ್ಣಾವಧಿ ನಿರ್ದೇಶಕರ ನೇಮಕಾತಿ ಆಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಸಂಸ್ಥೆಗಳ ಹಾಗೂ ಉಳಿದ ಸ್ವಾಯತ್ತ ಆರೋಗ್ಯ ಸಂಸ್ಥೆಗಳ ಅಭಿವೃದ್ಧಿಗೆ ಸಂಬಂಧಿಸಿದ ಪೂರ್ಣ ವಿವರಗಳೇನು ; ಈ ಎಲ್ಲಾ ಸಂಸ್ಥೆಗಳಿಗೆ ವೈದ್ಯಕೀಯ ಅಧೀಕ್ಷಕರ ನಿಯುಕ್ತಿ ಆಗಿದೆಯೇ ; ಈ ಸಂಸ್ಥೆಗಳ ಆಡಳಿತವು ರಾಷ್ಟ್ರೀಯ ವೈದ್ಯಕೀಯ ಆಯೋಗದ ನಿಯಮಗಳಿಗೆ ಬದ್ಧವಾಗಿದೆಯೇ ; ಎಮ್ಸ್ ಮಾದರಿಯಲ್ಲಿ ಈ ಸಂಸ್ಥೆಗಳನ್ನು ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಮಾಹಿತಿ ಒದಗಿಸುವುದು)

(ಇ) ಈ ಸಂಸ್ಥೆಗಳಿಗೆ ತಿಂಗಳಿಗೆ ಖರ್ಚು ಮಾಡುವ ಹಣ ಎಷ್ಟು; ನಿರ್ದೇಶಕರ ವೇತನ ಎಷ್ಟು ; ಇತರೆ ಭತ್ಯೆ ಸೌಲತ್ತುಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯಲ್ಲಿನ ಖಾಲಿ ಹುದ್ದೆಗಳು ಮತ್ತು ವನ್ಯಮೃಗ ದಾಳಿಯಿಂದ ಹಾನಿಗೊಳಗಾದ ರೈತರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೨ (೮೯೬) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರಣ್ಯ ರಕ್ಷಕರು (Forest Guards), ಅರಣ್ಯ ವೀಕ್ಷಕರು ಮತ್ತು ವಲಯ ಅರಣ್ಯಾಧಿಕಾರಿಗಳ (RFO) ಹುದ್ದೆಗಳು ಎಷ್ಟು ಖಾಲಿ ಇವೆ; ಸಿಬ್ಬಂದಿ ಕೊರತೆಯಿಂದ ಅರಣ್ಯ ರಕ್ಷಣೆ ಕುಂಠಿತಗೊಳ್ಳುತ್ತಿರುವುದನ್ನು ತಡೆಯಲು ಈ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿಮಾಡಲಾಗುವುದು, ಸರ್ಕಾರದ ಮುಂದಿನ ಕ್ರಮಗಳನ್ನು ತಿಳಿಸುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಾಡ್ಗಿಚ್ಚು ಮತ್ತು ಶಿಕಾರಿಗಳ ವಿರುದ್ಧ ಹೋರಾಡುವ ಕೆಳಹಂತದ ಸಿಬ್ಬಂದಿಗಳಿಗೆ ಅವರ ರಕ್ಷಣೆಗಾಗಿ ಆಧುನಿಕ ಆಯುಧಗಳು, ವಾಹನಗಳು ಮತ್ತು ಸುರಕ್ಷಾ ಗೇರ್‌ಗಳನ್ನು ಒದಗಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ವನ್ಯಮೃಗ ದಾಳಿಯಿಂದ ಮರಣ ಹೊಂದಿದವರ ಕುಟುಂಬಗಳ ಹಾಗೂ ಬೆಳೆ ನಷ್ಟ ಹೊಂದಿದ ರೈತರ ಸಂಖ್ಯೆ ಎಷ್ಟು; ಸಂಪೂರ್ಣ ಮಾಹಿತಿ ನೀಡುವುದು, ಇವರಿಗೆ ಪರಿಹಾರ ಧನ ನೀಡಲಾಗಿದೆಯೆ; ಎಷ್ಟು ಪರಿಹಾರ ಧನವನ್ನು ನೀಡಲಾಗುತ್ತದೆ; ಬಾಕಿ ಇದ್ದಲ್ಲಿ, ವಿಳಂಬಕ್ಕೆ ಕಾರಣವೇನು ?

## ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೩ (೮೯೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಶಾಲೆಗಳು ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಅರ್ಜಿ ಸಲ್ಲಿಸಿವೆ; ಹಾಗೂ ನವೀಕರಣಕ್ಕೆ ಎಷ್ಟು ಅರ್ಹವಾಗಿವೆ ಮತ್ತು ಎಷ್ಟು ಶಾಲೆಗಳ ಅರ್ಜಿಗಳಿಗೆ ಅಂತಿಮವಾಗಿ ಅನುಮೋದನೆ ನೀಡಲಾಗಿದೆ ;

(ಆ) ವಿಜಯಪುರ ಶಿಕ್ಷಣ ಇಲಾಖೆಯಲ್ಲಿ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣದಲ್ಲಾದ ಅಕ್ರಮದ ತನಿಖೆ ಯಾವ ಹಂತದಲ್ಲಿದೆ ಮತ್ತು ಈವರೆಗೆ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಲೋಕಾಯುಕ್ತ ತನಿಖೆ, ಜಿಲ್ಲಾ ಪಂಚಾಯಿತಿ ಸಿಇಒ ತನಿಖೆ, ಇಲಾಖೆಯ ಆಂತರಿಕ ತನಿಖೆ ಹಾಗೂ ಪೊಲೀಸ್ ಇಲಾಖೆಯ ತನಿಖೆಗಳ ವರದಿಯ ಸ್ಥಿತಿಗತಿಗಳೇನು ; (ಮಾಹಿತಿಯನ್ನು ಒದಗಿಸುವುದು)

(ಈ) ತನಿಖಾ ವರದಿಯ ಶಿಫಾರಸ್ಸುಗಳನ್ನು ಕಾರ್ಯಗತಗೊಳಿಸಲಾಗಿದೆಯೆ ; ಸಂಬಂಧಿಸಿದವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ? (ವಿಸ್ತೃತ ಮಾಹಿತಿ ನೀಡುವುದು)

## ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೪ (೮೯೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಸೇರಿದಂತೆ ಇತರೆ ಹಿಂದುಳಿದ ವರ್ಗಗಳ ನಿಗಮಗಳಿಗೆ ಪ್ರಸಕ್ತ ಆಯವ್ಯಯದಲ್ಲಿ ಘೋಷಿಸಲಾದ ಅನುದಾನ ಎಷ್ಟು ಮತ್ತು ಅದರಲ್ಲಿ ಬಿಡುಗಡೆಯಾದ ಮೊತ್ತ ಎಷ್ಟು; ಇಲ್ಲಿಯವರೆಗೂ ಬಳಕೆ ಮಾಡಿದ ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗಕ್ಕಾಗಿ ನೀಡುವ ಸಾಲ ಮತ್ತು ಸಹಾಯಧನ (Subsidy) ಯೋಜನೆಗಳಿಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; ಜಿಲ್ಲಾವಾರು ಮತ್ತು

ನಿಗಮವಾರು ಮಾಹಿತಿ ನೀಡುವುದು, ವಿವಿಧ ನಿಗಮಗಳ ಅಡಿಯಲ್ಲಿ ಸಾಲ ಸೌಲಭ್ಯಕ್ಕಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಪೈಕಿ ಎಷ್ಟು ಅರ್ಜಿಗಳು ಬಾಕಿ ಇವೆ; ಅವುಗಳ ಶೀಘ್ರ ವಿಲೇವಾರಿಗೆ ಕಾಲಮಿತಿ ನಿಗದಿಪಡಿಸಲಾಗಿದೆಯೇ; ಆಯ್ಕೆಯಾಗದ ಫಲಾನುಭವಿ ಪ್ರತಿ ವರ್ಷ ಅರ್ಜಿಯನ್ನು ಸಲ್ಲಿಸಬೇಕೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) IAS, KAS ಬ್ಯಾಂಕಿಂಗ್ ಮತ್ತು UPSC ಪರೀಕ್ಷೆಗಳ ಉಚಿತ ತರಬೇತಿಗಾಗಿ ಸರ್ಕಾರ ಆಯ್ಕೆ ಮಾಡಿಕೊಂಡಿರುವ ಸಂಸ್ಥೆಗಳ ಮಾನದಂಡಗಳೇನು; ಪ್ರಸಕ್ತ ವರ್ಷ ಎಷ್ಟು ವಿದ್ಯಾರ್ಥಿಗಳಿಗೆ ಈ ಸೌಲಭ್ಯ ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಗ್ರಾಮೀಣ ಭಾಗದ ಹಿಂದುಳಿದ ವರ್ಗಗಳ ಯುವಕ/ ಯುವತಿಯರಿಗೆ ಉದ್ಯೋಗಾಧಾರಿತ ಕೌಶಲ; ತರಬೇತಿ ನೀಡಲು ಜಾರಿಯಲ್ಲಿರುವ ವಿಶೇಷ ಯೋಜನೆಗಳಾವುವು ; ಕಳೆದ ೩ ವರ್ಷಗಳಲ್ಲಿ ಸದರಿ ಯೋಜನೆಗಳ ಅಡಿಯಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಮತ್ತು ಯಾವ ಯಾವ ತರಬೇತಿಗಳನ್ನು ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಬಿಸಿಯೂಟ ಅಕ್ಕಿ ಪೂರೈಕೆಯಲ್ಲಿನ ವಿಳಂಬದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೫ (೮೯೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶೈಕ್ಷಣಿಕ ವರ್ಷ ಆರಂಭವಾಗಿ ಒಂದೂವರೆ ತಿಂಗಳು ಕಳೆದರೂ ೯ ಮತ್ತು ೧೦ನೇ ತರಗತಿ ವಿದ್ಯಾರ್ಥಿಗಳಿಗೆ ಬಿಸಿಯೂಟದ ಅಕ್ಕಿ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎಫ್.ಸಿ.ಐ. (FCI) ಯಿಂದ $59,594.14$ ಕ್ವಿಂಟಾಲ್ ಅಕ್ಕಿ ಖರೀದಿಗೆ ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದ್ದರೂ ಅಕ್ಕಿ ಪೂರೈಕೆಯಾಗದಿರಲು ಕಾರಣಗಳೇನು ;

(ಇ) ಅಕ್ಕಿ ಅಭಾವದಿಂದಾಗಿ ೧ ರಿಂದ ೮ನೇ ತರಗತಿಯ ಮಕ್ಕಳ ದಾಸ್ತಾನಿನಿಂದಲೇ ಪ್ರೌಢಶಾಲಾ ಮಕ್ಕಳಿಗೂ ಬಿಸಿಯೂಟ ಪೂರೈಸುತ್ತಿರುವುದು ನಿಜವೇ ;

(ಈ) ಅಧಿಕಾರಿಗಳ ವಿಳಂಬ ಧೋರಣೆಯಿಂದ ಸೃಷ್ಟಿಯಾಗಿರುವ ಈ ಸಮಸ್ಯೆಯನ್ನು ಬಗೆಹರಿಸಿ, ವಿದ್ಯಾರ್ಥಿಗಳಿಗೆ ತಕ್ಷಣ ಅಕ್ಕಿ ತಲುಪಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ?

## ಮೈಸೂರು ಓಅಅ ಗ್ರೂಪ್ ಹೆಡ್‌ಕ್ವಾರ್ಟಸ್‌ನಲ್ಲಿ ಖಾಯಂ ತರಬೇತಿ ಹಾಗೂ ವಸತಿ ಕೇಂದ್ರ ಸ್ಥಾಪನೆ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೬ (೮೯೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಸಿದ್ದಾರ್ಥ ನಗರದಲ್ಲಿರುವ NCC ಗ್ರೂಪ್ ಹೆಡ್‌ಕ್ವಾರ್ಟಸ್‌ನ 3.7 ಎಕರೆ ಜಾಗದಲ್ಲಿ ಮೂಲಸೌಕರ್ಯಗಳಿಲ್ಲದೆ ದಕ್ಷಿಣ ಕರ್ನಾಟಕದ ಸುಮಾರು 12,000 ಕೆಡೆಟ್‌ಗಳ ತರಬೇತಿ ಎದುರುಸುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ;

(ಆ) 500 ರಿಂದ 600 ಕೆಡೆಟ್‌ಗಳಿಗೆ ತರಬೇತಿ, ವಸತಿ, ಶೌಚಾಲಯ ಹಾಗೂ ತರಗತಿ ಕೊಠಡಿಗಳನ್ನು ಒಳಗೊಂಡ ಖಾಯಂ ತರಬೇತಿ ಸಂಕೀರ್ಣ ನಿರ್ಮಾಣಕ್ಕಾಗಿ ಸಲ್ಲಿಕೆಯಾಗಿರುವ ಸುಮಾರು ರೂ. 5 ಕೋಟಿ ವೆಚ್ಚದ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಇ) ಪ್ರಸ್ತುತ ಶಾಲಾ–ಕಾಲೇಜುಗಳು ಮತ್ತು ವಸತಿನಿಲಯಗಳನ್ನು ನೆಚ್ಚಿಕೊಳ್ಳುವುದನ್ನು ತಪ್ಪಿಸಲು ಈ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಯೋಜನೆಗೆ ಯಾವಾಗ ಅನುಮೋದನೆ ಹಾಗೂ ಅನುದಾನ ನೀಡಲಾಗುವುದು; ವಿಳಂಬಕ್ಕೆ ಕಾರಣಗಳೇನು ?

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೭ (೯೦೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಬಿ.ಎ ಹಾಗೂ ಬಿ.ಎಸ್ಸಿ ಕೋರ್ಸ್ ಗಳಿಗೆ ವಿದ್ಯಾರ್ಥಿಗಳ ದಾಖಲಾತಿ ಗಣನೀಯವಾಗಿ ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೈಸೂರು, ಚಾಮರಾಜನಗರ, ಮಂಡ್ಯ ಮತ್ತು ಹಾಸನ ಜಿಲ್ಲೆಗಳಲ್ಲಿ ಪ್ರವೇಶ ಸಂಖ್ಯೆ ತೀವ್ರವಾಗಿ ಕುಸಿಯಲು ಕಾರಣಗಳೇನು ; (ಕಳೆದ ಮೂರು ವರ್ಷಗಳ ಜಿಲ್ಲಾವಾರು ಪ್ರವೇಶ ವಿವರ ನೀಡುವುದು)

(ಇ) ವಿದ್ಯಾರ್ಥಿಗಳ ಆಸಕ್ತಿಗೆ ತಕ್ಕಂತೆ ಬಿ.ಸಿ.ಎ ಹಾಗೂ ಬಿ.ಕಾಂ ಅಪ್ರೆಂಟಿಸ್‌ಶಿಪ್ (AEDC) ನಂತಹ ಕೌಶಲ್ಯಾಧಾರಿತ ಕೋರ್ಸ್‌ಗಳ ಸೀಟುಗಳನ್ನು ಹೆಚ್ಚಿಸಲು ಕೈಗೊಂಡ ಕ್ರಮಗಳೇನು ;

(ಈ) ಸಾಂಪ್ರದಾಯಿಕ ಕಲಾ ಮತ್ತು ವಿಜ್ಞಾನ ಕೋರ್ಸ್‌ಗಳನ್ನು ಪ್ರಸ್ತುತ ಉದ್ಯೋಗ ಮಾರುಕಟ್ಟೆಗೆ ತಕ್ಕಂತೆ ನವೀಕರಿಸಲು ಸರ್ಕಾರ ರೂಪಿಸಿರುವ ಕಾರ್ಯಯೋಜನೆಗಳೇನು ?

## ಅಂಗನವಾಡಿ ಕಾರ್ಯಕರ್ತೆಯರು/ಬಿಸಿಯೂಟ ನೌಕರರ ಬೇಡಿಕೆಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೮ (೯೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.೧೫.೦೦೦ ಹಾಗೂ ಸಹಾಯಕಿಯರಿಗೆ ರೂ.೧೦.೦೦೦ ಗೌರವಧನ ನಿಗದಿಪಡಿಸುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಅಂಗನವಾಡಿ ನೌಕರರನ್ನು ಬಿ.ಎಲ್.ಓ (BLO) ಮತ್ತು ಇತರ ಸಮೀಕ್ಷೆ ಕೆಲಸಗಳಿಂದ ಮುಕ್ತಗೊಳಿಸಲು ಹಾಗೂ 'ಪೋಷಣ್ ಟ್ರ್ಯಾಕರ್' ಕೆಲಸಕ್ಕಾಗಿ ಗುಣಮಟ್ಟದ ಟ್ಯಾಬ್ಲೆಟ್/ಮೊಬೈಲ್, ಉಚಿತ ಡೇಟಾ ಮತ್ತು ನಿರ್ವಹಣಾ ವೆಚ್ಚ ನೀಡಲು ಸರ್ಕಾರ ಕ್ರಮವಹಿಸಿದೆಯೇ ;

(ಇ) ಶಹಾಪುರ ತಾಲ್ಲೂಕಿನಲ್ಲಿ ೨೦೨೨ ರಿಂದ ೨೦೨೫ ರವರೆಗೆ ನಿವೃತ್ತರಾದ ಅಕ್ಷರ ದಾಸೋಹ ನೌಕರರಲ್ಲಿ ಕೇವಲ ೧೭ ಜನರಿಗೆ

ಮಾತ್ರ ಇಡಿಗಂಟು (Lumpsum Amount) ನೀಡಲಾಗಿದ್ದು, ಉಳಿದವರ ಹಣ ಬಿಡುಗಡೆಯಾಗದಿರಲು ಕಾರಣಗಳೇನು ಮತ್ತು ಬಾಕಿ ಹಣವನ್ನು ಯಾವಾಗ ನೀಡಲಾಗುವುದು ;

(ಈ) ಬಿಸಿಯೂಟದ ಮೊಟ್ಟೆ ಸುಲಿಯುವ ವೆಚ್ಚ (೩೦ಪೈಸೆ) ಬಿಡುಗಡೆ ಮಾಡಲು ಆಗುತ್ತಿರುವ ವಿಳಂಬ, ಎಸ್‌ಡಿಎಂಸಿ ಮತ್ತು ಮುಖ್ಯ ಶಿಕ್ಷಕರಿಂದ ಹಣ ದುರುಪಯೋಗ ಹಾಗೂ ಅಡುಗೆ ಸಿಬ್ಬಂದಿಗೆ ಶೌಚಾಲಯ ಸ್ವಚ್ಛಗೊಳಿಸುವಂತೆ ನೀಡುತ್ತಿರುವ ಕಿರುಕುಳ ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡ ಶಿಸ್ತುಕ್ರಮಗಳೇನು ?

## ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಸಿಗದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೭೯ (೮೬೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ಅವು ಯಾವುವು ;

(ಆ) ಪದವಿ ಮತ್ತು ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳ ಅಂಕಪಟ್ಟಿ ಪ್ರಮಾಣ ಪತ್ರಗಳನ್ನು ಯಾವ ಶೈಕ್ಷಣಿಕ ಸಾಲಿನಿಂದ National Academic Depository [NAD] & Digilocker ನಲ್ಲಿ ಡಿಜಿಟಲ್ ರೂಪದಲ್ಲಿ ಈ ಮೇಲ್ಕಂಡ ವಿವಿಗಳಲ್ಲಿ ಸಂಗ್ರಹಿಸಲಾಗುತ್ತಿದೆ ; (ಶೈಕ್ಷಣಿಕ ಸಾಲಿನ ವಿವರದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೆಲವು ವಿವಿಗಳು ಮುದ್ರಿತ ಅಥವಾ ಡಿಜಿಟಲ್ ರೂಪದಲ್ಲಿ ಅಂಕಪಟ್ಟಿ ಪ್ರಮಾಣಪತ್ರಗಳನ್ನು ನೀಡದಿರುವುದರಿಂದ ಪದವಿ ಮತ್ತು ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ ಇದುವರೆವಿಗೂ ವಿದ್ಯಾರ್ಥಿಗಳಿಗೆ ಪದವಿ ಮತ್ತು ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳನ್ನು ವಿತರಿಸದಿರುವ ವಿವಿಗಳು ಯಾವುವು; ಯಾವ ಶೈಕ್ಷಣಿಕ ಸಾಲಿನಿಂದ ವಿತರಿಸಲು ಬಾಕಿ ಉಳಿಸಿಕೊಂಡಿದೆ (ವಿವಿವಾರು ಶೈಕ್ಷಣಿಕ ಸಾಲು, ಪದವಿ –ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳ ಸಂಖ್ಯೆಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಉ) ಡಿಜಿಟಲ್ ಫ್ಲಾಟ್ ಫಾರ್ಮ್ ಅಂಕಪಟ್ಟಿಗೂ ವಿದ್ಯಾರ್ಥಿಗಳಿಂದ ಅಂಕಪಟ್ಟಿ ಶುಲ್ಕ ವಸೂಲಿ ಮಾಡಲು ಅವಕಾಶವಿದೆಯೇ ;

(ಊ) ಕೆಲವು ವಿವಿಗಳು ಅಂಕಪಟ್ಟಿ ವಿತರಿಸಿಲ್ಲ ಇನ್ನೊಂದೆಡೆ ವಿದ್ಯಾರ್ಥಿಗಳಿಂದ ಅಂಕಪಟ್ಟಿ ಶುಲ್ಕವನ್ನು ನಿಯಮಬಾಹಿರವಾಗಿ ವಸೂಲಾತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ನಿಯಂತ್ರಣಕ್ಕೆ ಸರ್ಕಾರದ ಕ್ರಮವೇನು; ವಿದ್ಯಾರ್ಥಿಗಳಿಂದ ಸಂಗ್ರಹಿಸಲಾಗಿರುವ ಅಂಕಪಟ್ಟಿ ಶುಲ್ಕ ಮೊತ್ತ ಎಷ್ಟು ? (ವಿವಿವಾರು ಶೈಕ್ಷಣಿಕ ಸಾಲುವಾರು ಸಂಗ್ರಹಿಸಿದ ಮೊತ್ತದ ಮಾಹಿತಿ ನೀಡುವುದು)

## ಬಂಡೀಪುರ–ನಾಗರಹೊಳೆ ಸಫಾರಿ ಪರಿಷ್ಕೃತ ಶುಲ್ಕ ವಾಪಸ್ಸು ಪಡೆಯುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೮೦ (೮೬೭) ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಂಡೀಪುರ ಮತ್ತು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ವಿವಿಧ ಪ್ರವಾಸೋದ್ಯಮ ಚಟುವಟಿಕೆಗಳಿಗೆ ಶುಲ್ಕ ದರಗಳನ್ನು ಪರಿಷ್ಕರಿಸಿ ನಿಗದಿಪಡಿಸಿರುವುದು ನಿಜವೇ ;

(ಆ) ಇದ್ದಲ್ಲಿ, ಈ ಹಿಂದೆ ಭಾರತದ ಮತ್ತು ವಿದೇಶದ ಪ್ರವಾಸಿಗರಾದ ವಯಸ್ಕರು ಮತ್ತು ಮಕ್ಕಳಿಗೆ ಸಫಾರಿ ಮಾಡಲು ನಿಗದಿಪಡಿಸಿದ್ದ ದರ ಎಷ್ಟು; ಈ ದರ ಎಷ್ಟು ವರ್ಷದಿಂದ ಜಾರಿಯಲ್ಲಿತ್ತು; ಪ್ರಸ್ತುತ ನಿಗದಿ ಪಡಿಸಿರುವ ಶುಲ್ಕ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಪರಿಷ್ಕೃತ ಶುಲ್ಕ ದರವು ಹೊರೆಯಾಗಿದ್ದು ಈ ವರ್ಗದ ಜನರನ್ನು ಪರಿಸರ ಪ್ರವಾಸೋದ್ಯಮದಿಂದ ಹೊರಗಿಡುವ ಯತ್ನ ಎನ್ನುವ ಬಗ್ಗೆ ಹೆಚ್ಚಿನ ಸಾರ್ವಜನಿಕ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ದರ ಹೆಚ್ಚಳ ಆದೇಶವನ್ನು ಹಿಂದಕ್ಕೆ ಪಡೆಯುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; (ವಿವರವಾದ ಮಾಹಿತಿ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಬಂಡಿಪುರ ಮತ್ತು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ಕೈಗೊಂಡ ಪ್ರವಾಸೋದ್ಯಮ ಚಟುವಟಿಕೆಗಳಿಂದ ಸಂಗ್ರಹವಾದ ಮೊತ್ತ ಎಷ್ಟು ; ಈ ಹಣವನ್ನು ಯಾವ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲಾಗಿದೆ ? (ವಿವರಗಳೊಂದಿಗೆ ವರ್ಷವಾರು ಮೊತ್ತ ಕುರಿತು ಮಾಹಿತಿ ನೀಡುವುದು)

# SSLC ಕನ್ನಡ ಭಾಷಾ ಪರೀಕ್ಷೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಶಿಫಾರಸ್ಸುಗಳನ್ನು ಜಾರಿ ಮಾಡುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೮೧ (೮೬೮) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ರಾಜ್ಯ ಭಾಷೆಯಾದ ಕನ್ನಡವನ್ನು ಬೋಧಿಸಲು ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಕನ್ನಡ ಭಾಷಾ ವಿಷಯಕ್ಕೆ ಸಂಬಂಧಿಸಿದಂತೆ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ಎಷ್ಟು ಸಂಖ್ಯೆಯ ಅತಿಥಿ ಶಿಕ್ಷಕರು/ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗಿದೆ; ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಮಾಹಿತಿ ನೀಡುವುದು ;

(ಇ) ಕಳೆದ ೩ ವರ್ಷಗಳಲ್ಲಿ ಸರ್ಕಾರಿ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕನ್ನಡ ಭಾಷಾ ವಿಷಯ ಬೋಧಿಸಲು ನೇಮಕಾತಿ ಪ್ರಕ್ರಿಯೆ ನಡೆಸಿ ಖಾಯಂ ಆಗಿ ನೇಮಕ ಮಾಡಿಕೊಂಡ ಶಿಕ್ಷಕರ ಸಂಖ್ಯೆ ಎಷ್ಟು;

(ಈ) ೨೦೨೩–೨೪, ೨೦೨೪–೨೫ ಮತ್ತು ೨೦೨೫– ೨೬ನೇ ಶೈಕ್ಷಣಿಕ ಸಾಲುಗಳ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಕನ್ನಡವನ್ನು ಪ್ರಥಮ ಭಾಷೆಯಾಗಿ ತೆಗೆದುಕೊಂಡಿದ್ದ ಎಷ್ಟು ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಾರೆ ; (ಶೈಕ್ಷಣಿಕ ವರ್ಷ, ಜಿಲ್ಲೆ, ಪರೀಕ್ಷೆ ಹಾಜರಾದವರು, ಅನುತೀರ್ಣರಾದವರ ಸಂಖ್ಯೆ, ಶೇಕಡವಾರು ಪ್ರಮಾಣದೊಂದಿಗೆ ಪ್ರೌಢ ಪಿಯುಗೆ ಸಂಬಂಧಿಸಿದ ಪ್ರತ್ಯೇಕವಾದ ಮಾಹಿತಿ ನೀಡುವುದು)

(ಉ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಎಸ್ಸೆಸ್ಸೆಲ್ಸಿ ಕನ್ನಡ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಅನುತ್ತೀರ್ಣರಾಗುತ್ತಿರುವ ಬಗ್ಗೆ ಸಂಶೋಧನಾತ್ಮಕ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು ?

## ಕೆನೆಪದರ–ಆದಾಯ ಮಿತಿಯನ್ನು ಪರಿಷ್ಕರಿಸುವ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೮೨ (೮೬೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ OBC ಕೆನೆಪದರ ಮೀಸಲಾತಿ ಸೌಲಭ್ಯ ಪಡೆಯಲು ೨೦೧೮ ರಲ್ಲಿ ರೂ.೮ ಲಕ್ಷಗಳ ಆದಾಯ ಮಿತಿ ನಿಗದಿಪಡಿಸಲಾಗಿತ್ತು; ಕಳೆದ ೮ ವರ್ಷಗಳಿಂದಲೂ 'ಆದಾಯ ಮಿತಿ' ಪರಿಷ್ಕರಣೆ ಆಗಿಲ್ಲ ; ಕೇಂದ್ರ ಸರ್ಕಾರವೀಗ ವಾರ್ಷಿಕ ೧೨.೭೫ ಲಕ್ಷ ರೂ ವರೆಗೆ ಆದಾಯ ಹೊಂದಿರುವವರನ್ನು ಆದಾಯ ತೆರಿಗೆಯಿಂದ ವಿನಾಯಿತಿ ಪಡೆಯಲು ಅರ್ಹರೆಂದು ಪರಿಗಣಿಸಿದೆಯೇ ;

(ಆ) ಈ ನೆಲೆಯಲ್ಲಿ ರಾಜ್ಯದಲ್ಲಿ OBC ಮೀಸಲಾತಿ ಸೌಲಭ್ಯ ಪಡೆಯಲು ಪ್ರಸ್ತುತ ನಿಗದಿಪಡಿಸಿರುವ ಅಭ್ಯರ್ಥಿ/ ಪೋಷಕರ ಆದಾಯ ಮಿತಿಯನ್ನು ಕೆನೆಪದರ ಪರಿಷ್ಕರಿಸಲು ಸರ್ಕಾರ ಉದ್ದೇಶಿಸಿದೆಯೇ ; ಈ ಕುರಿತ ಪ್ರಾಸ್ತಾವನೆ ಸರ್ಕಾರದ ಮುಂದಿದೆಯೇ ; (ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿ ಸೌಲಭ್ಯ ಪಡೆಯಲು ಪ್ರವರ್ಗವಾರು ಪ್ರಸ್ತುತ ನಿಗದಿಪಡಿಸಲಾಗಿರುವ ಮೀಸಲಾತಿ ಪ್ರಮಾಣ ಎಷ್ಟು ; (ಪ್ರವರ್ಗವಾರು ಮಾಹಿತಿ ನೀಡುವುದು)

(ಈ) ಹಾಗೆ ಪ್ರವರ್ಗವಾರು ಮೀಸಲಾತಿಯನ್ನು ನೀಡುವಾಗ ಅಳವಡಿಸಿಕೊಂಡಿರುವ ಕೆನೆಪದರ ನೀತಿ ಏನು ; ಯಾರಿಗೆ ಅನ್ವಯಿಸಲಿದೆ ; ಅಥವಾ ಅನ್ವಯಿಸುವುದಿಲ್ಲ ? (ವಿವರವಾದ ಮಾಹಿತಿ ನೀಡುವುದು)

## ಸಾರ್ವಜನಿಕ ವಿವಿಗಳಿಗೆ ಸಾಂಸ್ಕೃತಿಕ ನಾಯಕರ ಹೆಸರು ನಾಮಕರಣ ಮಾಡುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೮೩ (೮೬೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿವಿಧ ಸಾರ್ವಜನಿಕ ವಿಶ್ವವಿದ್ಯಾಲಯಗಳು ಸಾಂಸ್ಕೃತಿಕ ನಾಯಕರ ಹೆಸರನ್ನು ನಾಮಕರಣ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಇದ್ದಲ್ಲಿ, ಯಾವ ಸಾರ್ವಜನಿಕ ವಿಶ್ವವಿದ್ಯಾಲಯವು ಯಾವ ಸಾಂಸ್ಕೃತಿಕ ನಾಯಕರ ಹೆಸರನ್ನು ನಾಮಕರಣ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ ; (ವಿವರವಾರು ಸಾಂಸ್ಕೃತಿಕ ನಾಯಕರ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಈಗಾಗಲೇ ಯಾವ ಸಾರ್ವಜನಿಕ ವಿವಿಗೆ ಯಾವ ಸಾಂಸ್ಕೃತಿಕ ನಾಯಕರ ಹೆಸರನ್ನು ನಾಮಕರಣ ಮಾಡಲಾಗಿದೆ ? (ವಿವರ ನೀಡುವುದು)

# ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕುಲಪತಿಗಳ (VC) ನೇಮಕಾತಿ ಪ್ರಕ್ರಿಯೆ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೪ (೯೫೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಕುಲಪತಿಗಳ (Vice Chancellors) ನೇಮಕಾತಿಯಲ್ಲಿ ಶೈಕ್ಷಣಿಕ ಅರ್ಹತೆ ಮತ್ತು ಹಿರಿತನಕ್ಕಿಂತ ಜಾತಿ, ರಾಜಕೀಯ ಹಾಗೂ ಹಣದ ಪ್ರಭಾವ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ವಿಶ್ವವಿದ್ಯಾಲಯಗಳಿಗೆ ಅರ್ಹ ವ್ಯಕ್ತಿಗಳನ್ನು ನೇಮಿಸಲು ಶೋಧನಾ ಸಮಿತಿಗಳು (Search Committees) ಮಾಡುವ ಶಿಫಾರಸ್ಸುಗಳಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕುಲಪತಿಗಳ ನೇಮಕಾತಿಯಲ್ಲಿ ಸರ್ಕಾರ ಮತ್ತು ಮಾನ್ಯ ರಾಜ್ಯಪಾಲರ (ಕುಲಾಧಿಪತಿಗಳ) ನಡುವಿನ ಭಿನ್ನಾಭಿಪ್ರಾಯ ಹಾಗೂ ರಾಜಕೀಯ ಹಸ್ತಕ್ಷೇಪದಿಂದ ಶಿಕ್ಷಣದ ಗುಣಮಟ್ಟ ಕುಸಿಯುವುದನ್ನು ತಡೆಯಲು ವಿಶ್ವವಿದ್ಯಾಲಯಗಳ ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಕುಲಪತಿ ಹುದ್ದೆಯ ಆಕಾಂಕ್ಷಿಗಳ ಶೈಕ್ಷಣಿಕ ಸಾಧನೆಗಳು (Academic Credentials) ಹಾಗೂ ಪ್ರಬಂಧಗಳನ್ನು ಸಾರ್ವಜನಿಕವಾಗಿ ಪ್ರಕಟಿಸುವ ಅಥವಾ ತಾಂತ್ರಿಕ ಮೌಲ್ಯಮಾಪನಕ್ಕೊಳಪಡಿಸುವ ಯಾವುದೇ ಸ್ಪಷ್ಟ ನೀತಿಯನ್ನು ಸರ್ಕಾರ ರೂಪಿಸಿದೆಯೇ ? (ವಿವರ ನೀಡುವುದು)

## ವಿವಾಹ ಪ್ರೋತ್ಸಾಹ ಧನ ಬಾಕಿ ಇರುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೫ (೮೫೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಪರಿಶಿಷ್ಟ ಜಾತಿಯಲ್ಲಿ (SC) ವಧು ಅಥವಾ ವರನನ್ನು ಒಳಗೊಂಡ ಅಂತರ್ಜಾತಿ ವಿವಾಹಕ್ಕೆ ಸರ್ಕಾರದ ವತಿಯಿಂದ ಎಷ್ಟು ಪ್ರೋತ್ಸಾಹ ಧನ ನೀಡಲಾಗುತ್ತಿದೆ ;

(ಆ) ಈ ಯೋಜನೆಯಡಿ ೨೦೨೫–೨೬ರಲ್ಲಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿದೆ ; ಮತ್ತು ಎಷ್ಟು ದಂಪತಿಗಳಿಗೆ ವಿವಾಹ ಪ್ರೋತ್ಸಾಹ ಧನವನ್ನು ವಿತರಿಸಲಾಗಿದೆ ; ಎಷ್ಟು ಅರ್ಜಿಗಳು ವಿಲೇಯಾಗಲು ಬಾಕಿ ಇವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅರ್ಜಿಗಳು ಬಾಕಿ ಇರುವುದಕ್ಕೆ ಕಾರಣಗಳೇನು ; ಮತ್ತು ಈ ಅರ್ಜಿಗಳನ್ನು ಯಾವಾಗ ವಿಲೇಗೊಳಿಸಲಾಗುವುದು ?

## ಕಾನೂನು ಇಲಾಖೆಯಿಂದ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೬ (೮೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಸೇವೆಗಳಲ್ಲಿ ನಾಗರಿಕರಿಗೆ "Right to Time Bound Services" ಅನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರದ ಕ್ರಮಗಳೇನು ;

(ಆ) ಇಲಾಖೆಗಳ ಕಾರ್ಯಕ್ಷಮತೆಯನ್ನು ಅಳಲೆಯಲು Key Performance Indicators (KPIs) ಮತ್ತು ವಾರ್ಷಿಕ ಕಾರ್ಯಕ್ಷಮತಾ ಮೌಲ್ಯಮಾಪನ ವ್ಯವಸ್ಥೆ ಜಾರಿಯಲ್ಲಿದೆಯೇ ;

(ಇ) ಸರ್ಕಾರದ ವಿರುದ್ಧದ ನ್ಯಾಯಾಲಯದ ತೀರ್ಪುಗಳಿಂದ ಸಾರ್ವಜನಿಕ ಹಣದ ನಷ್ಟವನ್ನು ತಡೆಯಲು ಹೊಣೆಗಾರ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ನಿಯಮ ಇದೆಯೇ ;

(ಈ) ೨೦೪೦ರೊಳಗೆ ರಾಜ್ಯವನ್ನು ಪಾರದರ್ಶಕ, ವೇಗವಾದ, ಡಿಜಿಟಲ್, ಉತ್ತರದಾಯಿತ್ವ ಮತ್ತು ಜನಸ್ನೇಹಿ ಆಡಳಿತ ಹೊಂದಿದ ರಾಜ್ಯವನ್ನಾಗಿಸಲು ಸರ್ಕಾರದ ಸಮಗ್ರ ಆಡಳಿತ ಸುಧಾರಣಾ ಕಾರ್ಯತಂತ್ರವೇನು ?

## ಮಕ್ಕಳ ಸುರಕ್ಷತೆ ಮತ್ತು ಮಹಿಳಾ ಉದ್ಯಮಿಗಳಿಗೆ ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೭ (ಲ೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಆನ್‌ಲೈನ್ (ಡಿಜಿಟಲ್) ಬೆದರಿಕೆಗಳ ಹಿನ್ನಲೆಯಲ್ಲಿ, ಮಕ್ಕಳ ರಕ್ಷಣಾ ಸೇವೆಗಳನ್ನು ಬಲಪಡಿಸಲು ಮತ್ತು ಮಕ್ಕಳಿಗೆ ಇಂಟರ್ನೆಟ್ ಸುರಕ್ಷತೆಯ ಕುರಿತು ಉತ್ತೇಜಿಸಲು ಸರ್ಕಾರ ಯಾವ ಹೊಸ ಕ್ರಮಗಳನ್ನು ಕೈಗೊಂಡಿದೆ ;

(ಆ) ಇತ್ತೀಚಿನ ದಿನಗಳಲ್ಲಿ ಶಾಲೆಗೆ ಹೋಗುವ ಮಕ್ಕಳಲ್ಲಿ ಮೊಬೈಲ್ ಮತ್ತು ಇಂಟರ್ನೆಟ್ ಬಳಕೆ ಹೆಚ್ಚಾಗುತ್ತಿದ್ದು, ಇದರಿಂದಾಗಿ ಕಣ್ಣು ಸಮಸ್ಯೆ ಆಗುವುದಲ್ಲದೇ ಆರೋಗ್ಯದಲ್ಲೂ ಸಹ ಸಮಸ್ಯೆಗಳು ಉಂಟಾಗುತ್ತಿರುವುದರಿಂದ ಸರ್ಕಾರ/ಇಲಾಖೆ ವತಿಯಿಂದ ಶಾಲೆಗಳಲ್ಲಿ ಸಂಪೂರ್ಣವಾಗಿ ಮೊಬೈಲ್ ನಿಷೇಧ ಕಾನೂನು ಜಾರಿಗೆ ತರಲು ಯೋಜಿಸಿದೆಯೇ ; ಇದ್ದಲ್ಲಿ, ಯಾವಾಗ ಈ ಕಾನೂನು ಜಾರಿಗೆ ಬರುವುದು ; (ಮಾಹಿತಿ ನೀಡುವದು)

(ಇ) ಮಹಿಳಾ ಉದ್ಯಮಿಗಳಿಗೆ, ವಿಶೇಷವಾಗಿ ಗ್ರಾಮೀಣ, ಸ್ವಸಹಾಯ ಗುಂಪು ವಲಯಗಳಲ್ಲಿ ಆರ್ಥಿಕ ನೆರವು, ತರಬೇತಿ ಮತ್ತು ಮಾರುಕಟ್ಟೆ ಪ್ರವೇಶವನ್ನು ಒದಗಿಸಲು "ಉದ್ಯೋಗಿನಿ" ಯೋಜನೆಯಡಿಯಲ್ಲಿ ಯಾವ ಹೊಸ/ವಿಸ್ತರಿಸಬಹುದಾದ ಯೋಜನೆಗಳನ್ನು ಸರ್ಕಾರದ ವತಿಯಿಂದ ಪರಿಚಯಿಸಲಾಗುವುದು ?

## ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು ಮತ್ತು ಇತರೇ ವಿಷಯಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೮ (೮೫೭) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ ಅರಣ್ಯ ರಕ್ಷಕರು, ಅರಣ್ಯ ವೀಕ್ಷಕರು ಹಾಗೂ ಇತರೆ ಸಿಬ್ಬಂದಿಗಳ ಹುದ್ದೆಗಳ ಸಂಖ್ಯೆ ಎಷ್ಟು: ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಅರಣ್ಯ ಗಡಿಭಾಗದ ಗ್ರಾಮಗಳಲ್ಲಿ ಮಾನವ–ವನ್ಯಜೀವಿ ಸಂಘರ್ಷ ಕಡಿಮೆ ಮಾಡಲು ಸೋಲಾರ್ ಬೇಲಿ, ಆನೆ ತಡೆ ಕಂದಕ ಹಾಗೂ ಇತರೆ ರಕ್ಷಣಾ ವ್ಯವಸ್ಥೆಗಳಿಗಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸಾಮಾಜಿಕ ಅರಣ್ಯ (Social Forestry) ಯೋಜನೆಯಡಿ ಎಷ್ಟು ಗಿಡಗಳನ್ನು ನೆಡಲಾಗಿದೆ; ಅವುಗಳಲ್ಲಿ ಎಷ್ಟು ಬದುಕುಳಿದಿವೆ; ಅರಣ್ಯ ಅವಲಂಬಿತ ಸಮುದಾಯಗಳ ಜೀವನೋಪಾಯ ಅಭಿವೃದ್ಧಿಗಾಗಿ ಜೇನು, ಬಿದಿರು, ಲಾಕ್ ಹಾಗೂ ಇತರೆ ಅರಣ್ಯ ಉತ್ಪನ್ನಗಳಿಗೆ ಸರ್ಕಾರ ನೀಡುತ್ತಿರುವ ಬೆಂಬಲ ಮತ್ತು ಮಾರುಕಟ್ಟೆ ವ್ಯವಸ್ಥೆ ಏನು ;

(ಈ) ರಾಜ್ಯದ ರಾಷ್ಟ್ರೀಯ ಉದ್ಯಾನಗಳು ಹಾಗೂ ವನ್ಯಜೀವಿ ಅಭಯಾರಣ್ಯಗಳಲ್ಲಿ ಪರಿಸರ ಪ್ರವಾಸೋದ್ಯಮ (Eco-tourism) ಅಭಿವೃದ್ಧಿಪಡಿಸುವ ಮೂಲಕ ಸ್ಥಳೀಯ ಯುವಕರಿಗೆ ಉದ್ಯೋಗ ಸೃಷ್ಟಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಹಸಿರು ಹೊದಿಕೆ (Green Cover) ಹೆಚ್ಚಿಸಲು ಎಷ್ಟು ಗುರಿ ನಿಗದಿಪಡಿಸಲಾಗಿತ್ತು; ಅದರಲ್ಲಿ ಎಷ್ಟು ಸಾಧನೆಯಾಗಿದೆ ; ಹವಾಮಾನ ಬದಲಾವಣೆ ಹಿನ್ನೆಲೆಯಲ್ಲಿ ಅರಣ್ಯ ಸಂರಕ್ಷಣೆ, ಜಲಮೂಲಗಳ ರಕ್ಷಣೆ ಹಾಗೂ ಜೀವ ವೈವಿಧ್ಯ ಸಂರಕ್ಷಣೆಗೆ ಸರ್ಕಾರ ರೂಪಿಸಿರುವ ವಿಶೇಷ ಕಾರ್ಯ ಯೋಜನೆಗಳೇನು ?

## ರಾಜ್ಯದಲ್ಲಿ NEP ಅನುಷ್ಠಾನ ಮತ್ತು ಇತರೆ ವಿಷಯಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೯ (೮೫೭೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಿಜಿಟಲ್ ಶಿಕ್ಷಣಕ್ಕಾಗಿ ವಿತರಿಸಲಾದ ಸ್ಮಾರ್ಟ್ ಕ್ಲಾಸ್‌ರೂಮ್‌ಗಳು ಮತ್ತು ಸಾಧನಗಳ ಬಳಕೆ ಕುರಿತು ಸರ್ಕಾರ ಮೌಲ್ಯಮಾಪನ ನಡೆಸಿದೆಯೇ; ಸರ್ಕಾರಿ ಶಾಲೆಗಳಲ್ಲಿ ಕನ್ನಡ ಮಾಧ್ಯಮವನ್ನು ಬಲಪಡಿಸಲು ಹೊಸ ಯೋಜನೆಗಳಿವೆಯೇ ;

(ಆ) NEP–೨೦೨೦ ಅನುಷ್ಠಾನದ ಪರಿಣಾಮವನ್ನು ಸರ್ಕಾರ ಮೌಲ್ಯಮಾಪನ ಮಾಡಿದೆಯೇ ; ಅದರ ವರದಿ ಸದನಕ್ಕೆ ನೀಡಲಾಗುವುದೇ; ಸರ್ಕಾರಿ ಶಾಲೆಗಳ ಫಲಿತಾಂಶ ಮತ್ತು ಖಾಸಗಿ ಶಾಲೆಗಳ ಫಲಿತಾಂಶಗಳ ನಡುವಿನ ಅಂತರ ಕಡಿಮೆ ಮಾಡಲು ಸರ್ಕಾರದ ಯೋಜನೆಗಳೇನು ;

(ಇ) ಸರ್ಕಾರಿ ಶಾಲೆಗಳಲ್ಲಿ ಕ್ರೀಡೆ, ವಿಜ್ಞಾನ ಪ್ರಯೋಗಾಲಯ ಹಾಗೂ ಗ್ರಂಥಾಲಯಗಳ ಸ್ಥಿತಿಗತಿ ಏನು ; ಗ್ರಾಮೀಣ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಕೇಂದ್ರಗಳನ್ನು ಹೆಚ್ಚಿಸುವ ಯೋಜನೆ ಇದೆಯೇ ;

(ಈ) ಸರ್ಕಾರಿ ಶಾಲೆಗಳ ಭೂಮಿ ಅತಿಕ್ರಮಣ ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳನ್ನು ತೆರವುಗೊಳಿಸಲು ಕೈಗೊಂಡ ಕ್ರಮಗಳೇನು ; ಉತ್ತರ ಕರ್ನಾಟಕದ ಶಿಕ್ಷಣ ಮೂಲಸೌಕರ್ಯವನ್ನು ದಕ್ಷಿಣ ಕರ್ನಾಟಕದ ಮಟ್ಟಕ್ಕೆ ತರುವುದಕ್ಕಾಗಿ ವಿಶೇಷ ಪ್ಯಾಕೇಜ್ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

## ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೭೯೦ (೮೫೦) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಿಂದ (೨೦೨೩-೨೪, ೨೦೨೪-೨೫, ೨೦೨೫-೨೬) ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಆಯ್ಕೆಯಾಗಿ ಖರೀದಿ ಆದೇಶದಂತೆ ಸರಬರಾಜಾದ ಪುಸ್ತಕಗಳ ಒಟ್ಟು ಬಿಲ್ಲುಗಳ ಮೊತ್ತ ಎಷ್ಟು : ಇದರಲ್ಲಿ ಪ್ರಕಾಶಕರು ಎಷ್ಟು : (ವರ್ಷವಾರು, ಜಿಲ್ಲಾವಾರು ಮತ್ತು ಪ್ರಕಾಶಕರವಾರು ಸಂಪೂರ್ಣ ವಿವರ ನೀಡುವುದು)

(ಆ) ನಿಗದಿತ ಅವಧಿಯಲ್ಲಿ ಬಿಲ್ಲುಗಳನ್ನು ಪಾವತಿ ಮಾಡದಿರಲು ಕಾರಣಗಳೇನು : ಹಣಕಾಸಿನ ಕೊರತೆಯೇ ಅಥವಾ ಆಡಳಿತಾತ್ಮಕ ವಿಳಂಬವೇ ;

(ಇ) ಕಳೆದ ೩ ವರ್ಷಗಳಲ್ಲಿ ಗ್ರಂಥಾಲಯ ಇಲಾಖೆಗೆ ಪುಸ್ತಕ ಖರೀದಿಗೆ ಮೀಸಲಿಟ್ಟ ಒಟ್ಟು ಅನುದಾನ ಎಷ್ಟು : ಮತ್ತು ಅದರಲ್ಲಿ ಬಳಕೆಯಾದ ಹಾಗೂ ನುಂಗಿಹೋದ/ಹಿಂತಿರುಗಿದ ಅನುದಾನ ಎಷ್ಟು ;

(ಈ) ಸಾರ್ವಜನಿಕರಿಂದ ಸಂಗ್ರಹವಾಗುವ ಗ್ರಂಥಾಲಯ ಉಪಕರದ (Library Cess) ಹಣದಲ್ಲಿ ಪುಸ್ತಕಗಳ ಖರೀದಿಗೆ ಎಷ್ಟು ಹಣವನ್ನು ಬಳಸಿಕೊಳ್ಳಲಾಗಿದೆ ; ಬಿಡುಗಡೆಯಾಗದ ಉಪಕರದ ಹಣ ಎಷ್ಟು ;

(ಉ) ಬಿಲ್ಲುಗಳ ಪಾವತಿ ವಿಳಂಬದಿಂದಾಗಿ ರಾಜ್ಯದ ನೂರಾರು ಸಣ್ಣ ಪ್ರಕಾಶಕರು ಮತ್ತು ಲೇಖಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ನಿಯಮಾವಳಿಗಳ ಪ್ರಕಾರ ಪುಸ್ತಕ ಸರಬರಾಜಾದ ಎಷ್ಟು ದಿನಗಳ ಒಳಗಾಗಿ ಬಿಲ್ಲುಗಳನ್ನು ಪಾವತಿಸಬೇಕಿರುತ್ತದೆ ; ನಿಯಮ ಉಲ್ಲಂಘನೆಯಾಗಿರುವುದಕ್ಕೆ ಹೊಣೆ ಯಾರು ;

(ಊ) ಬಾಕಿ ಇರುವ ಎಲ್ಲಾ ಪುಸ್ತಕಗಳ ಬಿಲ್ಲುಗಳನ್ನು ಸಂಪೂರ್ಣವಾಗಿ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಬಾಕಿ ಮೊತ್ತವನ್ನು ಯಾವ ನಿರ್ದಿಷ್ಟ ಕಾಲಮಿತಿಯೊಳಗೆ (Timeframe) ಪ್ರಕಾಶಕರಿಗೆ/ಲೇಖಕರಿಗೆ ಪಾವತಿಸಲಾಗುವುದು ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೭೯೧ (೮೫೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ಶೈಕ್ಷಣಿಕ ವರ್ಷಗಳಲ್ಲಿ ರಾಜ್ಯಾದ್ಯಂತ ಎಷ್ಟು ಒಟ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ್ದರು ;

(ಆ) ಸಲ್ಲಿಕೆಯಾದ ಅರ್ಜಿಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಈಗಾಗಲೇ ವಿದ್ಯಾರ್ಥಿ ವೇತನವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸಲಾಗಿದೆ ; ಇನ್ನೂ ಎಷ್ಟು ವಿದ್ಯಾರ್ಥಿಗಳ ಖಾತೆಗೆ ಹಣ ಜಮಾ ಆಗದೆ ಬಾಕಿ ಉಳಿದಿದೆ ; (ಜಿಲ್ಲಾವಾರು ಮತ್ತು ವರ್ಗವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಅರ್ಹ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿದ್ಯಾರ್ಥಿವೇತನ ತಲುಪದೆ ತಿಂಗಳುಗಟ್ಟಲೆ ವಿಳಂಬವಾಗುತ್ತಿರುವುದಕ್ಕೆ ಪ್ರಮುಖ ಕಾರಣಗಳೇನು ;

(ಈ) ರಾಜ್ಯ ಸರ್ಕಾರದ 'ಸ್ಟೇಟ್ ಸ್ಕಾಲರ್‌ಶಿಪ್ ಪೋರ್ಟಲ್ (SSP Portal) ನಲ್ಲಿ ಪದೇ ಪದೇ ಉಂಟಾಗುತ್ತಿರುವ ಸರ್ವರ್ ಸಮಸ್ಯೆಗಳು, ಆಧಾರ್ ಲಿಂಕಿಂಗ್ (Aadhar Seeding) ಮತ್ತು ಬ್ಯಾಂಕ್ ಖಾತೆಗಳ ಇ–ಕೆವೈಸಿ (e-KYC) ಗೊಂದಲಗಳಿಂದಾಗಿ ಲಕ್ಷಾಂತರ ಬಡ ವಿದ್ಯಾರ್ಥಿಗಳು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಳಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೭೯೨ (೮೫೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರು ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು ; ಬೋಧಕರ ಕೊರತೆಯಿಂದ ಶೈಕ್ಷಣಿಕ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಹುದ್ದೆಗಳ ಖಾಯಂ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದ ನೂತನ ಮತ್ತು ಹಳೆಯ ವಿಶ್ವವಿದ್ಯಾಲಯಗಳಲ್ಲಿ ಸುಸಜ್ಜಿತ ಪ್ರಯೋಗಾಲಯಗಳು (Lab) ಗ್ರಂಥಾಲಯಗಳು ಮತ್ತು ಡಿಜಿಟಲ್ ಮೂಲಸೌಕರ್ಯಗಳ ಕೊರತೆ ಇರುವುದು ನಿಜವೇ ;

(ಇ) ಕಳೆದ ಎರಡು ವರ್ಷಗಳಲ್ಲಿ ವಿಶ್ವವಿದ್ಯಾಲಯಗಳ ಮೂಲಸೌಕರ್ಯ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಮತ್ತು ಬಳಕೆಯಾದ ಅನುದಾನದ ವಿವರಗಳೇನು ;

(ಈ) ಕಳೆದ ಕೆಲವು ವರ್ಷಗಳಲ್ಲಿ ಸ್ಥಾಪನೆಯಾದ ನೂತನ ಜಿಲ್ಲಾ ವಿಶ್ವವಿದ್ಯಾಲಯಗಳಿಗೆ ಸ್ವಂತ ಕಟ್ಟಡ, ಜಮೀನು ಮತ್ತು ಅಗತ್ಯ ಶೈಕ್ಷಣಿಕ ಪಕರಗಳನ್ನು ಒದಗಿಸಲು ಸರ್ಕಾರ ರೂಪಿಸಿರುವ ವಿಶೇಷ ಕ್ರಿಯಾ ಯೋಜನೆ ಏನು ;

(ಉ) ಜಾಗತಿಕ ಮಟ್ಟದಲ್ಲಿ ರಾಜ್ಯದ ಪದವೀಧರರ ಸ್ಪರ್ಧಾತ್ಮಕತೆ ಹೆಚ್ಚಿಸಲು, ವಿಶ್ವವಿದ್ಯಾಲಯಗಳಲ್ಲಿ ಸಂಶೋಧನೆಗೆ (Research) ನೀಡುತ್ತಿರುವ ಪ್ರೋತ್ಸಾಹವೇನು ; ಕೈಗಾರಿಕಾ ವಲಯದ ಅಗತ್ಯಕ್ಕೆ ತಕ್ಕಂತೆ ಪಠ್ಯಕ್ರಮದ ಸುಧಾರಣೆ (Curriculum Reforms) ಮತ್ತು ಉದ್ಯೋಗ ಆಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೭೯೩ (೮೫೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಸದ್ಯ ಬಳಕೆಗೆ ಯೋಗ್ಯವಲ್ಲದ ಅತ್ಯಂತ ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಳೆಗಾಲದಲ್ಲಿ ಸೋರುವ ಮತ್ತು ಅಪಾಯಕಾರಿ ಕಟ್ಟಡಗಳಲ್ಲಿ ಮಕ್ಕಳು ಜೀವ ಭಯದಲ್ಲಿ ಕಲಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮಕ್ಕಳ ಸುರಕ್ಷತೆಗಾಗಿ ಇಂತಹ ಎಷ್ಟು ಕಟ್ಟಡಗಳನ್ನು ತಕ್ಷಣವೇ ಕೆಡವಲು (Demolish) ಆದೇಶಿಸಲಾಗಿದೆ ;

(ಇ) ಪ್ರಸ್ತುತ ರಾಜ್ಯಾದ್ಯಂತ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿಯಾಗಿ ಬೇಕಾಗಿರುವ ಒಟ್ಟು ಹೊಸ ಶಾಲಾ ಕೊಠಡಿಗಳು ಎಷ್ಟು ;

(ಈ) ರಾಜ್ಯದ ಎಷ್ಟು ಸರ್ಕಾರಿ ಶಾಲೆಗಳಲ್ಲಿ ಇಂದಿಗೂ ಸಹ ಹುಡುಗಿಯರಿಗೆ ಮತ್ತು ಹುಡುಗರಿಗೆ ಪ್ರತ್ಯೇಕ ಹಾಗೂ ಕ್ರಿಯಾತ್ಮಕ (Functional) ಶೌಚಾಲಯಗಳ ಸೌಲಭ್ಯವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಶೌಚಾಲಯಗಳಿಲ್ಲದ ಕಾರಣ ಗ್ರಾಮೀಣ ಭಾಗದ ಪ್ರೌಢ ಶಾಲಾ ಹೆಣ್ಣು ಮಕ್ಕಳು ಶಾಲೆ ಬಿಡುತ್ತಿರುವುದು (Dropout) ಸರ್ಕಾರದ ಗಮನಕ್ಕೆ ಬಂದಿದೆಯೇ ; ಶೂನ್ಯ ಶೌಚಾಲಯ ಹೊಂದಿರುವ ಶಾಲೆಗಳ ಸಮಸ್ಯೆ ನೀಗಿಸಲು ಕೈಗೊಂಡಿರುವ ತುರ್ತು ಕ್ರಮಗಳೇನು ;

(ಊ) ಶಾಲೆಗಳಲ್ಲಿ ಶೌಚಾಲಯಗಳಿದ್ದರೂ ನೀರಿನ ಸೌಲಭ್ಯವಿಲ್ಲದೆ ಅವು ಮೂಲೆಗುಂಪಾಗಿರುವುದು ನಿಜವೇ ಎಷ್ಟು ಶಾಲೆಗಳಿಗೆ ಇನ್ನು ಅಧಿಕೃತ ಕುಡಿಯುವ ನೀರು ಮತ್ತು ನಳದ (Tap Connection) ಸಂಪರ್ಕ ನೀಡುವುದು ಬಾಕಿ ಇದೆ ?

## ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಹುದ್ದೆ ಭರ್ತಿ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೭೯೪ (೯೨೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ, ಬೋಧಕೇತರ ಹುದ್ದೆಗಳೆಷ್ಟು : (ವಿಷಯವಾರು ವಿಭಾಗವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಹಲವಾರು ವರ್ಷಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅನುಮತಿ ನೀಡದಿರಲು ಕಾರಣಗಳೇನು ;

(ಇ) ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಖಾಯಂ ಬೋಧಕ ಬೋಧಕೇತರ ಹುದ್ದೆಗಳನ್ನು ತುಂಬದೆ ಇರುವುದರಿಂದ ಆಡಳಿತ ಮತ್ತು ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆ ಆಗುತ್ತಿದ್ದರು ಇದುವರೆವಿಗೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡದಿರಲು ಕಾರಣವೇನು ;

(ಈ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ?

## ೧೯೯೫ ರಿಂದ ೨೦೨೫ರ ಅವಧಿಯಲ್ಲಿ ಪ್ರಾರಂಭವಾದ ಕನ್ನಡ ಶಾಲೆಗಳ ಕುರಿತು

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೭೯೫ (೯೨೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫ ರಿಂದ ೨೦೨೫ರ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮದ ಪ್ರೌಢಶಾಲೆ ಮತ್ತು ಪದವಿ ಪೂರ್ವ ಶಾಲಾ ಕಾಲೇಜುಗಳೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಬೋಧಕ, ಬೋಧಕೇತರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕೊಳ್ಳಪಡಿಸಲು ಬೇಕಾಗಿರುವ ವೆಚ್ಚವೆಷ್ಟು ; (ವಿವರ ನೀಡುವುದು)

(ಈ) ಸದರಿ ಶಾಲಾ ಕಾಲೇಜುಗಳನ್ನು ಯಾವ ಕಾಲಮಿತಿಯಲ್ಲಿ ವೇತನಾನುದಾನಕ್ಕೆ ಒಳಪಡಿಸಲಾಗುತ್ತದೆ ?

## ಧಾರವಾಡ ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೬ (೮೨೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ಜಿಲ್ಲೆಗೆ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ಬರುವ ನಿಗಮಗಳಿಗೆ ಬಿಡಗಡೆಯಾದ ಅನುದಾನವೆಷ್ಟು ; (ನಿಗಮವಾರು ಮತ್ತು ವಿಧಾನಸಭಾ ಕ್ಷೇತ್ರಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿಡಗಡೆಯಾದ ಅನುದಾನದಲ್ಲಿ ಖರ್ಚು ಮಾಡಿದ ಅನುದಾನವೆಷ್ಟು; ಉಳಿಕೆಯಾದ ಅನುದಾನವೆಷ್ಟು ; ಯಾವ ಯಾವ ಕಾಮಗಾರಿಗೆ ಎಷ್ಟೆಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು, ಯೋಜನೆವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಸದರಿ ನಿಗಮಗಳಿಂದ ಕೊಳವೆ ಬಾವಿ ಕೊರೆಯಲು ಬಿಡುಗಡೆಯಾದ ಅನುದಾನವೆಷ್ಟು ;

(ಈ) ಬಿಡುಗಡೆಯಾದ ಅನುದಾನದಲ್ಲಿ ಕೊಳವೆ ಬಾವಿಗಳನ್ನು ಕೊರೆಯಲಾಗಿದೆಯೇ ; ಕೊರೆಸದೆ ಬಾಕಿ ಉಳಿದಿರುವ ಕಾಮಗಾರಿಗಳೆಷ್ಟು ? (ವಿಧಾನಸಭಾ ಕ್ಷೇತ್ರವಾರು, ನಿಗಮವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸ್ಥಿತಿಗತಿಯ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೭ (೮೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಂಗನವಾಡಿ ಕೇಂದ್ರಗಳ ಮೂಲಕ ಬಡ ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಆರೋಗ್ಯ ಸೌಲಭ್ಯಗಳು, ಶಿಕ್ಷಣ ಮತ್ತು ಪೌಷ್ಠಿಕಾಂಶದ ಸ್ಥಿತಿಯನ್ನು ಸುಧಾರಿಸುವ ಗುರಿ ಮತ್ತು ಉದ್ದೇಶಗಳನ್ನು ಸರ್ಕಾರ ಸಾಧಿಸಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕೆಲವೊಂದು ಅಂಗನವಾಡಿ ಕೇಂದ್ರಗಳು ಇಲ್ಲಿಯವರೆಗೂ ಬಾಡಿಗೆ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿ ಕಲಿಕೆ ಮಾಡುತ್ತಿರುವ ಮಕ್ಕಳಿಗೆ ಸರಿಯಾದ ಮೂಲಭೂತ ಸೌಕರ್ಯಗಳಿಲ್ಲದಿರುವುದು ಹಾಗೂ ಶೌಚಾಲಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಆಂಗ್ಲ ಮಾಧ್ಯಮದ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ ; ಹೌದಾದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಮತ್ತು ಈ ಶಾಲೆಗಳಿಗೆ ಶಿಕ್ಷಕರನ್ನು ನೇಮಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಈ) ಧಾರವಾಡ ಜಿಲ್ಲೆಗೆ ಹೊಸ ಅಂಗನವಾಡಿಗಳನ್ನು ತೆರೆಯಲು ಸಲ್ಲಿಕೆಯಾಗಿರುವ ಪ್ರಸ್ತಾವನೆಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೮ (೮೨೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಯಾವುವು ; ಸದರಿ ನಿಗಮಗಳಿಂದ ಸರ್ಕಾರವು ಸಾರ್ವಜನಿಕರಿಗೆ ನೀಡುತ್ತಿರುವ ಸೇವೆಗಳು ಯಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಸದರಿ ನಿಗಮಗಳಿಗೆ ಕಳೆದ ಮೂರು ವರ್ಷಗಳಿಂದ ಇಲ್ಲಿಯವರಿಗೂ ಬಿಡಗುಡೆಯಾಗಿರುವ ಅನುದಾನವೆಷ್ಟು ; (ವರ್ಷವಾರು, ಅನುದಾನವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಸದರಿ ಇಲಾಖೆಯ ನಿಗಮದಡಿಯಲ್ಲಿ ಧಾರವಾಡ ಜಿಲ್ಲೆಗೆ ನೀಡಿರುವ ಅನುದಾನವೆಷ್ಟು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಸದರಿ ನಿಗಮಗಳಲ್ಲಿ ಫಲಾನುಭವಿಗಳ ಆಯ್ಕೆಯನ್ನು ಯಾವ ರೀತಿ ಮಾಡಲಾಗುತ್ತದೆ ; ಫಲಾನುಭವಿಗಳ ಆಯ್ಕೆಯನ್ನು ಹೆಚ್ಚು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದಲ್ಲಿ ಹೆಚ್ಚುತ್ತಿರುವ ಮಾನವ–ವನ್ಯ ಮೃಗಗಳ ಸಂಘರ್ಷದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯ (೮೨೮) ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಮಾನವ–ವನ್ಯ ಮೃಗಗಳ ಸಂಘರ್ಷ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವನ್ಯಮೃಗಗಳ ಉಪಟಳವಿರುವ ಸ್ಥಳಗಳು ಯಾವುವು ಮತ್ತು ಯಾವ ವಿಧವಾದ ಸಂಘರ್ಷಗಳು ಉಂಟಾಗುತ್ತಿವೆ ; (ಕಳೆದ ೫ ವರ್ಷಗಳ ಪೂರ್ಣ ಮಾಹಿತಿಯನ್ನು ಜಿಲ್ಲಾವಾರು ಮತ್ತು ತಾಲ್ಲೂಕುವಾರು ನೀಡುವುದು)

(ಇ) ವನ್ಯಮೃಗಗಳ ಉಪಟಳದಿಂದ ನೊಂದ ಸಂತ್ರಸ್ತರಿಗೆ ನೀಡುತ್ತಿರುವ ನೆರವು ಮತ್ತು ಪರಿಹಾರಗಳು ಯಾವವು ಮತ್ತು ಕಳೆದ ೩ ವರ್ಷಗಳಲ್ಲಿ ವಿತರಿಸಿರುವ ನೆರವು ಮತ್ತು ಪರಿಹಾರಗಳ ಪೂರ್ಣ ವಿವರ ನೀಡುವುದು ;

(ಈ) ಸಮಗ್ರವಾಗಿ ವನ್ಯಜೀವಿ ಮಾನವ ಸಂಘರ್ಷವನ್ನು ತಡೆಯಲು ಮತ್ತು ಆಯಾ ಜಿಲ್ಲೆಗಳಲ್ಲಿರುವ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ನೀತಿ ನಿರೂಪಣೆಯನ್ನು ಮಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ವಿವರ ಮತ್ತು ಅಂಕಿ–ಅಂಶ ಸಹಿತ ಮಾಹಿತಿ ನೀಡುವುದು)

## ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿನ ಹಿಂದುಳಿದ ಇಲಾಖೆಯಡಿ ಬರುವ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೦ (೮೨೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ಕೊರತೆಯಿಂದಾಗಿ ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ಪಡೆಯಲು ತೀವ್ರ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಲ್ಲಿ ಸದರಿ ಜಿಲ್ಲೆಗಳ ವಿದ್ಯಾರ್ಥಿ ನಿಲಯಗಳಲ್ಲಿ ಲಭ್ಯವಿರುವ ಒಟ್ಟು ಪ್ರವೇಶಾತಿ ಸಂಖ್ಯೆ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಹಾಗೂ ಪ್ರವೇಶ ಪಡೆದ

ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಪೈಕಿ ಸ್ಥಳೀಯ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಗಳ ವಿದ್ಯಾರ್ಥಿಗಳಿಗೆ ಸಮರ್ಪಕ ಅವಕಾಶ ದೊರೆಯುವಂತೆ ಪ್ರವೇಶಾತಿಯಲ್ಲಿ ಆದ್ಯತೆ ನೀಡಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ ; ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಹೊಸ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಲು ಅಥವಾ ಹೀಗಿರುವ ವಿದ್ಯಾರ್ಥಿ ನಿಲಯಗಳ ಆಸನ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾವನೆ ಇದೆಯೇ ;

(ಈ) ರಾಜ್ಯದಲ್ಲಿರುವ ಒಟ್ಟು ವಿದ್ಯಾರ್ಥಿ ನಿಲಯಗಳು ಎಷ್ಟು; ಅವುಗಳಿಗೆ ಮಂಜೂರಾದ ವಿವಿಧ ವೃಂದದ ಒಟ್ಟು ಹುದ್ದೆಗಳೆಷ್ಟು ಮತ್ತು ಪ್ರಸ್ತುತ ಖಾಲಿ ಇರುವ ಒಟ್ಟು ಹುದ್ದೆಗಳು ಎಷ್ಟು ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅನುದಾನದ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೧ (೮೧೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಪ್ರತಿ ವರ್ಷ ನಿಗಧಿಪಡಿಸಿರುವ ಅನುದಾನವೆಷ್ಟು ; ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಆ) ಇಲಾಖೆಯಿಂದ ಪ್ರತಿವರ್ಷ ಜಯಂತಿ ಆಚರಣೆ ಮತ್ತು ಸಾಂಸ್ಕೃತಿ ಕಾರ್ಯಕ್ರಮಗಳಿಗೆ ನಿಗಧಿಪಡಿಸಿರುವ ಅನುದಾನವೆಷ್ಟು ;: (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಜಯಂತಿ ಆಚರಣೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಎಷ್ಟು ಸಂಘ/ಸಂಸ್ಥೆಗಳಿಗೆ ಮಂಜೂರಾಗಿರುವ ಅನುದಾನವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಡಾ॥ ರಾಜ್ ಕುಮಾರ್ ಶತಮಾನೋತ್ಸವ ಆಚರಣೆ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೨ (೮೧೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೮ ರ ವರ್ಷಕ್ಕೆ ವರನಟ ಪದ್ಮಭೂಷಣ ಡಾ॥ ರಾಜ್ ಕುಮಾರ್ ರವರಿಗೆ ೧೦೦ ವರ್ಷಗಳು ತುಂಬುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರದ ವತಿಯಿಂದ ಶತಮಾನೋತ್ಸವ ವರ್ಧಂತಿ (ಜಯಂತಿ) ಯನ್ನು ವಿಜೃಂಭಣೆಯಿಂದ ಆಚರಣೆ ಮಾಡುವ ವಿಷಯ ಸರ್ಕಾರದ ಮುಂದಿದೆಯೇ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ವರನಟ ಪದ್ಮಭೂಷಣ ಡಾ॥ ರಾಜ್ ಕುಮಾರ್ ರವರ ಶತಮಾನೋತ್ಸವಕ್ಕೆ ಸಿದ್ಧತೆ ಆರಂಭಿಸಲಾಗಿದೆಯೇ ; ಈ ಶತಮಾನೋತ್ಸವಕ್ಕೆ ರೂಪುರೇಷಗಳನ್ನು ಮಾಡಲಾಗಿದೆಯೇ ? (ಮಾಹಿತಿ ನೀಡುವುದು)

## ಮೈಸೂರು ಕರ್ನಾಟಕ ಕಲಾಮಂದಿರ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೩ (೮೧೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಕರ್ನಾಟಕ ಕಲಾಮಂದಿರ ಅಭಿವೃದ್ಧಿಪಡಿಸಲು ಸರ್ಕಾರ ನಿಗದಿಪಡಿಸಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಆ) ಸದರಿ ಕಲಾಮಂದಿರದ ನವೀಕರಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆಯೇ ; ನವೀಕರಣ ಕಾರ್ಯಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಸದರಿ ಕಲಾಮಂದಿರ ಕಾಮಗಾರಿಗಳನ್ನು ಶೀಘ್ರವಾಗಿ ಕೈಗೊಳ್ಳಲು ಸರ್ಕಾರ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಅತೀ ಹಿಂದುಳಿದ ಸಮುದಾಯದ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್ ನಿರ್ಮಿಸುವ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೪ (೮೧೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ಸಮುದಾಯದ ಅಥವಾ ಕುಲಕಸುಬು ಆಧಾರಿತ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್‌ಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಹಿಂದುಳಿದ ಸಮುದಾಯದ ಅಥವಾ ಕುಲಕಸುಬು ಆಧಾರಿತ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್‌ಗಳನ್ನು ನಿರ್ಮಿಸುವ ಯೋಜನೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರ ಸದರಿ ಅನುದಾನವನ್ನು ಯಾವ ಕಾಲಮಿತಿಯೊಳಗೆ ಪೂರೈಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಸರ್ಕಾರ ಹೆಚ್.ಎಂ.ಟಿ.ಗೆ ಹಂಚಿಗೆ ಮಾಡಿರುವ ಜಾಗವನ್ನು ಹಿಂದಕ್ಕೆ ನೀಡಲು ಸೂಚಿಸಿರುವ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೫ (೮೦೪) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಹೆಚ್.ಎಂ.ಟಿ ಕಾರ್ಖಾನೆಗೆ ರಾಜ್ಯ ಸರ್ಕಾರ ಹಂಚಿಕೆ ಮಾಡಿರುವ ಭೂಮಿ ಎಷ್ಟು ; ಭೂಮಿ ಹಂಚಿಕೆ ಮಾಡಿದ್ದು ಯಾವಾಗ ; ಭೂಮಿ ಹಂಚಿಕೆ ಸಂದರ್ಭದಲ್ಲಿ ಆಗಿರುವ ಒಡಂಬಡಿಕೆಗಳೇನು ; (ಒಡಂಬಡಿಕೆಯ ಪ್ರತಿ ಒದಗಿಸುವುದು)

(ಆ) ಹೆಚ್.ಎಂ.ಟಿ ಕಾರ್ಖಾನೆಗೆ ನೀಡಿರುವ ಭೂಮಿಯನ್ನು ವಾಪಾಸ್ ನೀಡುವಂತೆ ಸೂಚನೆ ನೀಡಲು ಕಾರಣಗಳೇನು ; ಈ ಜಾಗಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಗಳಲ್ಲಿ ರಾಜ್ಯ ಸರ್ಕಾರ ಹಾಕಿರುವ ಅಫಿಡವಿಟ್/ಮಧ್ಯಂತರ ಅರ್ಜಿಗಳಲ್ಲಿನ ಅಂಶಗಳೇನು ; ಸುಪ್ರೀಂ ಕೋರ್ಟ್‌ಗೆ ಸರ್ಕಾರ ಹೊಸದಾಗಿ ಪ್ರಮಾಣ ಪತ್ರ ಸಲ್ಲಿಸಿದೆಯೇ ;

(ಇ) ಹೆಚ್.ಎಂ.ಟಿ ಅಧೀನದಲ್ಲಿರುವ ಭೂಮಿಯನ್ನು ಮಾರಾಟ ಮಾಡಲು ಈ ಹಿಂದೆ ರಾಜ್ಯ ಸರ್ಕಾರ ಅನುಮತಿ ನೀಡಿದೆಯೇ ; ಹಾಗಿದ್ದಲ್ಲಿ, ಅನುಮತಿ ನೀಡುವಾಗ ವಿಧಿಸಿದ್ದ ಷರತ್ತುಗಳೇನು ;

(ಈ) ಹೆಚ್.ಎಂ.ಟಿ. ಹೊರತುಪಡಿಸಿ ಈ ಅರಣ್ಯ ಪ್ರದೇಶದಲ್ಲಿ ಎಷ್ಟು ಎಕರೆ ಪ್ರದೇಶವನ್ನು ಯಾವ ಉದ್ದೇಶಕ್ಕೆ ಯಾರಿಗೆ, ಯಾವಾಗ ಹಂಚಿಕೆ ಮಾಡಲಾಗಿದೆ ? (ಸಮಗ್ರ ವಿವರ ಒದಗಿಸುವುದು)

## ಗೃಹಲಕ್ಷ್ಮಿ ಯೋಜನೆಯ ಬಾಕಿ ಹಣ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೬ (೮೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮಿ ಯೋಜನೆಯ ಅರ್ಹ ಫಲಾನುಭವಿಗಳೆಷ್ಟು ; ಯೋಜನೆ ಜಾರಿ ದಿನದಿಂದ ೨೦೨೬ ಜುಲೈ ೩೧ ರವರೆಗೆ ಎಷ್ಟು ಫಲಾನುಭವಿಗಳ ಖಾತೆಗೆ ಹಣ ಜಮೆ ಆಗಿದೆ ; (ಜಿಲ್ಲಾವಾರು–ಮಾಹೆಯಾನ ವಿವರ ಒದಗಿಸುವುದು)

(ಆ) ಗೃಹಲಕ್ಷ್ಮಿ ಯೋಜನೆಯ ೨೦೨೫ರ ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಹಿಂಬಾಕಿ ಹಣ ಫಲಾನುಭವಿಗಳ ಖಾತೆಗೆ ಬಿಡುಗಡೆ ಆಗಿದೆಯೇ ; ಯಾವ ದಿನಾಂಕದಂದು ಬಿಡುಗಡೆ ಆಗಿದೆ ; ಆರ್ಥಿಕ ಇಲಾಖೆಯಿಂದ ಬಿಡುಗಡೆ ಆದ ದಿನಾಂಕ ಯಾವುದು ; (ಸಮಗ್ರ ಮಾಹಿತಿ ನೀಡುವುದು)

(ಇ) ಮಹಾಲೇಖಪಾಲಕರ ಕಛೇರಿ ಗೃಹಲಕ್ಷ್ಮಿ ಯೋಜನೆ ಅನುಷ್ಠಾನದಲ್ಲಿ ಯಾವ ಯಾವ ಲೋಪಗಳನ್ನು ಪತ್ತೆಹಚ್ಚಿದೆ; ಸರ್ಕಾರ ಸಿ.ಎ.ಜಿ.ಗೆ ನೀಡಿರುವ ಉತ್ತರವೇನು ; ಸಾವಿರಾರು ಫಲಾನುಭವಿಗಳು ಒಂದೇ ಖಾತೆ ಹೊಂದಿರುವುದರ ಕುರಿತು ಸರ್ಕಾರದ ಕ್ರಮವೇನು ;

(ಈ) ಗೃಹಲಕ್ಷ್ಮಿ ಯೋಜನೆಯಿಂದ ಎಷ್ಟು ಫಲಾನುಭವಿಗಳನ್ನು ಕೈಬಿಡಲಾಗಿದೆ ; ಫಲಾನುಭವಿಗಳನ್ನು ಕೈಬಿಡುವಾಗ ಸರ್ಕಾರ ಯಾವ ಮಾನದಂಡವನ್ನು ಅನುಸರಿಸಿದೆ ? (ಜಿಲ್ಲಾವಾರು ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳಿಗೆ ಶಾಲಾ ಪೂರ್ವ ಶಿಕ್ಷಣ ಕಿಟ್ ವಿತರಣೆ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೭ (೮೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು ; ಈ ಅಂಗನವಾಡಿಗಳಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳಿಗೆ ಶಾಲಾ ಪೂರ್ವ ಶಿಕ್ಷಣ ಕಿಟ್‌ಗಳನ್ನು ವಿತರಿಸಲು ಸರ್ಕಾರ ನಿರ್ಧರಿಸಿದೆಯೇ ; ಯಾವ ಯೋಜನೆಯಡಿ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ; ಈ ಕಿಟ್‌ಗಳು ಯಾವ ಯಾವ ವಸ್ತುಗಳನ್ನು ಹೊಂದಿರುತ್ತವೆ ;

(ಇ) ಕಿಟ್‌ಗಳನ್ನು ಪೂರೈಸಲು ಟೆಂಡರ್ ಕರೆಯಲಾಗಿದೆಯೇ ; ಟೆಂಡರ್ ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ಪ್ರತಿ ವಸ್ತುವಿಗೆ ನಮೂದಿಸಿರುವ ಮೊತ್ತೆ ಎಷ್ಟು ; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ; (ಸಮಗ್ರ ವಿವರ ನೀಡುವುದು)

(ಈ) ಕಿಟ್‌ಗಳ ಪೂರೈಕೆ ಆಗಿದೆಯೇ ; ಎಷ್ಟು ಕಿಟ್‌ಗಳನ್ನು ಪೂರೈಸಲಾಗಿದೆ ; ಈವರೆಗೆ ಎಷ್ಟು ಅಂಗನವಾಡಿಗಳಿಗೆ ಕಿಟ್‌ಗಳನ್ನು ವಿತರಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಪರಿಶಿಷ್ಟ ಜನಾಂಗದವರ ಮೇಲಿನ ಜಾತಿ ದೌರ್ಜನ್ಯ ಪ್ರಕರಣಗಳ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೮ (೮೦೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಶಿಷ್ಟ ಜನಾಂಗದವರ ಮೇಲೆ ದೌರ್ಜನ್ಯ ಪ್ರಕರಣ ಪ್ರಮಾಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷದಿಂದ ರಾಜ್ಯದಲ್ಲಿ ಪರಿಶಿಷ್ಟ ಜನಾಂಗದವರ ಮೇಲೆ ನಡೆದಿರುವ ಜಾತಿ ದೌರ್ಜನ್ಯ (ಅಟ್ರಾಸಿಟಿ) ಸಂಬಂಧಪಟ್ಟಂತೆ ಎಷ್ಟು ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಷ್ಟು ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಾಗಿವೆ ; ಎಫ್.ಐ.ಆರ್. ದಾಖಲಾಗದ ಪ್ರಕರಣಗಳ ಸಂಖ್ಯೆ ಎಷ್ಟು ; ಎಫ್.ಐ.ಆರ್ ದಾಖಲಿಸದಿರಲು ಕಾರಣಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಈ) ನ್ಯಾಯಾಲಯಗಳಲ್ಲಿ ಎಷ್ಟು ಎಫ್.ಐ.ಆರ್ ಗಳು ರದ್ದುಗೊಂಡಿವೆ ; ಎಷ್ಟು ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಕೆ ಮಾಡದಿರುವ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ವನ್ಯಜೀವಿ ದಾಳಿಯಿಂದ ಸಾವಿಗೀಡಾದವರಿಗೆ ಪರಿಹಾರ ನೀಡುವ ಬಗ್ಗೆ ಹಾಗೂ ದಾಳಿ ತಡೆಯುವ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೯ (೮೦೨) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ರಾಜ್ಯದಲ್ಲಿ ಆನೆ ಸೇರಿದಂತೆ ವನ್ಯಜೀವಿ ದಾಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; ದಾಳಿಯಿಂದ ಮೃತಪಟ್ಟವರ ಎಷ್ಟು ಕುಟುಂಬಗಳಿಗೆ ಪರಿಹಾರ ಪಾವತಿಸಲಾಗಿದೆ ; ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು ; (ಜಿಲ್ಲಾವಾರು ವರ್ಷವಾರು ವಿವರ ನೀಡುವುದು ;

(ಆ) ಆನೆ ಮತ್ತು ವನ್ಯಜೀವಿ ದಾಳಿಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಾಕಿಕೊಂಡಿರುವ ಕಾರ್ಯ ಯೋಜನೆಗಳೇನು ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಆನೆ ಶಿಬಿರಗಳಿವೆ ; ಈ ಶಿಬಿರಗಳಲ್ಲಿ ಎಷ್ಟು ಆನೆಗಳಿವೆ ; (ವಿವರ ನೀಡುವುದು)

(ಈ) ಇತ್ತೀಚೆಗೆ ದುಬಾರೆ ಆನೆ ಶಿಬಿರದಲ್ಲಿ ಆದ ದುರ್ಘಟನೆಗೆ ಕಾರಣಕರ್ತರು ಯಾರು ; ಮೃತರ ಕುಟುಂಬಗಳಿಗೆ ಸರ್ಕಾರ ಏನು ಪರಿಹಾರ ನೀಡಿದೆ ;

(ಉ) ಕರ್ನಾಟಕ ಉಚ್ಚ ನ್ಯಾಯಾಲಯದ ಸಮಿತಿ ಆನೆ ಶಿಬಿರಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದು ಯಾವಾಗ ; ಸದರಿ ಶಿಫಾರಸ್ಸುಗಳನ್ನು ಸರ್ಕಾರ ಜಾರಿಗೆ ತರಲು ಇರುವ ತೊಂದರೆಗಳೇನು ?

## ಅತಿಥಿ ಉಪನ್ಯಾಸಕರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೦ (೮೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಅತಿಥಿ ಉಪನ್ಯಾಸಕರ ನೇಮಕ ಮಾಡಲಾಗಿದೆ ; (ಜಿಲ್ಲಾವಾರು, ವಿಷಯವಾರು ಹಾಗೂ ಸದರಿ ಅಭ್ಯರ್ಥಿಗಳು ಪಿಹೆಚ್‌ಡಿ ಪಡೆದಿರುವ ಕಾಲೇಜು ಹಾಗೂ ರಾಜ್ಯವಾರು ವಿವರ ನೀಡುವುದು)

(ಆ) ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಹುದ್ದೆ ಪಡೆದುಕೊಳ್ಳಲು ಇತರ ರಾಜ್ಯಗಳಲ್ಲಿ ಪಿಹೆಚ್‌ಡಿ ಪಡೆದು ಅರ್ಜಿ

ಸಲ್ಲಿಸಿ ಕರ್ತವ್ಯ ನಿರ್ವಹಿಸುತ್ತಿರುವ ಅಧ್ಯಾಪಕರ ಸಂಖ್ಯೆ ಎಷ್ಟು; (ಜಿಲ್ಲಾವಾರು, ವಿಷಯುವಾರು ಹೆಸರಿನೊಂದಿಗೆ ವಿವರ ನೀಡುವುದು)

(ಇ) ನಕಲಿ ಅಥವಾ ಮೋಸದ ಪಿಹೆಚ್‌ಡಿ ಪ್ರಮಾಣ ಪತ್ರಗಳನ್ನು ಸಲ್ಲಿಸಿ ನೌಕರಿ ಪಡೆದಿರುವ ಅಭ್ಯರ್ಥಿಗಳ ಮೇಲೆ ಕೈಗೊಂಡಿರುವ ಕಾನೂನು ಕ್ರಮಗಳೇನು ?

## ಅರಣ್ಯ ಉತ್ಪನ್ನಗಳ ಮಾರಾಟ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೧ (೮೭೧) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯ ಅರಣ್ಯದ ಉತ್ಪನ್ನ ಮತ್ತು ಪೂರಕ ಉತ್ಪನ್ನಗಳ ಮಾರಾಟ ಹಾಗೂ ಮರು ಮಾರಾಟಗಾರರಿಗೆ ಯಾವ ರೀತಿಯ ಅನುಮತಿಯನ್ನು ನೀಡುತ್ತದೆ ; (ನಿಯಮದ ಪ್ರತಿಯೊಂದಿಗೆ ವಿವರ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ಅರಣ್ಯ ಉತ್ಪನ್ನ ಮತ್ತು ಪೂರಕ ಉತ್ಪನ್ನಗಳನ್ನು ಆನ್‌ಲೈನ್ ಆ್ಯಪ್ ಆಧಾರಿತ ಹಾಗೂ ವೆಬ್‌ಸೈಟ್ ಆಧಾರಿತ ವ್ಯವಸ್ಥೆಯ ಮೂಲಕ ಗ್ರಾಹಕರಿಗೆ ನೇರವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇತ್ತೀಚಿನ ದಿನಗಳಲ್ಲಿ ಆನ್‌ಲೈನ್ ಆ್ಯಪ್ ಆಧಾರಿತ ಹಾಗೂ ವೆಬ್‌ಸೈಟ್ ಆಧಾರಿತ ಇಂಟೀರಿಯರ್ಸ್ ಡೆಕೊರೇಟಿವ್ ಸಂಸ್ಥೆಗಳು ದೊಡ್ಡ ಪ್ರಮಾಣದಲ್ಲಿ ಅರಣ್ಯದ ಮರಗಳಿಂದ/ಇತರೆ ಅರಣ್ಯದ

ವಸ್ತುಗಳಿಂದ ತಯಾರಿಸಲಾಗುವ ಪ್ಲೈವುಡ್ ಬಳಸಿ ವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯ ಅರಣ್ಯದ ಉಪ ಉತ್ಪನ್ನಗಳನ್ನು ಮಾರಾಟ ಮಾಡಲು ಅರಣ್ಯ ಇಲಾಖೆಯ ಅನುಮತಿ ಅಥವಾ ನಿರಾಪೇಕ್ಷಣಾ ಪತ್ರದ ಅವಶ್ಯಕತೆ ಹಾಗೂ ಸರ್ಕಾರಕ್ಕೆ ಸೂಕ್ತ ಶುಲ್ಕ ಪಾವತಿಯ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) Homelane, HSR Sector2, #1147, 3rd floor, Sri Ranga Complex, 22nd cross road, Parangi Palya Bengaluru-560 102 ಇಂಟೀರಿಯರಸ್ ಕಂಪನಿಯು ಅರಣ್ಯ ಇಲಾಖೆಯಿಂದ ಯಾವ ರೀತಿಯ ಅನುಮತಿ ಪಡೆದಿದೆ ? (ವಿವರ ಒದಗಿಸುವುದು)

## ಮಕ್ಕಳಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೨ (೮೭೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ಶಾಲೆಗಳು ಯಾವುವು ; ಅದರಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; ಶಾಲಾ ಮಕ್ಕಳಿಗೆ ಯಾವ ಯಾವ ಉಚಿತ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ಒದಗಿಸುವುದು)

(ಆ) ಶಾಲಾ ಮಕ್ಕಳಿಗೆ ಶೂ. ಪುಸ್ತಕ, ಸಮವಸ್ತ್ರ ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ ; (ಟೆಂಡರ್ ಪಡೆದವರ ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಶೂ, ಪುಸ್ತಕ, ಸಮವಸ್ತ್ರ ಹಾಗೂ ಬ್ಯಾಗುಗಳನ್ನು ಯಾವ ಮೊತ್ತಕ್ಕೆ ಖರೀದಿಸಲಾಗುತ್ತಿದೆ ; (ಪ್ರತಿಯೊಂದು ವಸ್ತುವಿನ ಹೆಸರು ಕಂಪನಿಯ ಬ್ರಾಂಡ್‌ನೊಂದಿಗೆ ವಿವರ ನೀಡುವುದು)

(ಈ) ವಸತಿ ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳ ಸಂಖ್ಯೆ ಎಷ್ಟು ; ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳಿಗೆ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಎಷ್ಟು ಮಕ್ಕಳಿಗೆ ವಿತರಿಸಲಾಗಿದೆ ; (ಶಾಲಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸಮಾಜ ಕಲ್ಯಾಣ ಇಲಾಖೆಯಿಂದ ಸ್ಕೂಲ್ ಕಿಟ್ ನೀಡಿದ ಬಳಿಕ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಅದೇ ಮಕ್ಕಳಿಗೆ ನೀಡಿದಲ್ಲಿ ಒಂದೇ ಮಗುವಿಗೆ ಎರಡು ಕಿಟ್‌ಗಳನ್ನು ನೀಡಿದಂತಾಗುತ್ತಿದ್ದು, ಈ ಕುರಿತು ಸರ್ಕಾರ ಯಾವ ಕ್ರಮವಹಿಸಿದೆ ?

## ಪರಿಶಿಷ್ಟ ಪಂಗಡಗಳ ಇಲಾಖೆಯಿಂದ ನಡೆಸಲ್ಪಡುವ ಶಾಲೆಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೩ (೮೭೩) ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಪಂಗಡಗಳ ಇಲಾಖೆಯಿಂದ ನಡೆಸಲ್ಪಡುವ ಶಾಲೆಗಳು ಯಾವುವು ; ಅದರಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; ಶಾಲಾ ಮಕ್ಕಳಿಗೆ ಯಾವ ಯಾವ ಉಚಿತ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ನೀಡುವುದು)

(ಆ) ಶಾಲಾ ಮಕ್ಕಳಿಗೆ ಶೂ, ಪುಸ್ತಕ, ಸಮವಸ್ತ್ರ ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ ; ಟೆಂಡರ್ ಪಡೆದವರ ವಿವರದೊಂದಿಗೆ ಮಾಹಿತಿ ನೀಡುವುದು ;

(ಇ) ಶೂ. ಪುಸ್ತಕ, ಸಮವಸ್ತ್ರ ಹಾಗೂ ಬ್ಯಾಗುಗಳನ್ನು ಯಾವ ಮೊತ್ತಕ್ಕೆ ಖರೀದಿಸುತ್ತಿದೆ ; (ಪ್ರತಿಯೊಂದು ವಸ್ತುವಿನ ಹೆಸರು ಕಂಪನಿಯ ಬ್ರಾಂಡ್‌ನೊಂದಿಗೆ ವಿವರ ನೀಡುವುದು ;

(ಈ) ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳ ಸಂಖ್ಯೆ ಎಷ್ಟು: ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳಿಗೆ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಎಷ್ಟು ಮಕ್ಕಳಿಗೆ ವಿತರಿಸಲಾಗಿದೆ ; (ಶಾಲಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಪರಿಶಿಷ್ಟ ಪಂಗಡಗಳ ಇಲಾಖೆಯಿಂದ ಸ್ಕೂಲ್ ಕಿಟ್ ನೀಡಿದ ಬಳಿಕ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಅದೇ ಮಕ್ಕಳಿಗೆ ನೀಡಿದ್ದಲ್ಲಿ ಒಂದೇ ಮಗುವಿಗೆ ಎರಡು ಕಿಟ್‌ಗಳನ್ನು ನೀಡಿದಂತಾಗುತ್ತಿದ್ದು, ಈ ಕುರಿತು ಸರ್ಕಾರ ಯಾವ ಕ್ರಮವಹಿಸಿದೆ ?

## ಕಾರ್ಮಿಕರ ಮಕ್ಕಳ ಸಂಖ್ಯೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೪ (೮೭೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ಶಾಲೆಗಳು ಯಾವುವು ; ಅದರಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; ಶಾಲಾ ಮಕ್ಕಳಿಗೆ ಯಾವ ಯಾವ ಉಚಿತ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ನೀಡುವುದು)

(ಆ) ಶಾಲಾ ಮಕ್ಕಳಿಗೆ ಶೂ,ಪುಸ್ತಕ, ಸಮವಸ್ತ್ರ ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ ; ಟೆಂಡರ್ ಪಡೆದವರ ವಿವರದೊಂದಿಗೆ ಮಾಹಿತಿ ನೀಡುವುದು ;

(ಇ) ಶೂ. ಪುಸ್ತಕ, ಸಮವಸ್ತ್ರ ಹಾಗೂ ಬ್ಯಾಗುಗಳನ್ನು ಯಾವ ಮೊತ್ತಕ್ಕೆ ಖರೀದಿಸುತ್ತಿದೆ ; (ಪ್ರತಿಯೊಂದು ವಸ್ತುವಿನ ಹೆಸರು ಕಂಪನಿಯ ಬ್ರಾಂಡ್‌ನೊಂದಿಗೆ ವಿವರ ನೀಡುವುದು )

(ಈ) ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳ ಸಂಖ್ಯೆ ಎಷ್ಟು ; ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳಿಗೆ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಎಷ್ಟು ಮಕ್ಕಳಿಗೆ ವಿತರಿಸಲಾಗಿದೆ ; (ಶಾಲಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸ್ಕೂಲ್ ಕಿಟ್ ನೀಡಿದ ಬಳಿಕ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಅದೇ ಮಕ್ಕಳಿಗೆ ನೀಡಿದ್ದಲ್ಲಿ ಒಂದೇ ಮಗುವಿಗೆ ಎರಡು ಕಿಟ್‌ಗಳನ್ನು ನೀಡಿದಂತಾಗುತ್ತಿದ್ದು, ಈ ಕುರಿತು ಸರ್ಕಾರ ಯಾವ ಕ್ರಮವಹಿಸಿದೆ ?

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಮೈಸೂರು ಇಲ್ಲಿನ ಲೆಕ್ಕ ಪರಿಶೋಧನೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೧೫ (೮೩೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ. ಮೈಸೂರು ಇಲ್ಲಿಯ ರಾಜ್ಯ ಲೆಕ್ಕಪತ್ರ ಹಾಗೂ ಲೆಕ್ಕಪರಿಶೋಧನೆ ಇಲಾಖೆಯಿಂದ ವಾರ್ಷಿಕ ಲೆಕ್ಕ ಪರಿಶೋಧನಾ ವರದಿಗಳನ್ನು ಒದಗಿಸುವುದು ;

(ಆ) ಸದರಿ ವಿವಿಗೆ ಸರ್ಕಾರದ ಅನುದಾನ ಮತ್ತು ಲಭ್ಯವಿರುವ ಹಾಲಿ ಪೂರ್ಣ ಆರ್ಥಿಕ ನಿಧಿಯ ವಿವರವನ್ನು ಒದಗಿಸುವುದು ; ವಿವಿ ವೆಚ್ಚ ಮಿತವ್ಯಯಕ್ಕೆ ಸರ್ಕಾರದಿಂದ ಸೂಚಿಸಿರುವ ಕ್ರಮಗಳು ಹಾಗೂ ಆದೇಶಗಳ ವಿವರ ಒದಗಿಸುವುದು ;

(ಇ) ಕಳೆದ ಎರಡು ವರ್ಷಗಳಲ್ಲಿ ವಿವಿಯಲ್ಲಿ ವೇತನ, ಮೂಲಸೌಕರ್ಯ, ವಿದ್ಯಾರ್ಥಿ ಸೇವೆಗಳು, ಗುತ್ತಿಗೆದಾರರ ಪಾವತಿ ವೆಚ್ಚ ಮತ್ತು ಅಧ್ಯಯನ ಕೇಂದ್ರಗಳ ವೆಚ್ಚದ ವಿವರಗಳನ್ನು ಒದಗಿಸುವುದು :

(ಈ) ಸದರಿ ವಿವಿಗೆ ಸಂಬಂಧಿಸಿದಂತೆ ರಾಜ್ಯ ಉನ್ನತ ಶಿಕ್ಷಣ ಇಲಾಖೆಯಿಂದ ವಿವಿ ಬ್ಯಾಂಕ್ (SBI, HDFC & AXIS) ಖಾತೆಗಳನ್ನು ಸ್ಥಗಿತ ಗೊಳಿಸುವಂತೆ ಆದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸದರಿ ಆದೇಶದ ಅನುಷ್ಠಾನದ ಪ್ರಗತಿಯ ಮಾಹಿತಿಯನ್ನು ಒದಗಿಸುವುದು)

## ಪ್ರಾಥಮಿಕ ಶಾಲೆಗಳಲ್ಲಿ ಮಧ್ಯಾಹ್ನ ಉಪಹಾರ ಯೋಜನೆ ಹಾಗೂ ಆನ್‌ಲೈನ್‌ನಲ್ಲಿ ಹಾಜರಾತಿ ದಾಖಲಿಸುತ್ತಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೧೬ (೮೩೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ SATS, UDISE, ಮಧ್ಯಾಹ್ನ ಉಪಹಾರ ಯೋಜನೆ ಮಕ್ಕಳ ಹಾಜರಾತಿ ಎಲ್ಲವನ್ನು ಅನ್‌ಲೈನ್‌ನಲ್ಲಿ ದಾಖಲಿಸುತ್ತಿದ್ದು ಇದರಿಂದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಒತ್ತಡ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಿಕ್ಷಕರ ಮೇಲಿನ ಒತ್ತಡ ತಗ್ಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಪ್ರಾಥಮಿಕ ಶಾಲೆಗಳಲ್ಲಿ ಅಥವಾ ಕ್ಲಸ್ಟರ್‌ಗಳಲ್ಲಿ ಅನ್‌ಲೈನ್ ಕೆಲಸಗಳನ್ನು ನಿರ್ವಹಿಸಲು ಗುತ್ತಿಗೆ ಆಧಾರದ ಮೇಲೆ ಕಂಪ್ಯೂಟರ್ ಆಪರೇಟರ್‌ಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಯೋಚಿಸಿದೆಯೇ ?

## ಜಿಲ್ಲಾಧಿಕಾರಿಗಳು ಮಂಜೂರು ಮಾಡಿದ ಭೂಮಿಗಳು ನಂತರ "Minor Forest" ಎಂದು ದಾಖಲಾಗಿರುವ ಪ್ರಕರಣಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ ) :–**

೮೧೭ (೮೩೭) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾಧಿಕಾರಿಗಳು ಮಂಜೂರು ಮಾಡಿದ ಭೂಮಿಗಳು ನಂತರ "Minor Forest" ಎಂದು ದಾಖಲಾಗಿರುವ ಪ್ರಕರಣಗಳು ರಾಜ್ಯದಲ್ಲಿ ಎಷ್ಟು ಇವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರದ ಭೂ ಮಂಜೂರಾತಿಯ ಆಧಾರದ ಮೇಲೆ ಹಲವು ದಶಕಗಳಿಂದ ಕೃಷಿ ಮಾಡುತ್ತಿರುವ ರೈತರ ಹಕ್ಕುಗಳನ್ನು ಸರ್ಕಾರ ರಕ್ಷಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) "Minor Forest" ಎಂದು ದಾಖಲಾದ ಭೂಮಿಗಳ ಮ್ಯೂಟೇಶನ್ ಅಥವಾ ಹಕ್ಕು ನೋಂದಣಿಯನ್ನು ನಿರ್ಬಂಧಿಸುವ ಯಾವುದೇ ಸರ್ಕಾರಿ ಸುತ್ತೋಲೆಗಳು ಜಾರಿಯಲ್ಲಿವೆಯೇ ; (ಇದ್ದರೆ ಅವುಗಳ ವಿವರಗಳನ್ನು ನೀಡುವುದು)

(ಈ) ಸರ್ಕಾರಿ ಭೂ ಮಂಜೂರಾತಿಗಳನ್ನು ಕ್ರಮಬದ್ಧಗೊಳಿಸಿ, ದೀರ್ಘಕಾಲದ ಕೃಷಿಕರ ಹಕ್ಕುಗಳನ್ನು ರಕ್ಷಿಸಲು ಸರ್ಕಾರ ಯಾವುದೇ ವಿಶೇಷ ನೀತಿ ಅಥವಾ ಕಾನೂನು ರೂಪಿಸಲು ಉದ್ದೇಶಿಸಿದೆಯೇ ;

(ಉ) "Minor Forest" ಸಂಬಂಧಿತ ಭೂ ವಿವಾದಗಳನ್ನು ಇತ್ಯರ್ಥಪಡಿಸಲು ಸರ್ಕಾರ ಉನ್ನತಮಟ್ಟದ ಸಮಿತಿ ರಚಿಸುವ ಕುರಿತು ಯಾವುದಾದರು ನಿರ್ಧಾರ ಕೈಗೊಂಡಿದೆಯೇ ?

## ಪ್ರೌಢ ಶಾಲಾ ಸಹ ಶಿಕ್ಷಕರಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕ ಹುದ್ದೆಗೆ ಬಡ್ತಿ ನೀಡದಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೧೮ (೮೩೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢ ಶಾಲಾ ಸಹ ಶಿಕ್ಷಕರಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕ ಹುದ್ದೆಗೆ ಬಡ್ತಿ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಶಿಕ್ಷಕರಿಗೆ ಇದುವರೆವಿಗೂ ಬಡ್ತಿ ನೀಡದಿರಲು ಕಾರಣಗಳೇನು ;

(ಆ) ಬಡ್ತಿಗೆ ಅರ್ಹತೆ ಪಡೆದ ಶಿಕ್ಷಕರು ಗೊಂದಲದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶಿಕ್ಷಣ ಇಲಾಖೆಯ ಲೋಪದಿಂದ ಅರ್ಹತೆ ಪಡೆದ ಶಿಕ್ಷಕರಿಗೆ ಬಡ್ತಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅರ್ಹ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ರಾಯಚೂರು ಜಿಲ್ಲೆ ಸಿರವಾರ ಪಟ್ಟಣದ ವಸತಿ ನಿಲಯದ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೯ (೯೩೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆ ಸಿರವಾರ ಪಟ್ಟಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವಸತಿ ನಿಲಯವನ್ನು ಯಾವ ಯೋಜನೆಯಡಿಯಲ್ಲಿ ನಿರ್ಮಿಸಲಾಗುತ್ತಿದೆ ; ಸದರಿ ಕಾಮಗಾರಿಯ ಅಂದಾಜು ಪ್ರತಿಯನ್ನು ನೀಡುವುದು ;

(ಆ) ಸದರಿ ಕಾಮಗಾರಿಯನ್ನು ಬೇರೊಂದು ಇಲಾಖೆಯ ಜಾಗದಲ್ಲಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಇಲಾಖೆ/ಮಾಲೀಕರಿಂದ ಅನುಮತಿ ಪಡೆಯಲಾಗಿದೆಯೇ ; ಪಡೆದಿದ್ದಲ್ಲಿ, ಅದರ ಪ್ರತಿ ನೀಡುವುದು ; ಪಡೆಯದಿದ್ದಲ್ಲಿ, ಅನುಮತಿ ಪಡೆಯದಿರಲು ಕಾರಣಗಳೇನು ;

(ಇ) ಸದರಿ ಕಾಮಗಾರಿಯನ್ನು ವಿರೋಧಿಸಿ ಎಷ್ಟು ದೂರು ಅರ್ಜಿಗಳು ಬಂದಿವೆ ; ಸದರಿ ಅರ್ಜಿಗಳನ್ನು ವಿಲೇ ಮಾಡಲಾಗಿದೆಯೇ ; ಸಾರ್ವಜನಿಕರ ವಿರೋಧದ ನಡುವೆಯು ಕಾಮಗಾರಿಯನ್ನು ಅಲ್ಲಿಯೇ ಮುಂದುವರೆಸಲು ಕಾರಣಗಳೇನು ?

## ತಮಿಳುನಾಡಿನ ಕಟ್ಟಲೈ ಕಾವೇರಿ ಪ್ರವಾಹ ನೀರು ತಿರುವಿನ ಯೋಜನೆ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೦ (೯೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಮಿಳುನಾಡು ಸರ್ಕಾರಿ ಅಕ್ರಮವಾಗಿ ಕಟ್ಟುತ್ತಿರುವ ಕಟ್ಟಲ್ಯೆ ಕಾವೇರಿ ಪ್ರವಾಹ ನೀರು ತಿರುವಿನ ಯೋಜನೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಪರಿಸರ ಮಂಜೂರಾತಿ, ಕೇಂದ್ರ ಜಲ ಆಯೋಗ, ಜಲಶಕ್ತಿ ಸಚಿವಾಲಯದ ಅನುಮತಿ ಪಡೆಯದೆ ತಮಿಳುನಾಡು ಸುಮಾರು ೬೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಕಾವೇರಿ ನೀರನ್ನು ತಿರುಗಿಸುವ ಈ ಅಕ್ರಮ ಯೋಜನೆ ವಿರುದ್ಧ ಕಾನೂನು ಇಲಾಖೆ ತಕರಾರು ಸಲ್ಲಿಸಿದೆಯೇ ; ಸಲ್ಲಿಸಿದ್ದಲ್ಲಿ, ಅದರ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಒಂದು ವೇಳೆ ತಕರಾರು ಸಲ್ಲಿಸದಿದ್ದಲ್ಲಿ, ತಕರಾರು ಸಲ್ಲಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಇಷ್ಟೊಂದು ದೊಡ್ಡ ಯೋಜನೆ ನ್ಯಾಯಮಂಡಳಿಯ ಆದೇಶ ಉಲ್ಲಂಘಿಸಿ ತಮಿಳುನಾಡು ಕಾವೇರಿ ಕೊಳ್ಳದಲ್ಲಿ ಕೈಗೊಂಡರೂ ರಾಜ್ಯ ಸರ್ಕಾರ ಮೌನವಾಗಿರುವುದೇಕೆ ?

## ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನದ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೨೧ (೯೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಗೃಹಲಕ್ಷ್ಮಿ ಯೋಜನೆಯಡಿ ನೀಡಲಾಗುವ ಎಷ್ಟು ಮಂದಿ ಮಹಿಳೆಯರಿಗೆ ಮಾಸಿಕ ವೇತನ/ಗೌರವ ಧನ ಬಾಕಿ ಇದೆ; ೨೦೨೫-೨೬ ಮತ್ತು ೨೦೨೬-೨೭ನೇಯ ಸಾಲಿನ

ತಿಂಗಳುವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು ; ಸದರಿ ಮೊತ್ತವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ;

(ಆ) ಗೃಹಲಕ್ಷ್ಮಿ ಯೋಜನೆಯ ಮರುಪರಿಶೀಲನೆ ನಂತರ ಸರ್ಕಾರದ ಪ್ರಕಾರ ಎಷ್ಟು ಅನರ್ಹ ಫಲಾನುಭವಿಗಳಿಗೆ ಹಣ ಸಂದಾಯವಾಗಿದೆ ; ಇದರಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟ ಆಗಿದೆ ; ಎಷ್ಟು ಮಂದಿ ಫಲಾನುಭವಿಗಳನ್ನು ಅನರ್ಹ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಕ್ರಮ ಹಣ ಪಡೆದಿರುವವರಿಂದ ಹಣ ವಸೂಲು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಲಬುರಗಿ ವಿಭಾಗದಲ್ಲಿ ಶಿಕ್ಷಕರ ಮತ್ತು ಮಕ್ಕಳ ಅನುಪಾತ ಕಡಿಮೆ ಇರುವುದರಿಂದ ಶೈಕ್ಷಣಿಕ ಹಿನ್ನಡೆ ಆಗುತ್ತಿರುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೨೨ (೭೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳೆಷ್ಟು ; ಸದರಿ ಶಾಲೆಗಳಲ್ಲಿ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳೆಷ್ಟು ; (ಜಿಲ್ಲಾವಾರು, ವಿಭಾಗವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಶಿಕ್ಷಕರು ಮತ್ತು ಮಕ್ಕಳ ಅನುಪಾತ (ಪಿಟಿಆರ್) ಎಷ್ಟು ; ಎಲ್ಲಾ ಜಿಲ್ಲೆಗಳಲ್ಲಿ ಸದರಿ ಅನುಪಾತ ಏಕರೂಪದಲ್ಲಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು ; (ವಿವರ ನೀಡುವುದು)

(ಇ) ವಿಭಾಗವಾರು ಶಿಕ್ಷಕರು ಮತ್ತು ಮಕ್ಕಳ ಅನುಪಾತ (ಪಿಟಿಆರ್) ಎಷ್ಟು ; ಕಲಬುರಗಿ ವಿಭಾಗದಲ್ಲಿ ಶಿಕ್ಷಕರು ಮತ್ತು ಮಕ್ಕಳ ಅನುಪಾತ (ಪಿಟಿಆರ್) ಪ್ರಮಾಣ ಅತ್ಯಂತ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ರಾಜ್ಯದ ಸರಾಸರಿಗೆ ತರಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ರಾಜ್ಯದಲ್ಲಿ ರಾಜ್ಯಮಟ್ಟದ ಸರಾಸರಿಗಿಂತ ಶಿಕ್ಷಕರು ಮತ್ತು ಮಕ್ಕಳ ಅನುಪಾತ (ಪಿಟಿಆರ್) ಹೆಚ್ಚು ಇರುವ ಜಿಲ್ಲೆಗಳಾವುವು ; ರಾಜ್ಯಮಟ್ಟದ ಸರಾಸರಿಗಿಂತ ಶಿಕ್ಷಕರು ಮತ್ತು ಮಕ್ಕಳ ಅನುಪಾತ (ಪಿಟಿಆರ್) ಕಡಿಮೆ ಇರುವ ಜಿಲ್ಲೆಗಳಾವುವು ; ಈ ರೀತಿ ವ್ಯತ್ಯಾಸ ಇರಲು ಕಾರಣವೇನು ; ಅದನ್ನು ಸರಿಪಡಿಸಲು ಇರುವ ಪರಿಹಾರವೇನು ;

(ಉ) ಕಲಬುರಗಿ ವಿಭಾಗದ ಶಿಕ್ಷಕರು ಮತ್ತು ಮಕ್ಕಳ (ಪಿಟಿಆರ್) ಅನುಪಾತ ಸರಿದೂಗಿಸಲು ಕಲಬುರಗಿ ಅಪರ ಆಯುಕ್ತರು, ಶಿಕ್ಷಣ ಇಲಾಖೆ ಇವರು ೨೦೨೧ರಲ್ಲಿಯೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಸ್ತಾವನೆಯ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಊ) ಶಿಕ್ಷಕರು ಮತ್ತು ಮಕ್ಕಳ ಅನುಪಾತ (ಪಿಟಿಆರ್) ದಲ್ಲಿ ವಿಭಾಗವಾರು ವ್ಯತ್ಯಾಸ ಇರುವುದು ಸರ್ಕಾರದ ಗಮನಕ್ಕಿದ್ದರೂ ಕ್ರಮ ಜರುಗಿಸದೇ ಇರಲು ಕಾರಣವೇನು ; ಈ ತಾರತಮ್ಯ ಸರಿಪಡಿಸಲು ಸರ್ಕಾರ ಮುಂದಾಗುವುದೇ ? (ಹಾಗಿದ್ದಲ್ಲಿ ವಿವರ ನೀಡುವುದು)

# ರಾಜ್ಯದಲ್ಲಿರುವ ಪ್ರೌಢ ಶಾಲೆಗಳ ಮುಖ್ಯ ಗುರುಗಳು ಮತ್ತು ಸಂಯುಕ್ತ ಶಾಲೆಗಳಲ್ಲಿನ ಉಪ ಪ್ರಾಂಶುಪಾಲರ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೨೩ (೭೯೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಒಟ್ಟು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಸಂಯಕ್ತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಭಾಗದ ಪ್ರೌಢ ಶಾಲೆಗಳಲ್ಲಿ ಮಂಜೂರಾಗಿರುವ ಮತ್ತು ಖಾಲಿ ಇರುವ ಮುಖ್ಯ ಶಿಕ್ಷಕರ ಹುದ್ದೆಗಳು ಎಷ್ಟು; ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ ಮತ್ತು ಖಾಲಿ ಇರುವ ಉಪ ಪ್ರಾಂಶುಪಾಲರ ಹುದ್ದೆಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ ;

(ಈ) ಸಂಯುಕ್ತ ಪ್ರೌಢ ಶಾಲೆಗಳಲ್ಲಿನ ನೇಮಕವಾದ ಉಪ ಪ್ರಾಂಶುಪಾಲರಿಗೆ ಭತ್ಯೆಗಳು ಮತ್ತು ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆಯೇ ; ಹೌದು ಎಂದಾದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ;

(ಉ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಇರುವ RMSA ಶಾಲೆಗಳು ಎಷ್ಟು ; ಇದರಲ್ಲಿ ಮುಖ್ಯ ಗುರುಗಳ ಹುದ್ದೆಗಳನ್ನು ಹೊಂದಿರುವ ಶಾಲೆಗಳು ಮತ್ತು ಖಾಲಿ ಇರುವ ಶಾಲೆಗಳು ಎಷ್ಟು; ಯಾವ ಕಾಲಮಿತಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ ?

# ಕಲ್ಯಾಣ ಕರ್ನಾಟಕ ಭಾಗದಲ್ಲಿನ ವಸತಿ ನಿಲಯಗಳಲ್ಲಿ ಖಾಲಿ ಇರುವ ಹಾಸ್ಟೆಲ್ ವಾರ್ಡನ್ ಮತ್ತು ಹಾಸ್ಟೆಲ್ ಸೂಪರಿಂಟೆಂಡೆಂಟ್ ವೃಂದದ ಹುದ್ದೆಗಳ ನೇರ ನೇಮಕಾತಿ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೨೪ (೭೮೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ವಸತಿ ನಿಲಯಗಳಲ್ಲಿ ಹಾಸ್ಟೆಲ್ ವಾರ್ಡನ್ ಮತ್ತು ಹಾಸ್ಟೆಲ್ ಸೂಪರಿಂಟೆಂಡೆಂವ್ ವೃಂದದ ಹುದ್ದೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿವಿಧ ವಸತಿ ನಿಲಯಗಳಲ್ಲಿ ಖಾಲಿ ಇರುವ ಹಾಸ್ಟೆಲ್ ವಾರ್ಡನ್ ಮತ್ತು ಹಾಸ್ಟೆಲ್ ಸೂಪರಿಂಟೆಂಡೆಂಟ್ ಹುದ್ದೆಗಳು ಎಷ್ಟು ; ಸದರಿ ಹುದ್ದೆಗಳ ನೇರ ನೇಮಕಾತಿ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳ ನೇಮಕಾತಿಯನ್ನು ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

# ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೨೫ (೭೯೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಮಂಜೂರಾದ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ದೈಹಿಕ ಶಿಕ್ಷಕ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ದೈಹಿಕ ಹಾಗೂ ವಿಶೇಷ ಶಿಕ್ಷಕರುಗಳ (ಅತಿಥಿ ಅಥವಾ ಸರ್ಕಾರಿ ಎರಡೂ ಇಲ್ಲದ) ಕೊರತೆಯನ್ನು ಎದುರಿಸುತ್ತಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳು ಎಷ್ಟು ; (ಖಾಲಿ ಹುದ್ದೆಗಳ ಸಹಿತ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಎಷ್ಟು ವರ್ಷಗಳಿಂದ ದೈಹಿಕ ಶಿಕ್ಷಕರ ಹಾಗೂ ವಿಶೇಷ ಶಿಕ್ಷಕರ ನೇಮಕಾತಿಯನ್ನು ನಡೆಸಿರುವುದಿಲ್ಲ ; ನೇಮಕಾತಿ ನಡೆಸದೇ ಇರಲು ಕಾರಣವೇನು ; ಈ ಶಿಕ್ಷಕರ ಕೊರತೆಯಿಂದ ಪ್ರತಿ ವರ್ಷ ಲಕ್ಷಾಂತರ ವಿದ್ಯಾರ್ಥಿಗಳು ದೈಹಿಕ ಹಾಗೂ ಕೌಶಲ್ಯಕ ಶಿಕ್ಷಣ ಪಡೆಯುವಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಈ) ಪ್ರಸ್ತುತ ನೇಮಕಾತಿಗೆ ಆರ್ಥಿಕ ಇಲಾಖೆಯು ಅನುಮತಿಸಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಕ್ಷಕರ ಹುದ್ದೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳನ್ನು ಸೇರ್ಪಡೆ ಮಾಡಲಾಗಿದೆಯೇ ; ಹೌದು ಎಂದಾದಲ್ಲಿ. ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಲಾಗುವುದು ; ಇಲ್ಲ ಎಂದಾದಲ್ಲಿ, ಕಾರಣ ಸಹಿತ ಸ್ಪಷ್ಟೀಕರಣ ನೀಡುವುದು ; ಯಾವ ಕಾಲಮಿತಿಯಲ್ಲಿ ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತದೆ ?

# ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವರದಿಗಳ ಶಿಫಾರಸ್ಸುಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೮೨೬ (೯೨೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಮಧುಸೂದನ್ ನಾಯಕ್ ನೇತೃತ್ವದ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ;

(ಆ) ಈ ವರದಿಯನ್ನು ಸಾರ್ವಜನಿಕರ ಗಮನಕ್ಕೆ ತರಲಾಗಿದೆಯೇ ; ಹಾಗೂ ಸಲ್ಲಿಕೆಯಾಗಿರುವ ವರದಿಯಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಶಿಫಾರಸ್ಸುಗಳನ್ನು ಜಾರಿ ಮಾಡಲು ಎಷ್ಟು ಕಾಲಮಿತಿ ಬೇಕು ;

(ಇ) ಈ ಹಿಂದೆ ಸಿ.ಎಸ್ ದ್ವಾರಕನಾಥ್ ಮತ್ತು ಪ್ರೋ ರವಿವರ್ಮಕುಮಾರ್ ಹಾಗೂ ಜಯಪ್ರಕಾಶ್ ಹೆಗಡೆ ಅವರು ಸಲ್ಲಿಸಿರುವ ವರದಿ ಮತ್ತು ಶಿಫಾರಸ್ಸುಗಳನ್ನು ಜಾರಿ ಮಾಡಲಾಗಿದೆಯೇ ?

# ಅರ್ಕಾವತಿ–ಕಾವೇರಿ ನದಿಗಳ ಕಲುಷಿತಗೊಳ್ಳುವಿಕೆ ಕುರಿತು

**ಶ್ರೀ ಶಿವಣ್ಣ ಬಿ. ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೭ (೮೮೫) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೀಣ್ಯ ಕೈಗಾರಿಕಾ ಪ್ರದೇಶದ ರಾಸಾಯನಿಕ ತ್ಯಾಜ್ಯ ಹಾಗೂ ರಾಮನಗರ ಪಟ್ಟಣದ ಶೌಚಾಲಯ ತ್ಯಾಜ್ಯ ನೇರವಾಗಿ ಅರ್ಕಾವತಿ ನದಿಗೆ ಸೇರಿ, ಬೇಸಿಗೆಯಲ್ಲಿ ಕೇವಲ ವಿಷಕಾರಿ ಚರಂಡಿ ನೀರು ಹರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಲುಷಿತ ಅರ್ಕಾವತಿ ನದಿಯು ಬೈರಮಂಗಲ ಕೆರೆ ಮೂಲಕ ಹರಿದು 'ಸಂಗಮ'ದಲ್ಲಿ ಕಾವೇರಿಯನ್ನು ಸೇರುತ್ತಿರುವುದರಿಂದ ಸಂಗಮದ ನೀರು ಕಲುಷಿತಗೊಳ್ಳುತ್ತಿರುವುದು ನಿಜವೆ ; ಇದರಿಂದ ಸಾರ್ವಜನಿಕರ ಹಾಗೂ ಜಾನುವಾರುಗಳ ಆರೋಗ್ಯದ ಮೇಲಾಗುತ್ತಿರುವ ದುಷ್ಪರಿಣಾಮಗಳೇನು ;

(ಇ) ಬ್ರಹ್ಮಪುತ್ರ/ಅರ್ಕಾವತಿ ನದಿ ಪಾತ್ರಕ್ಕೆ ಕಲುಷಿತ ನೀರು ಹರಿಸುತ್ತಿರುವ BWSSB ವಿರುದ್ಧ KSPCB ಕಾನೂನು ಕ್ರಮ ಕೈಗೊಳ್ಳದಿರಲು ಕಾರಣಗಳೇನು ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿಯ ಈ ವೈಫಲ್ಯದ ಕುರಿತು ತನಿಖೆ ನಡೆಸಲು ಸರ್ಕಾರ ಸಿದ್ಧವಿದೆಯೇ ;

(ಈ) ಮಗ್ಗೂರು ಅರಣ್ಯ ಪ್ರದೇಶದಲ್ಲಿ ಕುಲುಷಿತ ನೀರು ಕುಡಿದು ಕಾಡಾನೆಯೊಂದು ಸಾವನ್ನಪ್ಪಿರುವುದು ನಿಜವೇ, ಕಾವೇರಿ ವನ್ಯಜೀವಿ ವಲಯದ ೪೦೦ಕ್ಕೂ ಹೆಚ್ಚು ಕಾಡಾನೆಗಳು ಹಾಗೂ ವನ್ಯಜೀವಿಗಳ ರಕ್ಷಣೆಗೆ ಶುದ್ಧ ಕುಡಿಯುವ ನೀರಿನ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಕೈಗೊಂಡಿರುವ ತುರ್ತು ಕ್ರಮಗಳೇನು ?

## 'ಗೃಹಲಕ್ಷ್ಮಿ' ಯೋಜನೆಯಲ್ಲಿ ಅರ್ಹ ಫಲಾನುಭವಿಗಳ ಲೋಪ ಹಾಗೂ ಮೃತ/ ಅನರ್ಹ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಿರುವ ಕುರಿತು

**ಶ್ರೀ ಶಿವಣ್ಣ ಬಿ. ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೮ (೮೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ 'ಗೃಹಲಕ್ಷ್ಮಿ' ಯೋಜನೆಯ ಫಲಾನುಭವಿಗಳ ಪಟ್ಟಿಯಲ್ಲಿ ವ್ಯಾಪಕ ಲೋಪದೋಷಗಳು ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ವ್ಯಾಪ್ತಿಯೊಂದರಲ್ಲೇ ೧೨,೭೧೯ ಮಹಿಳೆಯರನ್ನು ನಿಯಮಬಾಹಿರವಾಗಿ ಯೋಜನೆಯಿಂದ ಕೈಬಿಟ್ಟಿರುವುದು ನಿಜವೇ ;

(ಆ) ಸದರಿ ಯೋಜನೆಯಡಿ ಮೃತಪಟ್ಟಿರುವ ೬,೬೨೪ ಮಹಿಳೆಯರ ಖಾತೆಗಳಿಗೆ ಹಣ ಸಂದಾಯವಾಗಿರುವುದು ಪತ್ತೆಯಾಗಿದೆಯೇ ; ಈ ಪೈಕಿ ಕನಕಪುರ ತಾಲ್ಲೂಕು ಒಂದರಲ್ಲಿಯೇ ಮೃತಪಟ್ಟಿರುವ ೩,೦೫೮ ಫಲಾನುಭವಿಗಳ ಖಾತೆಗಳಿಗೆ ಜಮೆಯಾಗಿರುವ ಒಟ್ಟು ಮೊತ್ತವೆಷ್ಟು ;

(ಇ) ಆದಾಯ ತೆರಿಗೆ ಮತ್ತು ಜಿಎಸ್‌ಟಿ (GST) ಪಾವತಿದಾರರು ಹಾಗೂ ಆಧಾರ್ ಲಿಂಕ್ ಇಲ್ಲದ ಸಾವಿರಾರು ಅನರ್ಹ ವ್ಯಕ್ತಿಗಳು ಯೋಜನೆಯಡಿ ಹಣ ಪಡೆಯುತ್ತಿರುವುದು ನಿಜವೇ ; ಇಂತಹ ಅನರ್ಹರ ವಿರುದ್ಧ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಈ) ಮೃತ ಹಾಗೂ ಅನರ್ಹ ಫಲಾನುಭವಿಗಳ ಖಾತೆಗೆ ಜಮೆಯಾಗಿರುವ ಸಾರ್ವಜನಿಕ ಹಣವನ್ನು ಮರುಪಡೆಯಲು (Recovery) ಕೈಗೊಂಡ ಕ್ರಮಗಳೇನು ; ರಾಜ್ಯಾದ್ಯಂತ ಇಂತಹ ಆರ್ಥಿಕ ಸೋರಿಕೆ ತಡೆಯಲು ರೂಪಿಸಿರುವ ಖಾಯಂ ತಂತ್ರಜ್ಞಾನ ಆಧಾರಿತ ವ್ಯವಸ್ಥೆ ಏನು ?

## ಸರ್ಕಾರಿ ಶಾಲೆ/ಕಾಲೇಜುಗಳಲ್ಲಿ ಕೃತಕ ಬುದ್ಧಿಮತ್ತೆ (AI) ಶಿಕ್ಷಣ ಜಾರಿ ಮತ್ತು ಮೂಲಸೌಕರ್ಯಗಳ ಕುರಿತು

**ಶ್ರೀ ಶಿವಣ್ಣ ಬಿ. ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೯ (೮೮೭) ಮಾನ್ಯ ಶಾಲಾ ಶಿಕ್ಷಣ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೬-೨೭ನೇ ಶೈಕ್ಷಣಿಕ ವರ್ಷದಿಂದ ಮುಂಬರುವ ರಾಜ್ಯದ ಸರ್ಕಾರಿ ಪ್ರೌಢಶಾಲೆ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಕೃತಕ ಬುದ್ಧಿಮತ್ತೆ (AI) ಶಿಕ್ಷಣ ನೀಡಲು ನಿರ್ಧರಿಸಿರುವುದು ನಿಜವೇ, ಸುಮಾರು ೧೨.೨೮ ಲಕ್ಷ ವಿದ್ಯಾರ್ಥಿಗಳಿಗೆ ತಂತ್ರಜ್ಞಾನ ಶಿಕ್ಷಣ ನೀಡುವ ಈ ಯೋಜನೆಯ ಮೂಲ ಉದ್ದೇಶಗಳೇನು ;

(ಆ) ಈ ಯೋಜನೆಗೆ ೨೦೨೬-೨೭ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಟ್ಟಿರುವ ರೂ.೫ ಕೋಟಿ ಅನುದಾನವು ಕಂಪ್ಯೂಟರ್ ಲ್ಯಾಬ್, ಇಂಟರ್ನೆಟ್‌ನಂತಹ ಮೂಲಸೌಕರ್ಯಗಳಿಗೆ ಸಾಕಾಗುತ್ತದೆಯೇ ; ಯೋಜನೆಗೆ ತಾಂತ್ರಿಕ ಸಹಯೋಗ ನೀಡುತ್ತಿರುವ 'ಐಐಟಿ ಧಾರವಾಡ' ಸಂಸ್ಥೆಯು ರೂಪಿಸುತ್ತಿರುವ ಪಠ್ಯಕ್ರಮದ ವಿವರಗಳೇನು ;

(ಇ) ಎನ್‌ಸಿಇಆರ್‌ಟಿ (NCERT) ತರಲಿರುವ 'ದೀಕ್ಷಾ' (Diksha) ಎಐ ಮಾಡ್ಯೂಲ್ ಅನ್ನು ಗ್ರಾಮೀಣ ಭಾಗದ ಸರ್ಕಾರಿ ಶಾಲಾ ವಿದ್ಯಾರ್ಥಿಗಳು ಸುಲಭವಾಗಿ ಬಳಸಲು ಹಾಗೂ ಕನ್ನಡ ಭಾಷೆಯಲ್ಲಿ ಕಲಿಯಲು ಸರ್ಕಾರ ಕೈಗೊಂಡಿರುವ ಪೂರ್ವಸಿದ್ಧತೆಗಳೇನು ;

(ಈ) ೨೦೨೪-೨೫ರಲ್ಲಿ ಜಾರಿಗೊಳಿಸಲಾಗಿದ್ದ "ಕಲಿಕಾ ದೀಪ" ಯೋಜನೆಯ ಪ್ರಗತಿ ವರದಿ ಏನು ಹಾಗೂ ಈ ನೂತನ ಎಐ ಕಲಿಕಾ ಯೋಜನೆಯನ್ನು ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ವಿಸ್ತರಿಸಲು ಸರ್ಕಾರಕ್ಕಿರುವ ದೀರ್ಘಕಾಲೀನ ಯೋಜನೆಗಳೇನು ?

# ರಾಜ್ಯದಲ್ಲಿ ಬಾಲ್ಯವಿವಾಹ, ಬಾಲಗರ್ಭಿಣಿ ಪ್ರಕರಣಗಳ ತಡೆಗಟ್ಟುವಿಕೆ ಹಾಗೂ ಮಕ್ಕಳ ರಕ್ಷಣಾ ಹೆಲ್ಪ್ ಡೆಸ್ಕ್‌ಗಳ ಸ್ಥಾಪನೆ ಕುರಿತು

**ಶ್ರೀ ಶಿವಣ್ಣ ಬಿ. ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೦ (೮೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ (೨೦೨೪ ರಿಂದ ೨೦೨೬ರ ಜೂನ್‌ವರೆಗೆ) ೭,೮೦೦ಕ್ಕೂ ಹೆಚ್ಚು ಬಾಲ್ಯವಿವಾಹ ಪ್ರಕರಣಗಳು ದಾಖಲಾಗಿರುವುದು ಹಾಗೂ ೧,೭೦೦ಕ್ಕೂ ಹೆಚ್ಚು ಬಾಲ್ಯವಿವಾಹಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ (೨೦೨೩ ರಿಂದ ೨೦೨೬) ೧೬,೯೦೦ಕ್ಕೂ ಹೆಚ್ಚು ಬಾಲಗರ್ಭಿಣಿ ಪ್ರಕರಣಗಳು ವರದಿಯಾಗಿದ್ದು, ಹದಿಹರೆಯದ ಗರ್ಭಧಾರಣೆ ತಡೆಯಲು ಹಾಗೂ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ವಿಶೇಷ ಕ್ರಮಗಳೇನು ;

(ಇ) ರೈಲ್ವೆ, ಬಸ್ ಹಾಗೂ ಮೆಟ್ರೋ ನಿಲ್ದಾಣಗಳಲ್ಲಿ ಮಕ್ಕಳ ಸಂರಕ್ಷಣೆಗಾಗಿ ಸ್ಥಾಪಿಸಲಾಗುತ್ತಿರುವ ಮಕ್ಕಳ ಸಹಾಯವಾಣಿ ಕೇಂದ್ರ (Child Help Desks) ಗಳ ಪ್ರಸ್ತುತ ಪ್ರಗತಿಯೇನು ;

(ಈ) ಬಾಲ್ಯವಿವಾಹ ನಿಷೇಧ ಅಧಿಕಾರಿಗಳ (CMPO) ಕಾರ್ಯಾಚರಣೆ ಬಲಪಡಿಸಲು ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯದ ಮೂಲಕ ಜಾರಿಗೆ ತಂದಿರುವ ಕಾರ್ಯಕ್ರಮಗಳ ವಿವರವೇನು ?

# ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸಲ್ಲಿಸಿರುವ ವರದಿಯ ಕುರಿತು

**ಶ್ರೀ ಶಿವಣ್ಣ ಬಿ. ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೧ (೮೮೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುವ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ (ಮಧುಸೂಧನ ನಾಯಕ್ ವರದಿ) ವರದಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಹಾಗೂ ಸದನದ ಮುಂದೆ ಮಂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಈ ಸಮೀಕ್ಷಾ ವರದಿಯನ್ನು ಸಂಪುಟ ಸಭೆಯಲ್ಲಿ ಅಂಗೀಕರಿಸಿ, ಸಂಪೂರ್ಣ ವರದಿಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಲು ಸರ್ಕಾರಕ್ಕಿರುವ ತೊಡಕುಗಳೇನು ; (ವಿವರ ನೀಡುವುದು)

(ಇ) ಈ ಸಮೀಕ್ಷೆಯ ಶಿಫಾರಸ್ಸುಗಳ ಆಧಾರದ ಮೇಲೆ ರಾಜ್ಯದಲ್ಲಿರುವ ಹಿಂದುಳಿದ, ತುಳಿತಕ್ಕೊಳಗಾದ ಮತ್ತು ಶೋಷಿತ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ, ಸಾಮಾಜಿಕ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ಸೂಕ್ತ ಅವಕಾಶ ಹಾಗೂ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ರೂಪಿಸಿರುವ ನಿರ್ದಿಷ್ಟ ಯೋಜನೆಗಳೇನು ;

(ಈ) ಸದರಿ ವರದಿಯ ಶಿಫಾರಸ್ಸುಗಳನ್ನು ಜಾರಿಗೆ ತರಲು ಸರ್ಕಾರ ನಿಗದಿಪಡಿಸಿಕೊಂಡಿರುವ ಕಾಲಮಿತಿ ಏನು ? (ಸಂಪೂರ್ಣ ವಿವರ ನೀಡುವುದು)

# ರಾಜ್ಯದಲ್ಲಿರುವ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ಮಾಹಿತಿ ನೀಡುವ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೩೨ (೮೪೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸಮುದಾಯದವರಿಗೆ ಸರ್ಕಾರದಿಂದ ನೀಡಲಾಗುತ್ತಿರುವ ವಸತಿ, ಶಿಕ್ಷಣ, ಉದ್ಯೋಗ, ವಿದ್ಯಾರ್ಥಿವೇತನ ಹಾಗೂ ಸ್ವಯಂ ಉದ್ಯೋಗ ಯೋಜನೆಗಳು ಯಾವುವು ; ಕಳೆದ ೩ ವರ್ಷಗಳಲ್ಲಿ ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆದಿದ್ದಾರೆ ;

(ಇ) ಅಲೆಮಾರಿ ಹಾಗೂ ಅರೆ ಅಲೆಮಾರಿ ಕುಟುಂಬಗಳಲ್ಲಿ ಸ್ವಂತ ನಿವೇಶನ ಮತ್ತು ಮನೆ ಇಲ್ಲದವರ ಸಂಖ್ಯೆ ಎಷ್ಟು; ಅವರಿಗೆ ವಸತಿ ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಈ) ಅಲೆಮಾರಿ ಜನಾಂಗದವರಿಗೆ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಆಧಾರ್, ರೇಷನ್ ಕಾರ್ಡ್ ಹಾಗೂ ಮತದಾರರ ಗುರುತಿನ ಚೀಟಿ ಪಡೆಯಲು ಎದುರಾಗುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕಳೆದ ೩ ವರ್ಷಗಳಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇತನದ ಮೊತ್ತ ಎಷ್ಟು; ಅರ್ಜಿ ಸಲ್ಲಿಸಿದರವರ ಪೈಕಿ ಎಷ್ಟು ಮಂದಿಗೆ ವಿತರಿಸಲಾಗಿದೆ ;

(ಊ) ಈ ಸಮುದಾಯದವರಿಗೆ ಮೀಸಲಿಟ್ಟಿರುವ ವಿಶೇಷ ಅನುದಾನವು ಸಂಪೂರ್ಣವಾಗಿ ಬಳಕೆಯಾಗುತ್ತಿದೆಯೇ; ಬಳಕೆಯಾಗದೆ ಉಳಿದಿರುವ ಅನುದಾನದ ಪ್ರಮಾಣ ಎಷ್ಟು?

## ರಾಜ್ಯದಲ್ಲಿರುವ ಅಂಗನವಾಡಿ ಮಾಹಿತಿ ಹಾಗೂ ಸಿಬ್ಬಂದಿಯ ವೇತನ ಕುರಿತು

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೩೩ (೮೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡ ಹೊಂದಿರುವ ಹಾಗೂ ಬಾಡಿಗೆ ಕಟ್ಟಡದಲ್ಲಿರುವ ಕೇಂದ್ರಗಳ ಜಿಲ್ಲಾವಾರು ವಿವರ ನೀಡುವುದು ;

(ಆ) ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅಂಗನವಾಡಿ ಕೇಂದ್ರಗಳಿಗೆ ನೀಡಲಾಗುತ್ತಿರುವ ಪೌಷ್ಟಿಕ ಆಹಾರದ ಗುಣಮಟ್ಟವನ್ನು ಪರಿಶೀಲಿಸಲು ಯಾವ ವ್ಯವಸ್ಥೆ ಇದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಗುಣಮಟ್ಟದ ಕೊರತೆ ಕಂಡುಬಂದಿದೆ ;

(ಉ) ಮಹಿಳೆಯರ ಮೇಲಿನ ದೌರ್ಜನ್ಯ, ಕೌಟುಂಬಿಕ ಹಿಂಸೆ ಹಾಗೂ ಬಾಲ್ಯವಿವಾಹ ತಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಪ್ರಕರಣಗಳು ಮತ್ತು ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ವಿಕಲಚೇತನರಿಗೆ ಶಿಕ್ಷಣ, ಉದ್ಯೋಗ ಮತ್ತು ಸ್ವಯಂ ಉದ್ಯೋಗಕ್ಕಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಎಷ್ಟು ಜನರಿಗೆ ಇದರ ಪ್ರಯೋಜನ ದೊರೆತಿದೆ ;

(ಋ) ವಿಕಲಚೇತನರಿಗೆ ನೀಡಲಾಗುವ ಮಾಸಿಕ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಅರ್ಹರಾಗಿದ್ದರೂ ಪಿಂಚಣಿ ದೊರೆಯದವರ ಸಂಖ್ಯೆ ಎಷ್ಟು ; ಇವರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನದ ಮಾಹಿತಿ ಕುರಿತು

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೩೪ (೮೪೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನಕ್ಕೆ ಎಷ್ಟು ಅನುದಾನ ನಿಗದಿಪಡಿಸಲಾಗಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿ ವೇತನಕ್ಕಾಗಿ ಸಲ್ಲಿಸಿದ ಅರ್ಜಿಗಳೆಷ್ಟು ; ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ವಿದ್ಯಾರ್ಥಿವೇತನ ಪಾವತಿಯಲ್ಲಿ ವಿಳಂಬವಾಗಲು ಕಾರಣವೇನು ; ಬಾಕಿಯಿರುವ ವಿದ್ಯಾರ್ಥಿವೇತನವನ್ನು ಯಾವ ಅವಧಿಯಲ್ಲಿ ಪಾವತಿಸಲಾಗುವುದು ;

(ಈ) ತಮ್ಮ ಇಲಾಖೆ ವ್ಯಾಪ್ತಿಯಲ್ಲಿರುವ ಸರ್ಕಾರಿ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು: ಅವುಗಳಲ್ಲಿ ಎಷ್ಟು ಸ್ವಂತ ಕಟ್ಟಡಗಳಿವೆ ಮತ್ತು ಎಷ್ಟು ಬಾಡಿಗೆ ಕಟ್ಟಡಗಳಿವೆ ;

(ಉ) ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಸಲ್ಲಿಸಿ ಅವಕಾಶ ವಂಚಿತರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅಂತವರಿಗೆ ಸರ್ಕಾರ ಬೇರೆ ಅವಕಾಶ ಕಲ್ಪಿಸಲು ಯೋಜನೆಗಳನ್ನು ರೂಪಿಸಿದೆಯೇ ; ಇದ್ದಲ್ಲಿ, ಕ್ರಮಗಳೇನು ;

(ಊ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರವು ಪ್ರತಿವರ್ಷ ಅನುದಾನ ಮೀಸಲಿಡುತ್ತಿದ್ದರೂ, ಅನೇಕ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಸಮಯಕ್ಕೆ ಸರಿಯಾಗಿ ತಲುಪುತ್ತಿಲ್ಲ ; ಈ ವಿಳಂಬಕ್ಕೆ ಕಾರಣವೇನು ಮತ್ತು ನಿಗದಿತ ಅವಧಿಯಲ್ಲಿ ಸೌಲಭ್ಯ ತಲುಪಿಸಲು ಸರ್ಕಾರ ಕೈಗೊಂಡಿರುವ ಖಚಿತ ಕ್ರಮಗಳೇನು ?

## ರಾಜ್ಯ ಸರ್ಕಾರಿ ಕಾಲೇಜುಗಳ ಬೋಧಕ ಹುದ್ದೆಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೩೫ (೮೪೪೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಆ) ಸರ್ಕಾರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೊಸ ತರಗತಿ ಕೊಠಡಿಗಳು, ಪ್ರಯೋಗಾಲಯುಗಳು,

ಗ್ರಂಥಾಲಯಗಳು ಮತ್ತು ಶೌಚಾಲಯಗಳ ಕೊರತೆ ಇರುವ ಕಾಲೇಜುಗಳ ಸಂಖ್ಯೆ ಎಷ್ಟು ; ಇದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಮೇಲೆ ಅವಲಂಬನೆ ಕಡಿಮೆ ಮಾಡಲು ಖಾಯಂ ಉಪನ್ಯಾಸಕರ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶ ಹೆಚ್ಚಿಸಲು ಹೊಸ ಸರ್ಕಾರಿ ಕಾಲೇಜುಗಳನ್ನು ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಸರ್ಕಾರಿ ಕಾಲೇಜುಗಳಲ್ಲಿ ಓದುತ್ತಿರುವ ಆರ್ಥಿಕವಾಗಿ ದುರ್ಬಲ ಮತ್ತು ಗ್ರಾಮೀಣ ವಿದ್ಯಾರ್ಥಿಗಳಿಗೆ ಉಚಿತ/ಕಡಿಮೆ ವೆಚ್ಚದ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರದ ಯೋಜನೆಗಳೇನು ;

(ಊ) ಆಗ್ನೇಯ ಶಿಕ್ಷಕರ ಕ್ಷೇತ್ರ ವ್ಯಾಪ್ತಿಯಡಿ ಬರುವ ಸರ್ಕಾರಿ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರ ಸುರಕ್ಷತೆ, ಮಹಿಳಾ ವಿಶ್ರಾಂತಿ ಕೊಠಡಿ, ಆರೋಗ್ಯ ಮತ್ತು ಮೂಲಭೂತ ಸೌಲಭ್ಯಗಳನ್ನು ಸುಧಾರಿಸಲು ಜಿಲ್ಲಾವಾರು ಎಷ್ಟು ಅನುದಾನ ನೀಡಲಾಗಿದೆ ; ಖರ್ಚಾಗಿರುವ ಅನುದಾನ ಎಷ್ಟು ; ಉಳಿಕೆ ಅನುದಾನ ಎಷ್ಟು ?

## ವಿಧಾನಸೌಧದ ಮುಂದೆ ನಿಜ ಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪನೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೬ (೮೦೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಧಾನ ಸೌಧದ ಅವರಣದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ಸ್ಥಾಪಿಸಬೇಕೆನ್ನುವುದು ಸಮುದಾಯದ ಎಲ್ಲಾ ವರ್ಗದವರ ಬೇಡಿಕೆಯಾಗಿದ್ದರೂ, ಸರ್ಕಾರ ತೀರ್ಮಾನ ಕೈಗೊಳ್ಳುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರಲು ಕಾರಣವೇನು ;

(ಆ) ಎಂದಿನಿಂದ ಕಾರ್ಯಾರಂಭಿಸಲಾಗುವುದು ? (ಮಾಹಿತಿ ನೀಡುವುದು)

## ಗೃಹಲಕ್ಷ್ಮಿ ಯೋಜನೆಯಲ್ಲಿನ ಅನರ್ಹ ಫಲಾನುಭವಿಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೭ (೮೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮಿ ಯೋಜನೆಯಡಿ ರೂ ೧.೯೪,೫೬೦ ಗಳು ಆದಾಯ ತೆರಿಗೆ ಹಾಗೂ ಜಿ.ಎಸ್.ಟಿ ಪಾವತಿದಾರರು ಸೌಲಭ್ಯ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರನ್ನು ಯೋಜನೆಯಿಂದ ಕೈಬಿಡಲು ಹಾಗೂ ನೀಡಲಾದ ಹಣ ಮರುಪಡೆಯಲು ಕೈಗೊಂಡಿರುವ ಕ್ರಮಗಳೇನು ;

(ಆ) ಯೋಜನೆಯಡಿ ನೋಂದಾಯಿತರಾಗಿದ್ದ ೨.೮೮.೩೭೬ ಮೃತ ಮಹಿಳೆಯರ ಖಾತೆಗಳಿಗೆ ಮಾಹಿತಿ ಕೊರತೆಯಿಂದಾಗಿ ರೂ. ೧೧೫ ಕೋಟಿ ಪಾವತಿಯಾಗಿರುವುದು ನಿಜವೇ ; ಈ ಗಂಭೀರ ಲೋಪಕ್ಕೆ ಕಾರಣರಾದ ಅಧಿಕಾರಿಗಳು ಯಾರು ;

(ಇ) ಮೃತರ ಖಾತೆಗೆ ಜಮೆಯಾಗಿರುವ ರೂ. ೧೧೫ ಕೋಟಿಯಲ್ಲಿ ಕೇವಲ ರೂ ೧೫.೨೪ ಕೋಟಿ ಮಾತ್ರ ಮರುಭರಣವಾಗಿದ್ದು,

ಬಾಕಿ ಸುಮಾರು ರೂ. ೧೦೦ ಕೋಟಿ ವಸೂಲಿಗೆ ಬ್ಯಾಂಕುಗಳೊಂದಿಗೆ ನಡೆಸಿದ ಸಭೆಯ ತೀರ್ಮಾನ ಹಾಗೂ ಕೈಗೊಂಡಿರುವ ಕ್ರಮಗಳೇನು ;

(ಈ) ಇಂತಹ ಲೋಪ ತಡೆಯಲು ಮತ್ತು ಮೃತರ ಮಾಹಿತಿಯನ್ನು ಇ–ಜನ್ಮ/ಕುಟುಂಬ ತಂತ್ರಾಂಶದಲ್ಲಿ ತಕ್ಷಣ ಅಪ್‌ಡೇಟ್ ಮಾಡಲು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (PDO) ನೀಡಿರುವ ನಿರ್ದೇಶನಗಳೇನು ?

## ಅರಣ್ಯ ಅಕ್ರಮ ತಡೆಗಟ್ಟುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೮ (೮೦೭) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರಣ್ಯ ಇಲಾಖೆಯಲ್ಲಿ ಅದರಲ್ಲೂ ಹಳ್ಳಿಗಳಲ್ಲಿ ಅರಣ್ಯ ಜಮೀನು ಆಕ್ರಮಿಸಿ ಮನೆ ಕಟ್ಟಿಕೊಳ್ಳುತ್ತಿರುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿರುವುದನ್ನು ಸರ್ಕಾರ ಪತ್ತೆ ಹಚ್ಚಿದೆಯೇ ; ಇದನ್ನು ತಡೆಗಟ್ಟಲು ಕಟ್ಟುತ್ತಿರುವ ಕಟ್ಟಡಗಳ ಕಾರ್ಯ ನಿಲ್ಲಿಸಲು ಅರಣ್ಯ ಇಲಾಖೆ ಮುಂದಾಗದಿರಲು ಕಾರಣಗಳೇನು ;

(ಆ) ಅನೇಕ ಕಡೆ ಪ್ರಕರಣಗಳನ್ನು ಆಯಾ ತಾಲ್ಲೂಕಿನ ಅರಣ್ಯ ಅಧಿಕಾರಿಗಳ ಗಮನಕ್ಕೆ ತಂದಾಗ, ಅವರ ಮೇಲೆ ಎಫ್ ಐ ಆರ್ ಹಾಕಲಾಗಿದೆ ಎಂದು ಹೇಳಿ ಅವರು ಕಟ್ಟಡ ನಿರ್ಮಾಣ ಮುಂದುವರಿಸಲು ಅವಕಾಶ ನೀಡುತ್ತಿರುವುದು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಅರಣ್ಯ ಭೂಮಿ ಉಳಿಸಲು ಸರ್ಕಾರ ಕ್ರಮ ಜರುಗಿಸುವುದೆ ;

(ಇ) ಪ್ರತಿ ತಾಲ್ಲೂಕಿನಲ್ಲಿ ಅರಣ್ಯ ಭೂಮಿ ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ಈಗಾಗಲೇ ಅರಣ್ಯ ಭೂಮಿಯಲ್ಲಿ ಅಕ್ರಮವಾಗಿ ಕಟ್ಟಡ ಮನೆ ಕಟ್ಟುತ್ತಿರುವ ಹಾಗೂ ಮನೆ, ನಿರ್ಮಿಸಿಕೊಂಡಿರುವವರ ಮನೆ ಸಕ್ರಮ ಮಾಡಲಾಗುವುದೆ ; ಅರಣ್ಯ ಭೂಮಿ ಉಳಿಸಲು ಅವರುಗಳ ವಿರುದ್ಧ ನಿಯಮಾನುಸಾರ ಯಾವ ರೀತಿಯಾಗಿ ಕ್ರಮ ಜರುಗಿಸಲಾಗುವುದು ?

## ಸಿ ಆರ್ ಝೆಡ್ ಉಲ್ಲಂಘನೆ ಮತ್ತು ಕ್ರಮ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೯ (೮೦೯) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕರಾವಳಿ ತೀರದಲ್ಲಿ ಸಿ.ಆರ್.ಝೆಡ್ ವ್ಯಾಪ್ತಿಯಲ್ಲಿ ಯಾವ ಯಾವ ಬೀಚ್ ನಲ್ಲಿ ಅಕ್ರಮ ಕಟ್ಟಡ ಕಟ್ಟಿ ಅಲ್ಲಿ ಹೋಮ್ ಸ್ಟೇ ನಡೆಸಲಾಗುತ್ತಿದೆ ;

(ಆ) ವಿದೇಶಿಗರೇ ಇಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತಂಗುತ್ತಿರುವ ಪ್ರಕರಣಗಳೆಷ್ಟು ; ಇವರುಗಳಿಂದ ಸರ್ಕಾರಕ್ಕೆ ತೆರಿಗೆ ಪಾವತಿಯಾಗುತ್ತಿದೆಯೇ ;

(ಇ) ವಿದೇಶಿ ಪ್ರಜೆಗಳ ತಂಗುವಿಕೆಗೆ ಇರುವ ನಿಯಮಗಳೇನು ; ಇದರ ಪಾಲನೆ ಆಗುತ್ತಿದೆಯೇ ; ಈ ಅಕ್ರಮದಲ್ಲಿ ಸ್ಥಳೀಯ ಅರಣ್ಯ ಅಧಿಕಾರಿಗಳು ತಹಸೀಲ್ದಾರ್, ವಿಭಾಗ ಅಧಿಕಾರಿಗಳು ಪೊಲೀಸ್ ಇಲಾಖೆಯವರು ಶಾಮೀಲಾಗದೆ ಇದ್ದಲ್ಲಿ, ಬೀಚ್ ತೀರದಲ್ಲಿ ಅಕ್ರಮ ಕಟ್ಟಡ ತಲೆ ಎತ್ತಲು ಸಾಧ್ಯವೇ ;

(ಈ) ಎಷ್ಟು ಕೇಸ್ ಕೋರ್ಟಿಗೆ ಹೋಗಿದೆ; ಇವರು ಎಷ್ಟು ಅರಣ್ಯ ಭೂಮಿಯನ್ನು ಆಕ್ರಮಿಸಿಕೊಂಡಿದ್ದಾರೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಕಳೆದ ೪ ತಿಂಗಳಿಂದ ಬುಡಕಟ್ಟು ಕುಟುಂಬಗಳಿಗೆ ಆಹಾರ ಕಿಟ್ ವಿತರಣೆಯಾಗದಿರುವ ಬಗ್ಗೆ

**ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪೦ (೯೩೮) ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೪ ತಿಂಗಳಿಂದ ಸುಮಾರು ೪೮.೦೦೦ ಸಾವಿರ ಬುಡಕಟ್ಟು ಕುಟುಂಬಗಳಿಗೆ ಪೌಷ್ಠಿಕ ಆಹಾರ ಕಿಟ್ ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಿಟ್ ವಿತರಣೆ ವಿಳಂಬದಿಂದಾಗಿ ಅನೇಕ ಕುಟುಂಬಗಳು ಜೀವನೋಪಾಯಕ್ಕಾಗಿ ಬೇರೆ ಜಿಲ್ಲೆಗಳಿಗೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿಲ್ಲವೆ ?

## ರಾಜ್ಯದಲ್ಲಿ ಹೆಣ್ಣು ಮಕ್ಕಳು ಪ್ರೌಢಶಾಲಾ ಹಂತದಲ್ಲಿ ಶಾಲೆ ತೊರೆಯುವಿಕೆ ಬಗ್ಗೆ

**ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪೧ (೯೩೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೆಣ್ಣು ಮಕ್ಕಳು ಪ್ರೌಢಶಾಲಾ ಹಂತದಲ್ಲಿ ಶಾಲೆ ತೊರೆಯುವಿಕೆ (ಡ್ರಾಪ್ ಔಟ್) ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶಾಲೆ ತೊರೆಯುವಿಕೆ (ಡ್ರಾಪ್ ಔಟ್) ಶೇಕಡವಾರು ಪ್ರಮಾಣ ಎಷ್ಟು ; (ಮಾಹಿತಿ ನೀಡುವುದು)

(ಆ) ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇದರ ಬಗ್ಗೆ ಅರಿವು ಮೂಡಿಸಲು ಸರ್ಕಾರದ ಕ್ರಮವೇನು ?

## ಒಳಮೀಸಲಾತಿ ಜಾರಿಗೆ ಬಂದ ನಂತರ ಭರ್ತಿ ಮಾಡಲಾದ ಹುದ್ದೆಗಳ ಕುರಿತು

**ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪೨ (೯೩೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ರಲ್ಲಿ ಪರಿಶಿಷ್ಟ ಜಾತಿ ಒಳಮೀಸಲಾತಿ ಜಾರಿಗೆ ಬಂದ ನಂತರ ಯಾವ ಯಾವ ಇಲಾಖೆಗಳಲ್ಲಿ ಎಷ್ಟು ಎಷ್ಟು ಹುದ್ದೆಗಳನ್ನು ತುಂಬಲಾಗಿದೆ ;

(ಆ) ಸರ್ಕಾರದಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವಾಗ ಒಳಮೀಸಲಾತಿ ನಿಯಮ ಅನುಸರಿಸಲಾಗಿದೆಯೇ ;

(ಇ) ಆಗಿದ್ದಲ್ಲಿ, ವರ್ಗ ಎ, ಬಿ.ಸಿ. ಡಿ. ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ?

## ನಗರ ಪ್ರದೇಶಗಳಲ್ಲಿ ಭಿಕ್ಷಾಟನೆ ಹೆಚ್ಚಾಗುತ್ತಿರುವ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೩ (೮೬೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಪ್ರಮುಖ ನಗರಗಳಲ್ಲಿ ಭಿಕ್ಷಾಟನೆ ಮಾಡುವವರ ಸಂಖ್ಯೆ ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುವವರನ್ನು ತಡೆಹಿಡಿಯಲಾಗಿದೆಯೇ ; ಅವರಿಗೆ ಪರ್ಯಾಯವಾಗಿ ಯಾವ ಪರಿಹಾರವನ್ನು ನೀಡಲಾಗಿದೆ ;

(ಇ) ಕಳೆದ ೩ ವರ್ಷಗಳಿಂದ ಕೇಂದ್ರ ಪರಿಹಾರ ಕೇಂದ್ರಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಇವುಗಳನ್ನು ಯಾವ ಯಾವ ಕಾರ್ಯಗಳಿಗೆ ಬಳಸಿಕೊಳ್ಳಲಾಗಿದೆ ಹಾಗೂ ಸಂಗ್ರಹವಾಗುವ ಭಿಕ್ಷುಕರ ಸೆಸ್ ಹಣವನ್ನು ಭಿಕ್ಷುಕರ ಕ್ಷೇಮಾಭಿವೃದ್ಧಿ ಕಾರ್ಯಗಳನ್ನು ಹೊರತುಪಡಿಸಿ, ಬೇರೆ ಬೇರೆ ಕೆಲಸಗಳಿಗೆ ಬಳಸಿಕೊಳ್ಳಲು ನಿಯಮದಲ್ಲಿ ಅವಕಾಶವಿದೆಯೇ ? (ನಿಯಮದ ಪ್ರತಿಯನ್ನು ಒದಗಿಸುವುದು)

## ಜಿಬಿಎ, ಸೇರಿ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾದ ಭಿಕ್ಷಾಟನಾ ಉಪಕರದ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೪ (೮೬೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೂ ರಾಜ್ಯದ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಬಿಬಿಎಂಪಿ) ಸ್ಥಳೀಯ ಸಂಸ್ಥೆಗಳಿಂದ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯ್ತಿ) ಸಂಗ್ರಹಿಸಲಾಗಿರುವ ಭಿಕ್ಷಾಟನಾ ಉಪಕರಗಳ (ಸೆಸ್) ಹಣವೆಷ್ಟು ; (ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು)

(ಆ) ಸಂಗ್ರಹಿಸಲಾಗಿರುವ ಹಣವನ್ನು ಮೇಲ್ಕಂಡ ಸಂಸ್ಥೆಗಳಿಂದ ಪೂರ್ಣ ಪ್ರಮಾಣದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ವರ್ಗಾಯಿಸಲಾಗಿದೆಯೇ ; ಅಥವಾ ಬಾಕಿ ಉಳಿಸಿಕೊಳ್ಳಲಾಗಿದೆಯೇ ; ಎಷ್ಟು ಹಣ ಬಾಕಿ ಬರಬೇಕಾಗಿದೆ ;

(ಇ) ಬಾಕಿ ಉಳಿಸಿಕೊಂಡಿದ್ದಲ್ಲಿ ಯಾವ ಕಾರಣದಿಂದ ಬಾಕಿ ಉಳಿಸಿಕೊಳ್ಳಲಾಗಿದೆ ; ಇದರ ಜವಾಬ್ದಾರಿ ಯಾವ ಅಧಿಕಾರಿಗೆ ವಹಿಸಲಾಗಿದೆ ; ಇದುವರೆಗೂ ಯಾವ ಕ್ರಮ ತೆಗೆದುಕೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಂಥಾಲಯ ಇಲಾಖೆಯಲ್ಲಿ ಪುಸ್ತಕ ಖರೀದಿ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೫ (೮೬೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಂಥಾಲಯ ಇಲಾಖೆಯಲ್ಲಿ ಕಳೆದ ೩ ವರ್ಷದಿಂದ ಇಲ್ಲಿಯವರೆಗೆ ಎಷ್ಟು ಪುಸ್ತಕಗಳನ್ನು ಖರೀದಿಸಲಾಗಿದೆ ಹಾಗೂ ಪುಸ್ತಕದ ವಿವರಗಳನ್ನು ನೀಡುವುದು ;

(ಆ) ಖರೀದಿಸಲಾಗಿರುವ ಪುಸ್ತಕಗಳ ಒಟ್ಟು ಹಣವೆಷ್ಟು ; ಇದುವರೆಗೂ ಎಷ್ಟು ಹಣವನ್ನು ಪ್ರಕಾಶಕರಿಗೆ ಪಾವತಿಸಲಾಗಿದೆ ;

(ಇ) ಪುಸ್ತಕ ಖರೀದಿ ಮಾಡುವ ಸಂದರ್ಭದಲ್ಲಿ ಸರ್ಕಾರ ರೂಪಿಸಿರುವ ನೀತಿ ನಿಯಮಗಳೇನು ಹಾಗೂ ಎಷ್ಟು ದಿನಗಳ ಒಳಗೆ ಲೇಖಕರಿಗೆ ಅಥವಾ ಪ್ರಕಾಶಕರಿಗೆ ಹಣ ಪಾವತಿಸಬೇಕು ;

(ಈ) ೨೦೨೨ರಲ್ಲಿ ಗ್ರಂಥಾಲಯ ಇಲಾಖೆಯಿಂದ ಖರೀದಿಸಲಾದ ಪುಸ್ತಕಗಳಿಗೆ ಕೋಟ್ಯಂತರ ರೂಪಾಯಿಗಳನ್ನು ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ರಾಜ್ಯ ಗ್ರಂಥಾಲಯ ಪ್ರಾಧಿಕಾರದ ಖಾತೆಯಲ್ಲಿ ಎಷ್ಟು ಇಡುಗಂಟಿದೆ ಹಾಗೂ ಸ್ಥಳೀಯ ಸಂಸ್ಥೆಗಳು ಮತ್ತು ಬಿಬಿಎಂಪಿಯಿಂದ ವಸೂಲಿ ಮಾಡುತ್ತಿರುವ ಗ್ರಂಥಾಲಯ ಉಪಕರದ ಹಣವು ಸರ್ಕಾರಕ್ಕೆ

ಸಂದಾಯವಾಗುತ್ತಿದೆಯೇ ಹಾಗೂ ಬಾಕಿ ಇದ್ದಲ್ಲಿ ಎಷ್ಟು ವರ್ಷಗಳಿಂದ ಬಾಕಿ ಉಳಿಸಿಕೊಳ್ಳಲಾಗಿದೆ ? (ಪೂರ್ಣ ವಿವರ ಒದಗಿಸುವುದು)

## ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಬೆಲೆಬಾಳುವ ಭೂ ಒತ್ತುವರಿ ಆಗಿರುವ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೬ (೮೬೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಳೆಯ ವಿಶ್ವವಿದ್ಯಾಲಯಗಳಲ್ಲಿ ಒಂದಾಗಿರುವ ಬೆಂಗಳೂರು ವಿಶ್ವವಿದ್ಯಾಲಯದ ಕೋಟ್ಯಂತರ ರೂಪಾಯಿ ಬೆಲೆಬಾಳುವ ೮೩ ಎಕರೆ ಜಮೀನು ಒತ್ತುವರಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಸಂಸ್ಥೆಗಳು ಅಥವಾ ಸಾರ್ವಜನಿಕರು ಒತ್ತುವರಿ ಮಾಡಿಕೊಂಡಿದ್ದಾರೆ ಹಾಗೂ ಒತ್ತುವರಿ ಮಾಡಿಕೊಂಡಿರುವವರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಸರ್ಕಾರದ ದಾಖಲೆ ಪ್ರಕಾರ ವಿಶ್ವವಿದ್ಯಾಲಯವು ಎಷ್ಟು ಎಕರೆ ಜಮೀನು ಹೊಂದಿದೆ ಇರುವಂತಹ ಭೂಮಿಯನ್ನು ಯಾವ ಯಾವ ಶೈಕ್ಷಣಿಕ ಕಾರ್ಯ ಚಟುವಟಿಕೆಗಳನ್ನು ಕೈಗೊಂಡಿದೆ ;

(ಈ) ವಿಶ್ವವಿದ್ಯಾಲಯಗಳ ಒಡೆತನದ ಭೂಮಿಯನ್ನು ಎಷ್ಟು ಖಾಸಗಿ ಸಂಸ್ಥೆಗಳಿಗೆ ಹಾಗೂ ಸರ್ಕಾರಿ ಸಂಸ್ಥೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೀಡಲಾಗಿದೆ ; ಇವುಗಳಿಂದ ವಿಶ್ವವಿದ್ಯಾಲಯಕ್ಕೆ ಬರುತ್ತಿರುವ ಆದಾಯ ಎಷ್ಟು ?

# ಲೈಂಗಿಕ ದೌರ್ಜನ್ಯ ಸೇರಿ ಗಂಭೀರ ಪ್ರಕರಣಗಳ ಸಂತ್ರಸ್ಥರಿಗೆ ಪರಿಹಾರದ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೮೪೭ (೮೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷದ ಅವಧಿಯಲ್ಲಿ ಅತ್ಯಾಚಾರ, ಲೈಂಗಿಕ ದೌರ್ಜನ್ಯ, ಕೊಲೆ (ಅಮಾಯಕ ವ್ಯಕ್ತಿ) ಆಸಿಡ್ ದಾಳಿ, ಸೇರಿ ಕೆಲ ಗಂಭೀರ ಅಪರಾಧ ಪ್ರಕರಣಗಳಲ್ಲಿ ಸಂತ್ರಸ್ತರು ಅಥವಾ ಅವರ ಕುಟುಂಬದವರ ಸದಸ್ಯರಿಗೆ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ನೀಡಲಾಗಿರುವ ಪರಿಹಾರ ಮೊತ್ತ ವೆಷ್ಟು ;

(ಆ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೆ ಪ್ರಾಧಿಕಾರಕ್ಕೆ ದಾಖಲಾಗಿರುವ ಎಲ್ಲಾ ಪ್ರಕರಣಗಳಿಗೂ ಪರಿಹಾರ ನೀಡಲಾಗಿದೆಯೇ ;

(ಇ) ಪ್ರತಿಯೊಂದು ಪ್ರಕರಣಗಳಿಗೆ ಸರ್ಕಾರ ನಿಗದಿಪಡಿಸಿರುವ ಪರಿಹಾರಧನದ ಮೊತ್ತವೆಷ್ಟು ಹಾಗೂ ರಾಜ್ಯದಲ್ಲಿ ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ದೌರ್ಜನ್ಯಕ್ಕೊಳಗಾದ ಪ್ರಕರಣಗಳ ಸಂಖ್ಯೆ ಎಷ್ಟು ; ಇದರಲ್ಲಿ ಇತ್ಯಾರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಪ್ರಕರಣದ ಸಂಖ್ಯೆ ಎಷ್ಟು ;

(ಈ) ರಾಜ್ಯದಲ್ಲಿ ಸಂತ್ರಸ್ತ ಪರಿಹಾರ ಯೋಜನೆಯಡಿಯಲ್ಲಿ ಯಾವ ಯಾವ ಪ್ರಕರಣಗಳಿಗೆ ಪರಿಹಾರ ನೀಡಲಾಗುವುದು ; ಕಳೆದ ಮೂರು ವರ್ಷದಿಂದ ಪರಿಹಾರ ವಿತರಣೆಗಾಗಿ ರಾಜ್ಯ ಕಾನೂನು ಸೇವಾ ಪ್ರಾಧಿಕಾರಕ್ಕೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಉ) ದೌರ್ಜನ್ಯಕ್ಕೊಳಗಾದವರಿಗೆ ನೀಡುವ ಸಂತ್ರಸ್ತ ಪರಿಹಾರ ಯೋಜನೆ ನೆನೆಗುದಿಗೆ ಬಿದ್ದಿದ್ದು, ೪೫ ಕೋಟಿ ರೂಗೆ ಬೇಡಿಕೆ ಸಲ್ಲಿಸಿದರೇ ಸರ್ಕಾರ ಕೇವಲ ೧೦ ಕೋಟಿ ರೂ ಮಾತ್ರ ಬಿಡುಗಡೆ ಮಾಡಿರುವುದು ನಿಜವೇ ; ಆಗಿದ್ದಲ್ಲಿ ಸಂತ್ರಸ್ತರಿಗೆ ಪರಿಹಾರ ನೀಡುವ ಹಣ ನೀಡಲು ಸರ್ಕಾರಕ್ಕೆ ಇರುವ ತೊಂದರೆಯಾದರೂ ಏನು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಭಿವೃದ್ಧಿ ಮತ್ತು ಅತಿಥಿ ಉಪನ್ಯಾಸಕರ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೮೪೮ (೮೨೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಮಂಡ್ಯ ಮತ್ತು ಹಾಸನ ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ವಿವರವಾದ ಮಾಹಿತಿ ನೀಡುವುದು)

(ಆ) ಉನ್ನತ ಶಿಕ್ಷಣ ಇಲಾಖೆ ವತಿಯಿಂದ ಈ ನಾಲ್ಕು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ೨೦೨೩ನೇ ಸಾಲಿನಿಂದ ಇಲ್ಲಿಯವರೆಗೆ ನೀಡಿರುವ ಅನುದಾನ ಎಷ್ಟು ;

(ಇ) ಈ ನಾಲ್ಕು ಜಿಲ್ಲೆಗಳಲ್ಲಿ ಬರುವ ಪದವಿ ಕಾಲೇಜುಗಳಲ್ಲಿ ಹಲವಾರು ಮೂಲಭೂತ ಸೌಕರ್ಯಗಳ ಕೆಲಸ ಕಾರ್ಯಗಳನ್ನು ಮಾಡಬೇಕಾಗಿರುವುದರಿಂದ ಸರ್ಕಾರ ಇನ್ನು ಹೆಚ್ಚಿನ ಅನುದಾನವನ್ನು ನೀಡಲು ಯಾವ ಕ್ರಮವನ್ನು ಕೈಗೊಂಡಿದೆ ;

(ಈ) ಮೈಸೂರು, ಮಂಡ್ಯ ಮತ್ತು ಹಾಸನ, ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಪದವಿ ಕಾಲೇಜು ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ತಿಂಗಳಿಗೆ ವೇತನ ನೀಡಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಅನುದಾನ ನಿಡುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೮೪೯ (೮೨೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರೌಢಶಾಲಾ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ೨೦೨೩ನೇ ಸಾಲಿನಿಂದ ಇಲ್ಲಿಯವರೆಗೆ ನೀಡಿರುವ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಪೂರ್ಣ ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರಿ ಶಾಲಾ ಕಾಲೇಜುಗಳನ್ನು ಹೆಚ್ಚಿನ ರೀತಿಯಲ್ಲಿ ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಇವುಗಳ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?

## ಪ್ರೌಢಶಾಲೆ ಶಿಕ್ಷಕರು–ಮುಖ್ಯಶಿಕ್ಷಕರು ಮತ್ತು ಉಪನ್ಯಾಸಕರು, ಪ್ರಾಂಶುಪಾಲರುಗಳಿಗೆ ಸಕಾಲಕ್ಕೆ ಬಡ್ತಿ ನೀಡದಿರುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೮೫೦ (೮೨೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯ ಪ್ರೌಢ ಶಾಲಾ ಶಿಕ್ಷಕರು. ದೈಹಿಕ ಶಿಕ್ಷಕರು, ಮುಖ್ಯ ಶಿಕ್ಷಕರು ಹಾಗೂ ಉಪನ್ಯಾಸಕರು– ಪ್ರಾಂಶುಪಾಲರುಗಳಿಗೆ ಸಕಾಲಕ್ಕೆ ಸರ್ಕಾರ ನಿಯಮಾವಳಿಯ ರೀತ್ಯಾ ಅವಧಿಯೊಳಗೆ ಬಡ್ತಿಯನ್ನು ನೀಡಲಾಗುತ್ತಿದೆಯೇ ;

(ಆ) ಶಿಕ್ಷಣ ಇಲಾಖೆಯು ಈ ನೌಕರರಿಗೆ ಯಾವ ಯಾವ ಹುದ್ದೆಗಳಿಗೆ ನಿಗದಿತ ಅವಧಿಯೊಳಗೆ ಮುಂಬಡ್ತಿ ನೀಡಲಾಗಿದೆ ; (ಪೂರ್ಣ ವಿವರವಾದ ಮಾಹಿತಿ ನೀಡುವುದು)

(ಇ) ಶಾಲಾ ಶಿಕ್ಷಣ ಇಲಾಖೆ ನೌಕರರಿಗೆ ಬಡ್ತಿ ನೀಡಲು ಸರ್ಕಾರ ನಿಗದಿಪಡಿಸಿರುವ ನಿಯಮಾವಳಿಗಳ ಪ್ರಕಾರ ಎಷ್ಟು ತಿಂಗಳಿಗೊಮ್ಮೆ ಮುಂಬಡ್ತಿಯನ್ನು ನೀಡಬೇಕಿದೆ ;

(ಈ) ಈ ಮೇಲಿನ ಎಲ್ಲಾ ವರ್ಗದ ನೌಕರರಿಗೆ ಹಲವಾರು ಕಾರಣಗಳಿಂದ ಸರ್ಕಾರ ಮುಂಬಡ್ತಿ ನೀಡದೇ ನಿವೃತ್ತಿ ಹೊಂದಿದ ನೌಕರರ ಸಂಖ್ಯೆ ಎಷ್ಟು ? (ಕಳೆದ ೩ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

## ಪದವಿ ಪೂರ್ವ ಕಾಲೇಜುಗಳಲ್ಲಿ ಕೆಲವು ಜಿಲ್ಲೆಗಳಲ್ಲಿ ಅತಿಥಿ ಉಪನ್ಯಾಸಕರನ್ನು ಕಡಿಮೆ ನೇಮಕ ಮಾಡಿರುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೮೫೧ (೮೨೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಿಕ್ಷಣ ಇಲಾಖೆಯು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆಯಿಂದ ಎಷ್ಟು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲಾಗಿದೆ ಹಾಗೂ ಇವರಿಗೆ ನೀಡುತ್ತಿರುವ ವೇತನ ಎಷ್ಟು ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸರ್ಕಾರ ಪ್ರಸ್ತುತ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಕೊರತೆ ಕೆಲವು ಜಿಲ್ಲೆಗಳಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಶಾಲಾ ಶಿಕ್ಷಣ ಇಲಾಖೆಯು ಕೆಲವು ಜಿಲ್ಲೆಗಳಲ್ಲಿ ಅತಿಥಿ ಉಪನ್ಯಾಸಕರ ಸಂಖ್ಯೆ ಕಡಿಮೆ ನೇಮಕವಾಗಿರುವುದರಿಂದ ಇದನ್ನು ಸರಿಪಡಿಸಲು ಸರ್ಕಾರಿ ಯಾವ ಕ್ರಮವನ್ನು ಕೈಗೊಂಡಿದೆ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳಿಗೆ ಬಜೆಟ್‌ನಲ್ಲಿ ಮೀಸಲಿಟ್ಟ ಮತ್ತು ಬಿಡುಗಡೆಗೊಳಿಸಿದ ಅನುದಾನದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೨ (೮೧೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಯಾವುವು ; ಸದರಿ ನಿಗಮ ಮಂಡಳಿಗಳಲ್ಲಿ ಸಾರ್ವಜನಿಕರಿಗೆ ಲಭ್ಯವಿರುವ ಯೋಜನೆಗಳು ಯಾವುವು ; ಯೋಜನೆಗಳ ಉದ್ದೇಶಗಳೇನು ; ಯೋಜನೆಗಳನ್ನು ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಕಳೆದ ಮೂರು ಆರ್ಥಿಕ ವರ್ಷಗಳಿಂದ ಸದರಿ ನಿಗಮಗಳಿಗೆ ಬಜೆಟ್‌ನಲ್ಲಿ ಮೀಸಲಿಟ್ಟ ಮತ್ತು ಬಿಡುಗಡೆಗೊಳಿಸಿದ ಅನುದಾನವೆಷ್ಟು ವೆಚ್ಚವಾದ ಅನುದಾನವೆಷ್ಟು ; ಯಾವ ಯೋಜನೆಗಳಿಗೆ ಅನುದಾನವನ್ನು ಬಳಸಲಾಗಿದೆ ; ಯೋಜನೆಗಳಲ್ಲಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಆರ್ಥಿಕ ವರ್ಷಗಳಲ್ಲಿ ನಿಗಮದಲ್ಲಿ ಜಾರಿಯಲ್ಲಿರುವ ಯೋಜನೆಗಳಿಗೆ ನಿಗಧಿಪಡಿಸಿರುವ ಗುರಿಗಳೆಷ್ಟು ; ಗುರಿ ಮುಟ್ಟಲಾಗಿದೆಯೇ ; ನಿಗಧಿಪಡಿಸಿದ ಗುರಿಗಳಿಗನುಸಾರ ಆಯಾ ವರ್ಷಗಳಲ್ಲಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆಯೇ, ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಆಯ್ಕೆಯಾದ ವರ್ಷದಲ್ಲಿಯೇ ಸಹಾಯಧನ ಮುಟ್ಟಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ತಲುಪಿಸಿರುವುದಿಲ್ಲ ? (ಸಂಪೂರ್ಣ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲ್ಲಿ ಶುಚಿತ್ವದ ಕಿಟ್‌ಗಳ ವಿತರಣೆಯಲ್ಲಿ ಆಗುತ್ತಿರುವ ವಿಳಂಬದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೩ (೮೧೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ಜುಲೈ ೨೦೨೬ ಅಂತ್ಯದವರೆಗೆ ಸಾಲಿನಲ್ಲಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ನೀಡುವ ಶುಚಿತ್ವ ಕಿಟ್‌ಗಳು / ಇತರೆ ಕಿಟ್‌ಗಳು ಸರಿಯಾದ ಸಮಯದಲ್ಲಿ ವಿದ್ಯಾರ್ಥಿಗಳಿಗೆ ತಲುಪದಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದಲ್ಲಿ ತೆಗೆದುಕೊಂಡ ಕ್ರಮಗಳೇನು ; ವಿಳಂಬಕ್ಕೆ ಕಾರಣಗಳೇನು ; ಒಂದು ವೇಳೆ ವಿತರಿಸುವ ಹಂತದಲ್ಲಿದ್ದರೆ ಯಾವ ಸಮಯದಿಂದ ಕಿಟ್‌ಗಳನ್ನು ವಿತರಿಸಲಾಗುತ್ತದೆ ; (ತಿಂಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ಕಿಟ್‌ಗಳನ್ನು ನೀಡಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗುತ್ತಿದೆ ; ಏಪ್ರಿಲ್–೨೦೨೩ ರಿಂದ ಜುಲೈ ೨೦೨೬ ರವರೆಗೆ ಎಷ್ಟು ಮೊತ್ತವನ್ನು ಕಿಟ್‌ಗಳಿಗಾಗಿ ವೆಚ್ಚ ಮಾಡಲಾಗಿದೆ ; ಮೊತ್ತವನ್ನು ಯಾರಿಗೆ ಪಾವತಿಸಲಾಗಿದೆ ; ಕಿಟ್‌ನಲ್ಲಿ ಯಾವ ಯಾವ ವಸ್ತುಗಳನ್ನು ಸರಬರಾಜು ಮಾಡಲಾಗುತ್ತದೆ ; ಪ್ರತಿ ವಸ್ತುಗಳಿಗನುಗುಣವಾಗಿ ದರಗಳ ಪ್ರತ್ಯೇಕ ಮಾಹಿತಿ ನೀಡುವುದು ;

(ಈ) ಸದರಿ ವರ್ಷಗಳಲ್ಲಿ ವಸತಿ ಶಾಲೆಗಳಿಗೆ ಪಠ್ಯಪುಸ್ತಕಗಳನ್ನು ಹಾಗೂ ಇನ್ನಿತರ ವಿದ್ಯಾರ್ಥಿಗಳ ಉಪಯುಕ್ತ ವಸ್ತುಗಳನ್ನು ಸರಿಯಾದ ಸಮಯದಲ್ಲಿ ಸರಬರಾಜು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ದಾಖಲೆಗಳ ಸಮೇತ ಮಾಹಿತಿ ನೀಡುವುದು ; ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ವಿಳಂಬ ಮಾಡಲಾಗುತ್ತಿದೆ; ವಿಳಂಬ ಧೋರಣೆಯಿಂದ ಮಕ್ಕಳ ಶೈಕ್ಷಣಿಕ ಜೀವನಕ್ಕೆ ತೊಂದರೆ ಮಾಡಿದಂತಾಗುವುದಿಲ್ಲವೇ ?

# ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳಿಗೆ ಬಜೆಟ್‌ನಲ್ಲಿ ಮೀಸಲಿಟ್ಟ ಮತ್ತು ಬಿಡುಗಡೆಗೊಳಿಸಿದ ಅನುದಾನದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೪ (೮೧೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಯಾವುವು ; ಸದರಿ ನಿಗಮ ಮಂಡಳಿಗಳಲ್ಲಿ ಸಾರ್ವಜನಿಕರಿಗೆ ಲಭ್ಯವಿರುವ ಯೋಜನೆಗಳು ಯಾವುವು ; ಯೋಜನೆಗಳ ಉದ್ದೇಶಗಳೇನು ; ಯೋಜನೆಗಳನ್ನು ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳ ಆರ್ಥಿಕ (ಜುಲೈ೨೦೨೬ ಅಂತ್ಯದವರೆಗೆ) ಸಾಲಿನಲ್ಲಿ ಸದರಿ ನಿಗಮಗಳಿಗೆ ಬಜೆಟ್‌ನಲ್ಲಿ ಮೀಸಲಿಟ್ಟ ಮತ್ತು ಬಿಡುಗಡೆಗೊಳಿಸಿದ ಅನುದಾನವೆಷ್ಟು, ವೆಚ್ಚವಾದ ಅನುದಾನವೆಷ್ಟು, ಯಾವ ಯೋಜನೆಗಳಿಗೆ ಅನುದಾನವನ್ನು ಬಳಸಲಾಗಿದೆ ; ಯೋಜನೆಗಳಲ್ಲಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಆರ್ಥಿಕ ವರ್ಷಗಳಲ್ಲಿ ನಿಗಮದಲ್ಲಿ ಜಾರಿಯಲ್ಲಿರುವ ಯೋಜನೆಗಳಿಗೆ ನಿಗಧಿಪಡಿಸಿರುವ ಗುರಿಯೆಷ್ಟು; ಗುರಿ ಮುಟ್ಟಲಾಗಿದೆಯೇ ; ನಿಗಧಿಪಡಿಸಿದ ಗುರಿಗಳಿಗನುಸಾರ ಆಯಾ ವರ್ಷಗಳಲ್ಲಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆಯೇ ; ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಆಯ್ಕೆಯಾದ ವರ್ಷದಲ್ಲಿಯೇ ಸಹಾಯಧನ ಮುಟ್ಟಲಾಗಿದೆಯೇ ಇಲ್ಲದಿದ್ದಲ್ಲಿ ಯಾವ ಕಾರಣಕ್ಕಾಗಿ ತಲುಪಿಸಿರುವುದಿಲ್ಲ ? (ಸಂಪೂರ್ಣ ಮಾಹಿತಿ ನೀಡುವುದು)

# ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಹಣ ಪಾವತಿಯ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೫ (೮೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಆರ್ಥಿಕ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ನೋಂದಣಿ ಮಾಡಿಕೊಂಡಿರುವ ಎಲ್ಲಾ ಫಲಾನುಭವಿಗಳಿಗೆ ಹಣ ಪಾವತಿ ಮಾಡಲಾಗಿದೆಯೇ ; ಯೋಜನೆ ಪ್ರಾರಂಭದಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ಎಷ್ಟು ಮೊತ್ತ ಪಾವತಿ ಮಾಡಲಾಗಿದೆ ; (ತಿಂಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದ ಫಲಾನುಭವಿಗಳ ಸಂಖ್ಯೆ ಎಷ್ಟು ; ಸದರಿ ಫಲಾನುಭವಿಗಳಿಗೆ ಬಳಕೆಯಾದ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಸದರಿ ಯೋಜನೆಗೆ ಸೇರ್ಪಡೆ ಬಯಸಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಸಲ್ಲಿಕೆಯಾಗಿರುವ ಅರ್ಜಿಗಳನ್ನು ಅನುಮೋದನೆಗೊಳಿಸಲಾಗಿದೆಯೇ ; ಇಲ್ಲವಾದಲ್ಲಿ ಯಾವ ಕಾರಣಕ್ಕಾಗಿ ಯೋಜನೆಗೆ ಸೇರ್ಪಡೆಗೊಳಿಸಿರುವುದಿಲ್ಲ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಯೋಜನೆಯಲ್ಲಿ ನೋಂದಣಿಯಾದ ಫಲಾನುಭವಿಗಳಿಗೆ ಹಣ ಪಾವತಿ ಬಾಕಿಯಿರುವ ವಿಷಯು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ತಿಂಗಳಿನಿಂದ ಹಣ ಪಾವತಿ ಬಾಕಿ ಇರುತ್ತದೆ ; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ ; ಮತ್ತು ಬಾಕಿ ಉಳಿಸಿಕೊಂಡ ಹಣವನ್ನು ಪಾವತಿ ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಯಾವ ಮಾನದಂಡಗಳ ಆಧಾರದ ಮೇಲೆ ಗೃಹಲಕ್ಷ್ಮೀ ಯೋಜನೆಯನ್ನು ಪರಿಷ್ಕರಣೆ ಮಾಡಿ, ಪುನರ್ ಆಯ್ಕೆ ಮಾಡಲಾಗುತ್ತಿದೆ ?

## ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಾಹೀರಾತು ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಮಾಡಿರುವ ವೆಚ್ಚಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೬ (೮೧೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಆರ್ಥಿಕ ೨೦೨೪–೨೫, ೨೦೨೫–೨೬ ಮತ್ತು ೨೦೨೬–೨೭ ಸಾಲಿನಲ್ಲಿ (ಜುಲೈ–೨೦೨೬ ಅಂತ್ಯದವರೆಗೆ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪತ್ರಿಕೆ ಮತ್ತು ಟಿ.ವಿ ಮಾಧ್ಯಮಗಳಲ್ಲಿ ಜಾಹೀರಾತು, ಜಯಂತಿ ಕಾರ್ಯಕ್ರಮಗಳ ಆಚರಣೆ, ದಸರಾ ಉತ್ಸವ ಆಚರಣೆ ಹಾಗೂ ಇನ್ನಿತರ ಎಲ್ಲಾ ಕಾರ್ಯಕ್ರಮಗಳಿಗೆ ಮೀಸಲಿಟ್ಟ, ಬಿಡುಗಡೆಗೊಳಿಸಿದ ಹಾಗೂ ವೆಚ್ಚ ಮಾಡಿದ ಅನುದಾನವೆಷ್ಟು ; ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಆರ್ಥಿಕ ವರ್ಷದಲ್ಲಿ ಪತ್ರಿಕೆ ಮತ್ತು ಟಿ.ವಿ ಮಾಧ್ಯಮಗಳಲ್ಲಿ ಜಾಹೀರಾತು, ಜಯಂತಿ ಕಾರ್ಯಕ್ರಮಗಳ ಆಚರಣೆ, ದಸರಾ

ಉತ್ಸವ ಆಚರಣೆ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಖರ್ಚಾದ ಅನುದಾನವನ್ನು ಯಾವ ಏಜೆನ್ಸಿಗೆ /ಕಂಪನಿಗೆ/ ಇತರರಿಗೆ ಯಾವ ದಿನಾಂಕದಂದು ಎಷ್ಟು ಮೊತ್ತವನ್ನು ಪಾವತಿಸಲಾಗಿದೆ ; ಯಾವ ಇಲಾಖೆಯ ಮೂಲಕ ಪಾವತಿಸಲಾಗಿದೆ ; ವೆಚ್ಚ ಮಾಡಿದ ಅನುದಾನದಲ್ಲಿ ಕೈಗೊಂಡ ಕಾರ್ಯಕ್ರಮಗಳೇನು ? (ಸಂಪೂರ್ಣ ವಿವರಗಳ ಕುರಿತು ವರ್ಷವಾರು ಮಾಹಿತಿ ನೀಡುವುದು)

## ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳ ಬಗ್ಗೆ

**ಶ್ರೀ ಕೆ. ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೭ (೯೪೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದ ಅಧೀನದಲ್ಲಿ ಬರುವ ವಿಶ್ವವಿದ್ಯಾಲಯಗಳು ಎಷ್ಟು ; (ವಿಶ್ವವಿದ್ಯಾಲಯಗಳ ವಿವರ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಮತ್ತು ಉಪನ್ಯಾಸಕೇತರರ ಸಂಖ್ಯೆ ಎಷ್ಟು ; ಇದರಲ್ಲಿ ಖಾಯಂ ನೌಕರರ ಮತ್ತು ಗುತ್ತಿಗೆ ಆಧಾರದಲ್ಲಿ ಹಾಗೂ ಅತಿಥಿ ಉಪನ್ಯಾಸಕರು ಎಷ್ಟು ; (ಪ್ರತಿ ವಿಶ್ವವಿದ್ಯಾಲಯಗಳ ವಿವರ ಒದಗಿಸುವುದು)

(ಇ) ಖಾಲಿ ಇರುವ ಉಪನ್ಯಾಸಕರ ಮತ್ತು ಉಪನ್ಯಾಸಕೇತರರ ಹುದ್ದೆಗಳನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಿಕೊಳ್ಳುತ್ತದೆ ?

## ಶಿಕ್ಷಣ ಇಲಾಖೆಯಲ್ಲಿ ನೆಡೆದಿರುವ ಪೋಕ್ಸೊ ಪ್ರಕರಣಗಳ ಬಗ್ಗೆ

**ಶ್ರೀ ಕೆ. ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೮ (೯೪೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಇದುವರೆವಿಗೂ ಎಷ್ಟು ಶಿಕ್ಷಕರ ವಿರುದ್ಧ ಪೋಕ್ಸೊ ಕೇಸ್ ದಾಖಲಾಗಿದೆ ; (ಜಿಲ್ಲಾವಾರು ಪೋಕ್ಸೊ ಶಾಲೆ ಮತ್ತು ಶಿಕ್ಷಕರ ವಿವರ ಒದಗಿಸುವುದು)

(ಆ) ಈ ಗಂಭೀರ ಪ್ರಕರಣದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇದುವರೆಗೂ ಎಷ್ಟು ಪ್ರಕರಣಗಳನ್ನು ಸರ್ಕಾರದ ವಕೀಲರು ಗೆದ್ದಿರುತ್ತಾರೆ, ಹಾಗೂ ಎಷ್ಟು ಶಿಕ್ಷಕರಿಗೆ ಶಿಕ್ಷೆಯಾಗಿದೆ ;

(ಈ) ಈ ರೀತಿಯ ಪ್ರಕರಣಗಳು ಪುನರಾವರ್ತನೆಯಾಗದಂತೆ ತಡೆಯಲು ಸರ್ಕಾರ ಯಾವ ಕ್ರಮಕೈಗೊಂಡಿದೆ ; ಸದರಿ ಶಿಕ್ಷಕರುಗಳನ್ನು ವಜಾ ಮಾಡಿರುವ ಉದಾಹರಣೆಗಳು ಇದೆಯೇ ? (ಆದೇಶದೊಂದಿಗೆ ವಿವರ ಒದಗಿಸುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹಿರಿಯ ನಾಗರೀಕರ ಸಬಲೀಕರಣಕ್ಕಾಗಿ ಇರುವ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೯ (೯೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿರಿಯ ನಾಗರೀಕರ ಸಬಲೀಕರಣಕ್ಕಾಗಿ ಸರ್ಕಾರ ಹಾಕಿಕೊಂಡಿರುವ ಯೋಜನೆಗಳು ಯಾವುವು ;

(ಆ) ಸದರಿ ಜಿಲ್ಲೆಗಳಲ್ಲಿ ಆಸರೆ ಇಲ್ಲದೆ ಸಂಕಷ್ಟದಲ್ಲಿರುವ ಹಿರಿಯ ನಾಗರೀಕರ ಸಂಖ್ಯೆ ಎಷ್ಟು ; ಇವರುಗಳಿಗೆ ಸಹಾಯ ಮಾಡಲು ಇರುವ ಕಾರ್ಯಕ್ರಮಗಳೇನು ; ಇದುವರೆಗೂ ಎಷ್ಟು ಹಿರಿಯ ನಾಗರೀಕರು ಇದರ ಸಹಾಯ ಪಡೆಯುತ್ತಿದ್ದಾರೆ ; ಇವರಿಗೋಸ್ಕರ ಸರ್ಕಾರ ವಾರ್ಷಿಕ ಎಷ್ಟು ಹಣ ಖರ್ಚು ಮಾಡುತ್ತಿದೆ ;

(ಇ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಸಂಧ್ಯಾ ಸುರಕ್ಷಾ ಯೋಜನೆಯಡಿ ಎಷ್ಟು ಜನ ವಯೋವೃದ್ಧರಿಗೆ ಮಾಶಾಸನ ನೀಡಲಾಗುತ್ತಿದೆ ; ಹಾಗೂ ನೀಡುತ್ತಿರುವ ಮಾಶಾಸನ ಎಷ್ಟು ; ಸಂಧ್ಯಾ ಸುರಕ್ಷಾ ಯೋಜನೆಯಡಿ ಮಾಶಾಸನ ನೀಡಲು ಸರ್ಕಾರ ನಿಗದಿಪಡಿಸಿರುವ ಮಾನದಂಡವೇನು ; ಹಾಗೂ ಇದಕ್ಕಾಗಿ ವಾರ್ಷಿಕ ಎಷ್ಟು ಅನುದಾನವನ್ನು ಮೀಸಲಿಡಲಾಗುತ್ತಿದೆ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ಇಲಾಖೆಯಡಿಯಲ್ಲಿ ಬರುವ ವಸತಿ ನಿಲಯಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೦ (೯೧೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಸದರಿ ವಸತಿ ನಿಲಯಗಳಲ್ಲಿ ಎಷ್ಟು ಕಟ್ಟಡಗಳು ಖಾಸಗಿ ಹಾಗೂ ಸರ್ಕಾರಿ ಕಟ್ಟಡಗಳಿವೆ ; ಖಾಸಗಿ ಕಟ್ಟಡದಲ್ಲಿ ವಸತಿ ನಿಲಯಗಳನ್ನು ನಡೆಸುತ್ತಿರುವುದಕ್ಕೆ ಮಾಸಿಕ ಎಷ್ಟು ಬಾಡಿಗೆ ಪಾವತಿಸಲಾಗುತ್ತಿದೆ ;

ಸದರಿ ವಸತಿ ನಿಲಯಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮಾಸಿಕ ಪ್ರತಿ ವಿದ್ಯಾರ್ಥಿಗೆ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ ; ಹಾಗೂ ನೀಡುವ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಈ ಮೇಲ್ಕಂಡ ಜಿಲ್ಲೆಗಳಿಗೆ ಕಳೆದ ೩ ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾದ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಈ ವಸತಿ ನಿಲಯಗಳಲ್ಲಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಗುಣಮಟ್ಟದ ಪೌಷ್ಠಿಕ ಆಹಾರ ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಕಲಬುರಗಿ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೧ (೯೧೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ನಡೆಯುತ್ತಿರುವ ವಸತಿ ನಿಲಯುಗಳಲ್ಲಿ ಬೆಡ್ ಹಾಗೂ ಮಂಚಗಳಿಲ್ಲದೆ ವಿದ್ಯಾರ್ಥಿಗಳು ನೆಲದ ಮೇಲೆ ಮಲಗಿಕೊಳ್ಳುವ ಸ್ಥಿತಿ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಲಬುರಗಿ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಸತಿ ನಿಲಯಗಳಿಗೆ ಬೆಡ್, ಕಾಟ್, ಆರ್‌ಓ ಫಿಲ್ಟರ್, ಸಿಸಿ ಕ್ಯಾಮರ, ಸ್ಟಡಿ ಚೇರ್, ಟಿ.ವಿ ಹೈಮಾಸ್ಟ್ ಲೈಟ್ ಇನ್ನಿತರೆ

ಮೂಲ ಸೌಲಭ್ಯಗಳ ಅವಶ್ಯಕತೆಯಿರುವುದಾಗಿ ಸಂಬಂಧಪಟ್ಟ ಅಧಿಕಾರಿಗಳಿಂದ ಸರ್ಕಾರಕ್ಕೆ ಬೇಡಿಕೆ ಬಂದಿರುವುದು ನಿಜವೆ; (ಪ್ರತಿ ನೀಡುವುದು) ಬೇಡಿಕೆಗೆ ಇದುವರೆಗೂ ಸ್ಪಂದಿಸದಿರಲು ಕಾರಣವೇನು ಮತ್ತು ಯಾವ ಕಾಲಮಿತಿಯೊಳಗೆ ವಸತಿ ನಿಲಯಗಳಿಗೆ ಮೂಲ ಸೌಕರ್ಯಗಳ ಸೌಲಭ್ಯ ನೀಡಲಾಗುವುದು ;

(ಇ) ಕಲಬುರಗಿ ಜಿಲ್ಲೆಗೆ ಹೊಸದಾಗಿ ವಸತಿ ನಿಲಯಗಳನ್ನು ಮಂಜೂರು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಎಷ್ಟು ವಸತಿ ನಿಲಯಗಳನ್ನು ಮಂಜೂರು ಮಾಡಲಾಗಿದೆ ಹಾಗೂ ಎಲ್ಲೆಲ್ಲಿ ವಸತಿ ನಿಲಯಗಳನ್ನು ನಿರ್ಮಿಸಲು ಯೋಚಿಸಲಾಗಿದೆ ? (ವಿವರ ನೀಡುವುದು)

## ಶ್ರೇಷ್ಠ ಗಾಯನ ಕಲಾವಿದೆ ದಿ.ಅಮೀರ್ ಬಾಯಿ ಕರ್ನಾಟಕಿ ಅವರ ಹೆಸರಿನಲ್ಲಿ ನೃತ್ಯ ಸಂಗೀತ ಶಾಲೆ ಆರಂಭಿಸುವ ಕುರಿತು

**ಶ್ರೀ ಪಿ. ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೬೨ (೯೦೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಬಿಳಗಿ ತಾಲ್ಲೂಕಿನ ದಿ.ಅಮೀರ್ ಬಾಯಿ ಕರ್ನಾಟಕಿ ೧೯೩೦ ರಿಂದ ೧೯೬೦ ರವರೆಗೆ ಕನ್ನಡ, ಮರಾಠಿ, ಗುಜರಾತಿ ಸೇರಿದಂತೆ ನೂರಾರು ಚಲನಚಿತ್ರಗಳಲ್ಲಿ ಅಭಿನಯಿಸಿ ಮತ್ತು ಗಾಯನದಿಂದ ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಂಡ ಶ್ರೇಷ್ಠ ಕಲಾವಿದೆ ; ಇಂತಹ ಅದ್ವಿತೀಯ ಕಲಾವಿದೆಯನ್ನು ಇದುವರೆಗೂ ಸೂಕ್ತವಾಗಿ ಗುರುತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂತಹ ಅದ್ವಿತೀಯ ಕಲಾವಿದೆಯ ಸಾಧನೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಸರ್ಕಾರವು ದಿವಂಗತ ಅಮೀರ್ ಬಾಯಿ ಕರ್ನಾಟಕಿ ಇವರ ಹೆಸರಿನಲ್ಲಿ ಚಲನಚಿತ್ರ ರಂಗದಲ್ಲಿ ಪ್ರಶಸ್ತಿ ನೀಡಲು ತೀರ್ಮಾನಿಸಲಾಗಿದೆಯೇ ; (ವಿವರ ನೀಡುವುದು)

(ಇ) ಇವರ ಸ್ಮರಣಾರ್ಥ ಬಿಳಗಿಯಲ್ಲಿ ದಿ.ಅಮೀರ್ ಬಾಯಿ ಕರ್ನಾಟಕಿ ನೃತ್ಯ ಸಂಗೀತ ಶಾಲೆ ಆರಂಭಿಸಲು ಸಾರ್ವಜನಿಕರು ಒತ್ತಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕ್ರಮ ವಹಿಸಲಾಗುವುದೇ ?

## ಅಳಿವಿನಂಚಿನಲ್ಲಿರುವ ಚಿಂಕಾರ ಪ್ರಭೇದ ಪ್ರಾಣಿಗಳಿಂದ ರೈತರಿಗೆ ಉಂಟಾಗುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ಕುರಿತು

**ಶ್ರೀ ಪಿ. ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೬೩ (೯೦೭) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಳಿವಿನಂಚಿನಲ್ಲಿರುವ ಚಿಂಕಾರ ಪ್ರಭೇದ ಪ್ರಾಣಿಗಳನ್ನು ರಕ್ಷಿಸಲು ಸರ್ಕಾರವು ೨೦೧೫ ರಲ್ಲಿ ಎಡ ಹಳ್ಳಿ ಚಿಂಕಾರ ರಕ್ಷಿತಾರಣ್ಯ ಎಂದು ಘೋಷಣೆ ಮಾಡಿ ಚಿಂಕಾರ ಪ್ರಾಣಿಗಳ ಸಂರಕ್ಷಿಸಲು ಕೈಗೊಂಡಿರುವ ಕ್ರಮವು ಸರಿಯಷ್ಟೇ ; ಆದರೆ ಸದರಿ ಅರಣ್ಯ ಪ್ರದೇಶವು ಬೀಳಗಿ ಹಾಗೂ ಮುಧೋಳ ತಾಲ್ಲೂಕಿನ ವ್ಯಾಪ್ತಿಯನ್ನು ಒಳಗೊಂಡಿದ್ದು, ಪ್ರಾಣಿ ಸಂರಕ್ಷಣೆಯೊಂದಿಗೆ ಸಾರ್ವಜನಿಕರ ಸಮಸ್ಯೆಗಳಿಗೂ ಧ್ವನಿ ಆಗುವಂತೆ ಸರ್ಕಾರ ಮಾರ್ಗಸೂಚಿ ಹೊರಡಿಸಿದ್ದರೂ, ಅಧಿಕಾರಿಗಳ ನಿರ್ಲಕ್ಷ್ಯತೆಯಿಂದ ರಕ್ಷಿತಾರಣ್ಯದ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಮತ್ತು ರೈತರಿಗೂ ಉಂಟಾಗುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಪ್ರಾಣಿಗಳ ರಕ್ಷಣೆಯೊಂದಿಗೆ ರೈತರು ಹಾಗೂ ಸಾರ್ವಜನಿಕರೂ ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸುವ ಬಗ್ಗೆ

**ಶ್ರೀ ಪಿ. ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೬೪ (೯೦೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಪದವಿ ಪೂರ್ವ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಲ್ಲಿನ ಸರ್ಕಾರಿ ಮತ್ತು ಖಾಸಗಿ ಪದವಿ ಪೂರ್ವ ವಿದ್ಯಾಲಯಗಳಲ್ಲಿನ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಜಿಲ್ಲಾವಾರು, ವರ್ಷವಾರು ಪ್ರತ್ಯೇಕವಾಗಿ ನೀಡುವುದು ;

(ಆ) ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಬಾಗಲಕೋಟೆ–ವಿಜಯಪುರ ಜಿಲ್ಲೆಯ ವಿವರವನ್ನು ತಾಲ್ಲೂಕುವಾರು ಹಾಗೂ ವರ್ಷವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿನ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯಗಳಲ್ಲಿನ ಉಪನ್ಯಾಸಕರ ಕೊರತೆ, ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾತಿಯನ್ನು ಪಡೆಯುತ್ತಿದ್ದಾರೆ ಎಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಕಡಿಮೆ ದಾಖಲಾತಿಗೆ ಕಾರಣವೇನು ; ಹೆಚ್ಚು ದಾಖಲಾತಿ ಮಾಡಿಸಲು ಸರ್ಕಾರದ ಕಾರ್ಯಕ್ರಮಗಳೇನು ?

# ರಾಜ್ಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಪಿ. ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೬೫ (೯೦೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿರುವುದು ಸರಿಯಷ್ಟೇ ; ಆದರೆ ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಶುಲ್ಕ ಮರುಪಾವತಿ, ವಿದ್ಯಾಸಿರಿ, ಅಲೆಮಾರಿ, ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಪಡೆಯಲು ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; ಅರ್ಹತೆ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಮಾಹಿತಿಯನ್ನು ಜಿಲ್ಲಾವಾರು ಪ್ರತ್ಯೇಕವಾಗಿ ನೀಡುವುದು)

(ಆ) ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಬಾಗಲಕೋಟೆ ಜಿಲ್ಲೆಯ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು ; ನಿಗದಿತ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಜಮೆ ಆಗದೇ ಇರುವುದರಿಂದ ವಿದ್ಯಾರ್ಥಿಗಳು ಸಂಬಂಧಪಟ್ಟ ತಾಲ್ಲೂಕು ಹಾಗೂ ಜಿಲ್ಲಾ ಕಛೇರಿಗಳಿಗೆ ಅಲೆದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿದ್ಯಾರ್ಥಿ ವೇತನ ಯಾವಾಗ ಬಿಡುಗಡೆ ಮಾಡಲಾಗುವುದು ?

# ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಮುಂಬಡ್ತಿಗೆ ಪರಿಗಣಿಸುವ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೬೬ (೯೫೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಆದೇಶ ಸಂಖ್ಯೆ:ಡಿ.ಪಿ.ಎ.ಆರ್.೧೨೬ ಎಸ್.ಡಿ.ಆರ್.೮೨ ದಿನಾಂಕ:೨೪.೧೧.೧೯೮೨ ಹಾಗೂ ಕರ್ನಾಟಕ ಸರ್ಕಾರದ ಸಚಿವಾಲಯ ಸುತ್ತೋಲೆ ಸಂಖ್ಯೆ: ಎಸ್.ಡಬ್ಲ್ಯು.ಪಿ/೨೧/ ಎಸ್.ಎಲ್.ಪಿ/೨೦೨೪ (ಪಿ-೧) ದಿನಾಂಕ:೩೦.೦೯.೨೦೨೪ರಂತೆ ಮುಂಬಡ್ತಿಯಲ್ಲಿ ೫ ಕನಿಷ್ಠ ೩ ವರ್ಷ ಸೇವೆ ಸಲ್ಲಿಸಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಲಭ್ಯವಿದ್ದಲ್ಲಿ ಕನಿಷ್ಠ ೩ ವರ್ಷ ಸೇವೆ ಸಲ್ಲಿಸಿರುವ ಅಭ್ಯರ್ಥಿಗಳನ್ನು ಮುಂಬಡ್ತಿಗೆ ಪರಿಗಣಿಸಲು ಆದೇಶವಿದ್ದರೂ ಸಹ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯವರು ಇದುವರೆವಿಗೂ ಈ ಆದೇಶವನ್ನು ಪಾಲನೆ ಮಾಡದೇ ಇರುವುದಕ್ಕೆ ಕಾರಣವನ್ನು ತಿಳಿಸುವುದು ;

(ಆ) ಇದರಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ಮತ್ತು ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## DPSE ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಶಿಕ್ಷಕರ ನೇಮಕಾತಿ ಮಾಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೭ (೯೪೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) DPSE ಅರ್ಹತೆ ಹೊಂದಿರುವ ಅಭ್ಯರ್ಥಿಗಳಗೆ ಸರ್ಕಾರಿ LKG ಹಾಗೂ UKG ಶಿಕ್ಷಕರ ನೇಮಕಾತಿಯನ್ನು ಯಾವಾಗ ಪ್ರಾರಂಭಿಸಲಾಗುವುದು ; ರಾಜ್ಯದ ಶಾಲೆಗಳ ಸರ್ಕಾರಿ ತರಗತಿಗಳಿಗೆ DPSE ತರಬೇತಿ ಪಡೆದ ಶಿಕ್ಷಕರ ನೇಮಕಾತಿ ಮಾಡುವ ಕುರಿತು ಸರ್ಕಾರದ ನಿರ್ಧಾರಗಳೇನು ; (ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ DPSE (Diploma in Pre-school Education) ಕೋರ್ಸ್‌ಗೆ C&R ನಿಯಮಗಳನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ಜಾರಿಗೆ ತರಲಿದೆ ;

(ಇ) DPSE ಸರ್ಕಾರವು ವಿಶೇಷವಾಗಿ ಪೂರ್ವ–ಪ್ರಾಥಮಿಕ ಶಿಕ್ಷಕರಿಗಾಗಿ ಸರ್ಕಾರವೇ ರೂಪಿಸಿರುವ ಕೋರ್ಸ್ ಆಗಿದ್ದರೂ ಅದರ ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಮಾಡಿಲ್ಲದಿರುವುದರ ಕಾರಣವೇನು ; ಉದ್ಯೋಗಾವಕಾಶ ಇಲ್ಲವಾದ ಮೇಲೆ ಈ ಕೋರ್ಸ್‌ನ ಅವಶ್ಯಕತೆ ಇದೆಯೇ ; (ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) DPSE ಉತ್ತೀರ್ಣರಾಗಿರುವ ಸಾವಿರಾರು ಅಭ್ಯರ್ಥಿಗಳಿಗೆ ಭವಿಷ್ಯದ ಕುರಿತು ಸರ್ಕಾರದ ಸ್ಪಷ್ಟ ಯೋಜನೆ ಏನು ? (ಮಾಹಿತಿ ಒದಗಿಸುವುದು)

## ಬಳ್ಳಾರಿ ನಗರದ ಪ್ರಾಚೀನ ಕೋಟೆ ಅನೈತಿಕ ಚಟುವಟಿಕೆಗಳ ತಾಣವಾಗಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೮ (೯೪೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬಳ್ಳಾರಿ ನಗರದ ಏಕಶಿಲಾ ಬೆಟ್ಟದ ಐತಿಹಾಸಿಕ ಪ್ರಾಚೀನ ಕೋಟೆ ಪ್ರವಾಸಿ ತಾಣವು ಅನೈತಿಕ ಚಟುವಟಿಕೆ ತಾಣವಾಗಿರುವುದು ಮತ್ತು ಸೂಕ್ತ ಭದ್ರತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಭಿವೃದ್ಧಿ, ಮೂಲಭೂತ ಸೌಕರ್ಯ ಹಾಗೂ ಸೂಕ್ತ ಭದ್ರತೆ ಒದಗಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಿದೆ ?

## ಪರಿಸರ ಸೂಕ್ಷ್ಮ ಪ್ರದೇಶದ ವ್ಯಾಪ್ತಿಯಲ್ಲಿನ ಜನರ ದೈನಂದಿನ ಚಟುವಟಿಕೆಗಳಿಗೆ ತೊಂದರೆ ಆಗಿರುವ ಕುರಿತು

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೮೬೯ (೯೧೯) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಸರ ಸೂಕ್ಷ್ಮ ಪ್ರದೇಶವನ್ನು ಈಗಾಗಲೇ ನಿಗದಿಪಡಿಸಲಾಗಿದೆಯೇ ; ನಿಗದಿಪಡಿಸಲಾಗಿರುವ ಪರಿಸರ ಸೂಕ್ಷ್ಮ ಪ್ರದೇಶದ ವಿಸ್ತೀರ್ಣವೆಷ್ಟು ಹಾಗೂ ಸದರಿ ವ್ಯಾಪ್ತಿಯಲ್ಲಿ ಬರುವ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮಗಳ ಸಂಖ್ಯೆ ಎಷ್ಟು ; ಹಾಗೂ ಸದರಿ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಜನಸಂಖ್ಯೆ ಎಷ್ಟು ;

(ಆ) ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಣೆ ಮಾಡಿದರೆ, ಆ ಪ್ರದೇಶದಲ್ಲಿ ಭವಿಷ್ಯದಲ್ಲಿ ರಸ್ತೆ, ಕುಡಿಯುವ ನೀರು ಸೇರಿದಂತೆ

ಅತ್ಯಂತ ಅಗತ್ಯವಾದ ಮೂಲಸೌಕರ್ಯಗಳ ಅಭಿವೃದ್ಧಿ ಯೋಜನೆಗಳನ್ನು ಕೈಗೆತ್ತಿಗೊಳ್ಳಲು ಸಾಧ್ಯವಿಲ್ಲ, ಕೃಷಿ ಚಟುವಟಿಕೆಗಳಿಗೂ ತೊಂದರೆಯಾಗುವುದರ ಜೊತಗೆ ಸದರಿ ವ್ಯಾಪ್ತಿಯಲ್ಲಿ ವಾಸಿಸುವ ಜನರ ಆರ್ಥಿಕ ಮತ್ತು ಸಾಮಾಜಿಕ ಜೀವನದ ಮೇಲೆ ನಕಾರಾತ್ಮಕ ಪರಿಣಾಮ ಬೀರುವ ಆತಂಕ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿರುವ ವ್ಯಾಪ್ತಿಯಲ್ಲಿ ನಿಷೇಧಿಸಿರುವ ಚಟುವಟಿಕೆಗಳಾವುವು ಹಾಗೂ ಯಾವ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸಲಾಗಿದೆ ;

(ಈ) ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿದರೆ ಸದರಿ ವ್ಯಾಪ್ತಿಯ ಗ್ರಾಮಗಳಲ್ಲಿರುವ ಲಕ್ಷಾಂತರ ಜನರಿಗೆ ಭಾರಿ ತೊಂದರೆಯಾಗುತ್ತದೆ ಮತ್ತು ಅವರ ಮೂಲ ನೆಲೆಗಳಲ್ಲಿ ಅವರನ್ನೇ ಬಲವಂತವಾಗಿ ಅತಂತ್ರ ಸ್ಥಿತಿಗೆ ದೂಡಿದಂತಾಗುತ್ತಿದ್ದು ಇದನ್ನು ತಪ್ಪಿಸಲು ಸರ್ಕಾರ ವಹಿಸಲಿರುವ ಕ್ರಮಗಳೇನು ;

(ಉ) ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿರುವ ಬಹುತೇಕ ಪ್ರದೇಶವನ್ನು ಅರಣ್ಯ ಸಂರಕ್ಷಣೆ ಕಾಯ್ದೆಯಡಿ ಈಗಾಗಲೇ ಸಂರಕ್ಷಣೆ ಮಾಡಲಾಗುತ್ತಿದ್ದು, ಈ ರೀತಿಯಲ್ಲಿ ಹೆಚ್ಚುವರಿ ನಿರ್ಬಂಧಗಳನ್ನು ಹೇರಿದಲ್ಲಿ ಜನರನ್ನು ಅನವಶ್ಯಕವಾಗಿ ಸಂಕಷ್ಟಕ್ಕೆ ದೂಡಿದಂತಾಗುವುದು, ಇದನ್ನು ತಪ್ಪಿಸಲು ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇ ?

## ಬಫರ್‌ಜೋನ್ ವ್ಯಾಪ್ತಿಯ ಕುರಿತು

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೦ (೯೨೦) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಮುಖ ರಕ್ಷಿತಾರಣ್ಯ ಪ್ರದೇಶಗಳಿಗೆ ನಿಗದಿಪಡಿಸಿರುವ ಬಫರ್‌ಜೋನ್‌ನ ವ್ಯಾಪ್ತಿಯೆಷ್ಟು ; (ಪ್ರತಿ ಅರಣ್ಯಕ್ಕೆ ನಿಗದಿಪಡಿಸಿರುವ ಬಫರ್‌ಜೋನ್‌ನ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಎಲ್ಲಾ ರಕ್ಷಿತಾರಣ್ಯಗಳಿಗೂ ಬಫರ್‌ಜೋನ್ ವ್ಯಾಪ್ತಿಯನ್ನು ಏಕಪ್ರಕಾರವಾಗಿ ನಿಗದಿಪಡಿಸಲಾಗಿದೆಯೇ ; ಅಥವಾ ಅರಣ್ಯದಿಂದ ಅರಣ್ಯಕ್ಕೆ ವ್ಯತ್ಯಾಸವಿದೆಯೇ ; ಸದರಿ ಬಫರ್‌ಜೋನ್ ಅನ್ನು ಯಾವ ಆಧಾರದ ಮೇಲೆ ನಿಗದಿಪಡಿಸಲಾಗಿದೆ ಮತ್ತು ಬಫರ್‌ಜೋನ್ ವ್ಯಾಪ್ತಿಯು ನಿಗದಿಗೆ ಅನುಸರಿಸಿರುವ ಅಳತೆಗೋಲು, ಮಾನದಂಡ ಮತ್ತು ಮಾರ್ಗಸೂಚಿಗಳೇನು ;

(ಇ) ಬಫರ್‌ಜೋನ್ ವ್ಯಾಪ್ತಿಯ ಪ್ರದೇಶದಲ್ಲಿ ಅನುಮತಿಸಬಹುದಾದ ಮತ್ತು ಅನುಮತಿಸಲಾರದ ಚಟುವಟಿಕೆಗಳು ಯಾವುವು ;

(ಈ) ರಾಜ್ಯದಲ್ಲಿರುವ ಭದ್ರಾ ಬಂಡಿಪುರ ಮತ್ತು ನಾಗರಹೊಳೆ ಅಭಯಾರಣ್ಯಗಳ ಗಡಿಯ ಅಂಚಿನಿಂದ ಎಷ್ಟು ವ್ಯಾಪ್ತಿಗೆ/ ದೂರದವರೆಗೆ ಬಫರ್‌ಜೋನ್ ನಿಗದಿಗೊಳಿಸಲಾಗಿದೆ ;

(ಉ) ಭದ್ರಾ, ಬಂಡೀಪುರ ಮತ್ತು ನಾಗರಹೊಳೆ ಅಭಯಾರಣ್ಯಗಳ ಬಫರ್‌ಜೋನ್‌ನ ವ್ಯಾಪ್ತಿಯ ಹೆಚ್ಚಿರುವ ಕಾರಣ ಸದರಿ ಪ್ರದೇಶದಲ್ಲಿ ವಾಸಿಸುವ ಜನರ ಸಾಮಾಜಿಕ ಮತ್ತು ಆರ್ಥಿಕ ಜೀವನ ವ್ಯವಸ್ಥೆಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಬಫರ್‌ಜೋನ್ ವ್ಯಾಪ್ತಿಯನ್ನು ಕಡಿಮೆ ಮಾಡಲು ಅಥವಾ ಬಫರ್‌ಜೋನ್ ವಲಯದಲ್ಲಿ ಆರ್ಥಿಕ ಚಟುವಟಿಕೆಗಳಿಗೆ ಅನುಮತಿ ನೀಡಲು ಸರ್ಕಾರ ಉದ್ದೇಶಿಸಿದೆಯೇ ; ಉದ್ದೇಶಿಸಿದ್ದರೆ ಯಾವ ಪ್ರಕಾರದ ಚಟುವಟಿಕೆಗಳಿಗೆ ಅನುಮತಿ ನೀಡಲಾಗುವುದು ;

(ಊ) ಬಫರ್‌ಜೋನ್ ಅನ್ನು ಅವೈಜ್ಞಾನಿಕ ಅತಾರ್ಕಿಕವಾಗಿ ನಿಗದಿಪಡಿಸಿರುವ ಕಾರಣದಿಂದಾಗಿ ಸದರಿ ವಲಯದಲ್ಲಿರುವ ನಿವಾಸಿಗಳು ಮತ್ತು ಕೃಷಿಕರು ತೊಂದರೆಗೆ ಸಿಲುಕಿದ್ದು, ಅವುಗಳು ಸ್ವತಂತ್ರವಾಗಿ ಸ್ವಾಲಂಬನೆಯಿಂದ ಮತ್ತು ಗೌರವಯುತ ಬದುಕು ಸಾಗಿಸುವ ವಾತಾವರಣ ಕಲ್ಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

**ಜ್ಯೋತಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-54/500 ಪ್ರತಿಗಳು/19–08–2026